ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೩

## ಪಟ್ಟಿ – ೨೧

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ: ೧೫ನೇ ಜುಲೈ, ೨೦೧೬**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ಸಣ್ಣ ಕೈಗಾರಿಕೆ ಸಚಿವರು.

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೬. ಸಾರಿಗೆ ಸಚಿವರು.

೭. ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು.

---

## ಅತಿಥಿ ಉಪನ್ಯಾಸಕರುಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫ (೨೬೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಎಷ್ಟು ಅತಿಥಿ ಉಪನ್ಯಾಸಕರುಗಳು ಸೇವೆ ಸಲ್ಲಿಸುತ್ತಿದ್ದಾರೆ ; (ವಿಷಯವಾರು ವಿವರ ನೀಡುವುದು)

(ಆ) ಈ ಅತಿಥಿ ಉಪನ್ಯಾಸಕರುಗಳು ಕಳೆದ ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ; (ಮಾಹಿತಿ ನೀಡುವುದು)

(ಇ) ಈ ಅತಿಥಿ ಉಪನ್ಯಾಸಕರುಗಳಿಗೆ ಮಾಸಿಕ ವೇತನ ಸಕಾಲದಲ್ಲಿ ಲಭ್ಯವಾಗದೇ ಕುಟುಂಬ ನಿರ್ವಹಣೆಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಈ) ಈ ಅತಿಥಿ ಉಪನ್ಯಾಸಕರುಗಳು ತಮ್ಮ ಬೇಡಿಕೆಗಳ ಬಗ್ಗೆ ದೀರ್ಘ ಮುಷ್ಕರ ಹೂಡಿ ಸರ್ಕಾರದ ಗಮನ ಸೆಳೆದಿರುವುದು ನಿಜವೆ; ಹಾಗಿದ್ದಲ್ಲಿ, ಸರ್ಕಾರ ಅವರಿಗೆ ಸಾಮಾಜಿಕ ನ್ಯಾಯ ಒದಗಿಸಲು ಚಿಂತಿಸಿದೆಯೇ;

(ಉ) ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ, ವೇತನ, ಇತರೆ ಸೌಲಭ್ಯ ನೀಡಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಶೌಚಾಲಯದ ನಿರ್ಮಾಣಕ್ಕೆ ಅನುದಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೪೦ (೨೬೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ S.B.M. ಯೋಜನೆಯಡಿ ವೈಯುಕ್ತಿಕ ಶೌಚಾಲಯ ನಿರ್ಮಾಣ ಕಾರ್ಯವು ರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದಿರುವುದು ನಿಜವೆ ; ಹಾಗಿದ್ದಲ್ಲಿ, ತಾಲ್ಲೂಕುವಾರು ವಿವರ ನೀಡುವುದು ;

(ಆ) ಮದ್ದೂರು ತಾಲ್ಲೂಕು ಬೀದರ್‌ಕೋಟೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ವೈಯುಕ್ತಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ ; (ಗ್ರಾಮವಾರು ಫಲಾನುಭವಿಗಳ ವಿವರ ನೀಡುವುದು)

(ಇ) ಬೀದರ್‌ಕೋಟೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಡಿ.ಹೊಸಹಳ್ಳಿ ಗ್ರಾಮದಲ್ಲಿ ಕಳೆದ ೩ ವರ್ಷಗಳಲ್ಲಿ ವೈಯುಕ್ತಿಕ ಶೌಚಾಲಯಗಳನ್ನು ನಿರ್ಮಿಸಿದ್ದರೂ ಸದರಿ ಶೌಚಾಲಯಗಳಿಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಡಿ.ಹೊಸಹಳ್ಳಿ ಗ್ರಾಮದ ಸುಮಾರು ೪೦ ಬಡಕುಟುಂಬಗಳು ಶೌಚಾಲಯಗಳನ್ನು ನಿರ್ಮಿಸಿಕೊಂಡಿದ್ದರೂ ಸಹ P.D.O.ರ ನಿರ್ಲಕ್ಷ್ಯತನದಿಂದಾಗಿ ಅನುದಾನ ಬಿಡುಗಡೆಯಲ್ಲಿ ಅನಗತ್ಯ ವಿಳಂಬವಾಗಿರುವುದು ನಿಜವೇ; ಇದಕ್ಕೆ ಕಾರಣರಾದ P.D.O. ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಸದರಿ ೪೦ ಕುಟುಂಬಗಳಿಗೆ ಶೌಚಾಲಯ ನಿರ್ಮಾಣಕ್ಕಾಗಿ ಅನುದಾನವನ್ನು ನಿರ್ದಿಷ್ಟ ಅವಧಿಯೊಳಗೆ ಬಿಡುಗಡೆ ಮಾಡಲಾಗುವುದೇ ; ಹಾಗಿದ್ದಲ್ಲಿ ಕಾಲಮಿತಿ ಎಷ್ಟು ? (ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆಯ ಗಣಿಗಾರಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೪೧ (೨೬೧೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಗಣಿಗಾರಿಕೆಗಳು ಚಾಲ್ತಿಯಲ್ಲಿವೆ ; ಇವುಗಳಲ್ಲಿ ಅಧಿಕೃತ ಹಾಗೂ ಅನಧಿಕೃತ ಗಣಿಗಾರಿಕೆಗಳೆಷ್ಟು; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಅನಧಿಕೃತ ಗಣಿಗಾರಿಕೆಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಮಂಡ್ಯ ಜಿಲ್ಲೆಯಲ್ಲಿ ಗಣಿಗಾರಿಕೆ ನಿರ್ವಹಿಸುತ್ತಿರುವವರ ವಿಳಾಸ ಮತ್ತು ಲೈಸನ್ಸ್‌ನೊಂದಿಗೆ ತಾಲ್ಲೂಕುವಾರು ವಿವರ ನೀಡುವುದು;

(ಈ) ಮಂಡ್ಯ ಜಿಲ್ಲೆಯಲ್ಲಿನ ಅಕ್ರಮ ಗಣಿಗಾರಿಕೆಯನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆಯ ಕೈಗಾರಿಕೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೪೨ (೨೬೧೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಹಾಲಿ ಇರುವ ಕೈಗಾರಿಕೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೈಗಾರಿಕೆಗಳಲ್ಲಿ ಉತ್ಪಾದಿಸುವ ವಸ್ತುಗಳ ವಿವರ ನೀಡುವುದು;

(ಇ) ಇದರಿಂದಾಗಿ ಮಂಡ್ಯ ಜಿಲ್ಲೆಯ ಸ್ಥಳೀಯ ಎಷ್ಟು ಜನ ನಿರುದ್ಯೋಗಿ ಯುವಕರುಗಳಿಗೆ ಹಾಗೂ ಯುವತಿಯರಿಗೆ ಉದ್ಯೋಗ ದೊರಕಿದೆ ;

(ಈ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಮಾಹಿತಿ ನೀಡುವುದು;

(ಉ) ಮಂಡ್ಯ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಸಾಕಷ್ಟು ನೈಸರ್ಗಿಕ ಅನುಕೂಲವಿರುವುದರಿಂದ ಹೊಸದಾಗಿ ಕೈಗಾರಿಕೆಗಳನ್ನು ಪ್ರಾರಂಭಿಸಿ ಮಂಡ್ಯ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪ್ರೌಢಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೩೪೩ (೨೬೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಸ್ಥಗಿತಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಸದರಿ ಪ್ರಕ್ರಿಯೆಯು ಶೀಘ್ರಗತಿಯಲ್ಲಿ ಜಾರಿಗೊಳಿಸಲು ಸರ್ಕಾರ ಮುಂದಾಗುವುದೇ; ಇದ್ದರೆ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸುವುದು ;

(ಇ) ಪ್ರೌಢಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ "ಕಾಲ್ಪನಿಕ ವೇತನ ಜಾರಿ" ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೩೪೪ (೨೬೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ "ಕಾಲ್ಪನಿಕ ವೇತನ ಜಾರಿ" ಮಾಡುವ ನಿಟ್ಟಿನಲ್ಲಿ ಶ್ರೀ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ತಿನ ಸದಸ್ಯರನ್ನು ಒಳಗೊಂಡ ಸಮಿತಿಯನ್ನು ನೇಮಕ ಮಾಡಿ ಈ ಸಮಿತಿಯಿಂದ ವರದಿ ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದರೆ, ಸಮಿತಿ ರಚನೆ ಮಾಡಲು ಕಾರಣಗಳೇನು ;

(ಆ) ಸದರಿ ಸಮಿತಿ ನೀಡಿರುವ ಶಿಫಾರಸ್ಸಿನ ಮುಖ್ಯ ಅಂಶಗಳೇನು; (ವಿವರ ನೀಡುವುದು)

(ಇ) ಸರ್ಕಾರಕ್ಕೆ ಸದರಿ ಸಮಿತಿ ನೀಡಿರುವ ವರದಿ ಜಾರಿ ಮಾಡಲು ಇರುವ ತೊಂದರೆಗಳೇನು ; ವಿವರ ನೀಡುವುದು ;

(ಈ) ಸರ್ಕಾರಕ್ಕೆ ಈ ನಿಟ್ಟಿನಲ್ಲಿ ಆರ್ಥಿಕವಾಗಿ ಹೊರೆಯಾಗುವ ಮೊತ್ತವೆಷ್ಟು; ಸೇವೆಗೆ ನೇಮಕಾತಿ ಆದ ದಿನಾಂಕದಿಂದ ಆಗಿರುವ ಮೊತ್ತವೆಷ್ಟು ಹಾಗೂ ಅನುದಾನಕ್ಕೆ ಒಳಪಟ್ಟ ದಿನಾಂಕದಿಂದ ಆಗಿರುವ ಮೊತ್ತದ ಪ್ರಮಾಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸಿರುವ ವಿಶ್ವವಿದ್ಯಾಲಯಗಳು ಮತ್ತು ನ್ಯಾಕದಲ್ಲಿರುವ ಮಾನದಂಡಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

൨൩൪൫ (൨൬൮൯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸಿರುವ ವಿಶ್ವವಿದ್ಯಾಲಯಗಳು ಯಾವುವು ಹಾಗೂ ನ್ಯಾಕ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳು ಯಾವುವು ; ನ್ಯಾಕ ಮಾನ್ಯತೆ ಪಡೆಯಲು ಇರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳು ಉನ್ನತ ಗ್ರೇಡ್ ಪಡೆಯಲು ವಿಫಲವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಒದಗಿಸಿದಂತಹ ಅನುದಾನ ಎಷ್ಟು ಮತ್ತು ಯಾವ ಯಾವ ಯೋಜನೆ/ ಕಾರ್ಯಕ್ರಮಗಳಿಗೆ ನೀಡಲಾಗಿದೆ ಹಾಗೂ ಯಾವ ಯೋಜನೆ/ಕಾರ್ಯಕ್ರಮಗಳು ಅನುಷ್ಠಾನಗೊಂಡಿವೆ? (ಸಂಪೂರ್ಣ ವಿವರ ನೀಡುವುದು)

# ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪೂರ್ಣಾವಧಿ ಸಂಶೋಧನಾ ವಿದ್ಯಾರ್ಥಿಗಳ ಶಿಷ್ಯ ವೇತನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೨೩೪೬ (೨೬೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪೂರ್ಣಾವಧಿ ಸಂಶೋಧನಾ (Full Time Ph.d) ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವರ್ಗಾವಾರು (ಜಾತಿ) ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಪೂರ್ಣಾವಧಿ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಬೋಧನಾ ಶುಲ್ಕ ರಿಯಾಯಿತಿ ನೀಡಲಾಗುತ್ತಿದೆಯೇ; (ಇದ್ದರೆ ವರ್ಗವಾರು (ಜಾತಿ) ಸಂಪೂರ್ಣ ಮಾಹಿತಿ ನೀಡುವುದು) ;

(ಇ) ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಪೂರ್ಣಾವಧಿ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಬೋಧನಾ ಶುಲ್ಕ ರಿಯಾಯಿತಿ ಮಂಜೂರಾಗದೆ ಇದ್ದು, ವಿದ್ಯಾರ್ಥಿಗಳು ಸಂಕಷ್ಟದಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು;

(ಈ) ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿ ವರ್ಗ ಸೇರಿದ ಪೂರ್ಣಾವಧಿ ಸಂಶೋಧನಾ ವಿದ್ಯಾರ್ಥಿಯೊಬ್ಬರು (ಶ್ರೀ ರಾಘವೇಂದ್ರ ಎಸ್. ಚಿಂಚನಸೂರ ಶಾಂತಿನಗರ, ಕಲಬುರಗಿ) ಶಿಷ್ಯವೇತನ ಹಾಗೂ ಬೋಧನಾ ಶುಲ್ಕ ರಿಯಾಯಿತಿ ನೀಡುವಂತೆ ಕೋರಿ ಮನವಿ ಸಲ್ಲಿಸಿದ್ದು, ಇಲ್ಲಿಯವರೆಗೆ ಶಿಷ್ಯವೇತನ ಹಾಗೂ ಬೋಧನಾ ಶುಲ್ಕ ರಿಯಾಯಿತಿ ಮಂಜೂರಾಗದೆ ಇರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಕ್ರಮ ವಹಿಸಲಾಗುವುದು ? (ವಿವರ ನೀಡುವುದು)

## ಕಂಪ್ಯೂಟರ್ ಶಿಕ್ಷಣ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):-**

೨೩೪೭ (೨೫೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ೧೫೭೧ ಸರ್ಕಾರಿ ಪ್ರೌಢಶಾಲೆ ಮತ್ತು ೭೦೮ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ICT ಫೇಸ್-II ಕಂಪ್ಯೂಟರ್ ಶಿಕ್ಷಣ ಯೋಜನೆ ಸ್ಥಗಿತಗೊಂಡು ಗ್ರಾಮೀಣ ಪ್ರದೇಶದ ಲಕ್ಷಾಂತರ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ICT ಫೇಸ್-II ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಮುಂದುವರೆಸುವಂತೆ ೨೦೧೨ ರಿಂದ ೨೦೧೬ರ ವರೆಗೂ ಮಾನ್ಯ ಮುಖ್ಯಮಂತ್ರಿಗಳಿಗೆ, ಶಿಕ್ಷಣ ಇಲಾಖೆ ಮುಖ್ಯಸ್ಥರಿಗೆ, ಸಚಿವರು, ಶಾಸಕರು, ಸಂಘ ಸಂಸ್ಥೆಗಳು ಹಾಗೂ ಪೋಷಕ ವರ್ಗದವರು ಲಿಖಿತವಾಗಿ ಸಲ್ಲಿಸಿರುವ ಮನವಿಯ (ಹೆಸರು ಮತ್ತು ದಿನಾಂಕ) ವಿವರ ನೀಡುವುದು ;

(ಇ) ICT ಫೇಸ್-II ಕಂಪ್ಯೂಟರ್ ಶಿಕ್ಷಣ ಯೋಜನೆಯನ್ನು ಮುಂದುವರೆಸುವ ವಿಚಾರದಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಸಚಿವರು, ಶಾಸಕರು, ಸಂಘ ಸಂಸ್ಥೆಗಳವರು, ಪೋಷಕ ವರ್ಗದವರು ನೀಡಿರುವ ಲಿಖಿತ ಶಿಫಾರಸ್ಸು/ ಮನವಿಗಳಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ೨೦೧೬-೧೭ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಯಾವ ಯಾವ ಶಾಲೆಗಳಲ್ಲಿ ICT @ ಗಣಕ ಶಿಕ್ಷಣ ಜಾರಿಗೆ ಬಂದಿದೆ ; (ಜಿಲ್ಲಾವಾರು ಶಾಲೆಗಳ ಮತ್ತು ಶಿಕ್ಷಕರ ವಿವರ ನೀಡುವುದು)

(ಉ) ICT ಫೇಸ್-II ಕಂಪ್ಯೂಟರ್ ಶಿಕ್ಷಣ ಯೋಜನೆಯಲ್ಲಿ ೪-೫ ವರ್ಷಗಳಿಂದ ಸತತವಾಗಿ ಅತ್ಯಲ್ಪ ವೇತನಕ್ಕೆ ಕಾರ್ಯನಿರ್ವಹಿಸಿ ವಯಸ್ಸು ಮೀರಿ ತುಂಬಾ ಸಂಕಷ್ಟದಲ್ಲಿರುವ ನಿರುದ್ಯೋಗಿ ಆಗಿರುವ ಕಂಪ್ಯೂಟರ್ ಶಿಕ್ಷಕರನ್ನು ಸರ್ಕಾರವು ಮಾನವೀಯತೆ ದೃಷ್ಟಿಯಿಂದ ICT @ ಗಣಕ ಶಾಲೆ / ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ಪುನರ್ ನೇಮಕಕ್ಕೆ ಪರಿಗಣಿಸಲಾಗುತ್ತದೆಯೇ; ಈ ಬಗ್ಗೆ ಸರ್ಕಾರ ಯಾವುದಾದರೂ ಕ್ರಮ ವಹಿಸಿದೆಯೇ ? (ವಿವರ ನೀಡುವುದು)

## ಕುಮಾರ್ ನಾಯಕ್ ವರದಿಯ ಅನುಷ್ಠಾನದ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):-**

೨೩೪೮ (೨೬೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಸಿಬ್ಬಂದಿ ವರ್ಗದ ವೇತನ ತಾರತಮ್ಯ ಕುರಿತು ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳುವುದಾಗಿ ಸರ್ಕಾರ ನೀಡಿದ ಭರವಸೆಯನ್ನು ಯಾವಾಗ ಜಾರಿಗೊಳಿಸಲಾಗುವುದು ;

(ಆ) ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ;

(ಇ) ಕುಮಾರ್ ನಾಯಕ್ ವರದಿಯನ್ನು ಆಧಾರವಾಗಿಟ್ಟುಕೊಂಡು ವೇತನ ತಾರತಮ್ಯ ಸರಿಪಡಿಸಲು ಅಗತ್ಯವಾದ ವಾರ್ಷಿಕ ಅಂದಾಜು ಮೊತ್ತವೆಷ್ಟು ; ಇದರ ಸಂಪೂರ್ಣ ವಿವರ ನೀಡಿ;

(ಈ) ಯಾವ ಸಮಯದೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು?

## ಶಾಲಾ/ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ನೀತಿ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೨೩೪೯ (೨೬೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ವಿವಿಧ ಇಲಾಖೆಗಳ ಅಡಿ ಬರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರದ ನೀತಿ ಏನು; ಪ್ರಸಕ್ತ ಯಾವ ಯಾವ ಇಲಾಖೆಯಿಂದ ಶಾಲಾ ಕಾಲೇಜುಗಳಿಗೆ ಅನುದಾನ ಕೋರಿ ಬಂದಿರುವ ಪ್ರಸ್ತಾವನೆಗಳಿಗಾಗಿ ಸಂಪುಟ ಉಪ ಸಮಿತಿ ರಚಿಸಿ ಪರಿಶೀಲಿಸಲಾಗುತ್ತಿದೆ ; (ಪ್ರತಿಯೊಂದರ ವಿವರ ನೀಡುವುದು)

(ಆ) ೧೯೮೭ ರಿಂದ ೧೯೯೫ರ ಮಧ್ಯದಲ್ಲಿ ಆರಂಭಿಸಿರುವ ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ನೀತಿ ಏನು; ಈ ನಿಟ್ಟಿನಲ್ಲಿ ಸರ್ಕಾರ ಎದುರಿಸುತ್ತಿರುವ ಸಮಸ್ಯೆ ಏನು;

(ಇ) ಸರ್ಕಾರಿ ನೌಕರರಿಗೂ ಅನುದಾನಿತ ಸಿಬ್ಬಂದಿಗೂ ಹಲವಾರು ಹಣಕಾಸು ಸೌಲಭ್ಯಗಳಲ್ಲಿ ಹಾಗೂ ಸೇವಾ ಸೌಲಭ್ಯಗಳಲ್ಲಿ ವ್ಯತ್ಯಾಸಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರದ ಕ್ರಮ ಏನು?

(ಈ) ೧೯೯೫ರ ನಂತರ ಆರಂಭವಾಗಿರುವ ಇಲ್ಲಿಯವರೆಗಿನ ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸುವ ದೃಷ್ಟಿಯಿಂದ ಸರ್ಕಾರದ ಚಿಂತನೆ ಹಾಗೂ ಕ್ರಮ ಏನು ?

## ಜ್ಯೋತಿ ಸಂಜೀವಿನಿ ಯೋಜನೆಯು ಅನುದಾನಿತ ಹಾಗೂ ಅನುದಾನ ರಹಿತ ಶಿಕ್ಷಕರಿಗೂ ವಿಸ್ತರಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೨೩೫೦ (೨೬೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಹಾಗೂ ಅನುದಾನ ರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ "ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸುವ ಕುರಿತು ಸರ್ಕಾರಕ್ಕೆ ಈ ಹಿಂದೆ ಸದನದಲ್ಲಿ ಒತ್ತಾಯಿಸಲಾಗಿತ್ತೇ; ಈ ಕುರಿತು ಬಂದಿರುವ ಮನವಿಗಳ ಸಂಖ್ಯೆ ಎಷ್ಟು ;

(ಆ) ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಇರುವ ಅಡೆತಡೆಗಳೇನು ; ಈ ಅಡೆತಡೆಗಳನ್ನು ಸರಿಪಡಿಸಿ ಈ ವ್ಯಾಪ್ತಿಗೆ ಶಿಕ್ಷಕರನ್ನು ಒಳಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು?

## ಬೋಧಕ ಸಿಬ್ಬಂದಿ ನೇಮಕ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫೧ (೨೫೦೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೩–೦೪ ರಿಂದ ಪ್ರಾರಂಭವಾದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ ವಿಜಯಪುರದಲ್ಲಿ ಎಷ್ಟು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ನೇಮಕಗೊಂಡಿರುತ್ತಾರೆ, ಹಾಗೂ ಇದರಲ್ಲಿ ಎಷ್ಟು ಜನರನ್ನು ಖಾಯಂ ಹಾಗೂ ತಾತ್ಕಾಲಿಕವಾಗಿ ಅಥವಾ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ ; (ವಿವರ ನೀಡುವುದು)

(ಆ) ೨೦೦೩–೦೪ ರಿಂದ ಪ್ರಾರಂಭವಾದ ಸದರಿ ವಿಶ್ವವಿದ್ಯಾಲಯದಲ್ಲಿ ಎಷ್ಟು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳನ್ನು ಖಾಯಂ ಮಾಡುವ ಅಥವಾ ನೇಮಕ ಮಾಡಿಕೊಳ್ಳುವ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ? (ಮಾಹಿತಿ ನೀಡುವುದು)

## ‘‘ಮರಳು ನೀತಿ’’ಯಿಂದಾಗಿ ಗ್ರಾಮಪಂಚಾಯತ್‌ಗಳ ಕಾಮಗಾರಿಗಳು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫೨ (೨೫೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಗಳಿಂದ ಆಯ್ಕೆಯಾದ ಶೌಚಾಲಯ ಹಾಗೂ ವಸತಿ ಮನೆಗಳು, ಗ್ರಾಮ ಪಂಚಾಯತ್ ಸಿವಿಲ್ ಕೆಲಸಗಳು ‘‘ಮರಳು ನೀತಿ’’ಯಿಂದಾಗಿ ಪ್ರಗತಿ ಸಾಧಿಸುವಲ್ಲಿ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಮಟ್ಟದಲ್ಲಿ ಯಾವ ಕ್ರಮ ಜರುಗಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಶೌಚಾಲಯ, ವಸತಿ ಮನೆ, ಗ್ರಾಮ ಪಂಚಾಯತ್ ಕೆಲಸಗಳಿಗಾಗಿ ಗ್ರಾಮ ಪಂಚಾಯತ್‌ದಿಂದ ಮರಳು ಪರವಾನಗಿ ಪತ್ರ ನೀಡಲು ಅವಕಾಶವಿಲ್ಲವೆ; ಅವಕಾಶವಿದ್ದರೆ, ಸರ್ಕಾರದ ನಿಯಮಗಳೇನು; (ವಿವರವಾದ ಮಾಹಿತಿ ನೀಡುವುದು) ಶೌಚಾಲಯ, ವಸತಿ ಮನೆಗಳಿಗೆ ಮರಳು ಪಡೆಯಲು ಲೊಕೋಪಯೋಗಿ ಇಲಾಖೆಯಿಂದ ಅನುಮತಿ ಪಡೆಯಬೇಕೆಂದರೆ ಜಿ.ಪಿ.ಎಸ್. ಇರುವ ವಾಹನಗಳನ್ನು ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಈ ಜಿ.ಪಿ.ಎಸ್. ವಾಹನಗಳನ್ನು ಬಡ ಜನರು ತರಲು ಸಾಧ್ಯವೇ? (ಮಾಹಿತಿ ನೀಡುವುದು)

## ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿನ ತೆರಿಗೆ ದರದ ವಿವರದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫೩ (೨೫೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಿಂದ ಡಿಮ್ಯಾಂಡ್ ಪುಸ್ತಕದನ್ವಯ ಇಲ್ಲಿಯವರೆಗೆ ವಸೂಲಿಯಾಗಬೇಕಿರುವ ಬಾಕಿ ತೆರಿಗೆಯ ಮೊತ್ತ ಎಷ್ಟು ; ರಾಜ್ಯದಲ್ಲಿ ತೆರಿಗೆ ಪಾವತಿಯ ದರವನ್ನು ಯಾವ ಮಾನದಂಡದ ಆಧಾರದ ಮೇಲೆ ನಿಗದಿಪಡಿಸಲಾಗುತ್ತಿದೆ, ಈ ನಿಟ್ಟಿನಲ್ಲಿ ತೆರಿಗೆ ವಸೂಲಿ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಏಕರೂಪ ತೆರಿಗೆ ದರ ಇದೆಯೇ, ಇದ್ದಲ್ಲಿ, ವರ್ಗವಾರು ತೆರಿಗೆಯ ವಿವರಗಳನ್ನು ನೀಡುವುದು ?

## ಗ್ರಾಮ ಪಂಚಾಯತ್ ಅಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫೪ (೨೫೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಬಿಡುಗಡೆ ಮಾಡುವ ಅಭಿವೃದ್ಧಿ ಯೋಜನೆ ಅನುದಾನದಲ್ಲಿ ಶೇ. ೪೦ ರಷ್ಟು ಅನುದಾನ ಹೊರತುಪಡಿಸಿ ಇನ್ನುಳಿದ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯಿತಿಗೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಆ) ಕಂದಾಯ ಇಲಾಖೆಯಲ್ಲಿ ರೈತರ ಜಮೀನುಗಳ ಉತಾರೆಗಳನ್ನು ಏಕಕಾಲದಲ್ಲಿ ಗಣಕೀಕೃತ ಮಾಡಿದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳ (ಮನೆ/ಖುಲ್ಲಾ) ಉತಾರೆಗಳನ್ನು ಏಕಕಾಲದಲ್ಲಿ ಗಣಕೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ?

## ದಿನಾಂಕ ೦೧-೦೬-೧೯೮೭ರ ನಂತರ ಪ್ರಾರಂಭವಾದ ಖಾಸಗಿ ಪಾಲಿಟೆಕ್ನಿಕ್‌ಗಳನ್ನು ವೇತನಾನುದಾನಕ್ಕೆ ಒಳಪಡಿಸುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೩೫೫ (೨೪೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಯಾವ ದಿನಾಂಕದವರೆಗೆ ಪ್ರಾರಂಭವಾದ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಿ ಆದೇಶಿಸಿದೆ;

(ಆ) ರಾಜ್ಯದಲ್ಲಿ ದಿನಾಂಕ ೦೧-೦೬-೧೯೮೭ರ ನಂತರ ಪ್ರಾರಂಭವಾಗಿ ೧೫ ವರ್ಷಗಳ ಅಸ್ತಿತ್ವವನ್ನು ಪೂರ್ಣಗೊಳಿಸಿದ ಖಾಸಗಿ ಪಾಲಿಟೆಕ್ನಿಕ್ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೧೫ ವರ್ಷಗಳ ಅಸ್ತಿತ್ವವನ್ನು ಪೂರ್ಣಗೊಳಿಸಿದ ಖಾಸಗಿ ಪಾಲಿಟೆಕ್ನಿಕ್‌ಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳನ್ನು ಯವ ಕಾಲಮಿತಿಯೊಳಗೆ ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದು?

# ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮುಂದುವರೆಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೩೫೬ (೨೪೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ನಡವಳಿ ಸಂ: ಇಡಿ/೬೪೪/ಪಿಬಿಎಸ್/೨೦೧೦, ಬೆಂಗಳೂರು ದಿನಾಂಕ ೦೧-೦೪-೨೦೧೧ರ ಪ್ರಕಾರ ಸರ್ಕಾರಿ ಪ್ರಾಥಮಿಕ ಶಾಲೆಗಳ ಹುದ್ದೆಗಳನ್ನು ಗುರುತಿಸಲು ನಿರ್ಧಿಷ್ಟ ಮಾನದಂಡಗಳನ್ನು ಜಾರಿಗೊಳಿಸಿದ್ದು, ಅದರನ್ವಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ೨೦೦ ಕ್ಕಿಂತ ಹೆಚ್ಚು ಮಕ್ಕಳಿದ್ದಲ್ಲಿ ಮಾತ್ರ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಮುಂದುವರೆಸಲು ಅವಕಾಶ ಕಲ್ಪಿಸಿರುವುದು ನಿಜವೇ ;

(ಆ) ಡಾ॥ ಎಲ್.ಆರ್. ವೈದ್ಯನಾಥನ್ ವರದಿಯನ್ವಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಣವನ್ನು ಕಡ್ಡಾಯಗೊಳಿಸಿ ದೈಹಿಕ ಶಿಕ್ಷಣವನ್ನು ಪಠ್ಯವಿಷಯವನ್ನಾಗಿ ನಿಗಧಿಪಡಿಸಿದ್ದು, ೨೦೦ಕ್ಕಿಂತ ಕಡಿಮೆ ಮಕ್ಕಳಿರುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಸ್ಥಳಾಂತರಗೊಳಿಸುತ್ತಿರುವುದರಿಂದ, ಮಕ್ಕಳು ದೈಹಿಕ ಶಿಕ್ಷಣದಿಂದ ವಂಚಿತರಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಇ) ಈ ಸಮಸ್ಯೆಗೆ ಸರ್ಕಾರ ತೆಗೆದುಕೊಂಡ ಪರಿಹಾರದ ಕ್ರಮಗಳೇನು;

(ಈ) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು ೧ ರಿಂದ ೭ನೇ ತರಗತಿಯನ್ನು ಹೊಂದಿದ್ದಲ್ಲಿ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೇ

ದೈಹಿಕ ಶಿಕ್ಷಣ ಹುದ್ದೆಗಳನ್ನು ಮುಂದುವರೆಸಲು ಸರ್ಕಾರದ ನಡವಳಿ ಸಂ: ಇಡಿ/೬೪೪/ಪಿಬಿಎಸ್/೨೦೧೦, ಬೆಂಗಳೂರು ದಿನಾಂಕ ೦೧-೦೪-೨೦೧೧ ಕ್ಕೆ ಸೂಕ್ತ ತಿದ್ದುಪಡಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದೇ ?

## ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಯವರಿಗೆ ಕರ್ನಾಟಕ ನಾಗರಿಕ ಸೇವಾ ನಿಯಮ ೨೪೭ 'ಎ' ಪ್ರಕಾರ ಹೆಚ್ಚುವರಿ ಅರ್ಹತಾದಾಯದ ಸೇವೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೩೫೭ (೨೪೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಸೇವೆಗೆ ೩೦ ವರ್ಷಗಳ ನಂತರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳ, ನಿಯಮ-೨೪೭ಎ ಪ್ರಕಾರ ಗರಿಷ್ಠ ೨ ವರ್ಷಗಳ ಹೆಚ್ಚುವರಿ ಅರ್ಹತಾದಾಯಕ ಸೇವೆ ನೀಡಲು ಅವಕಾಶ ಕಲ್ಪಿಸಿರುವುದು ನಿಜವೇ ;

(ಆ) ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕಕರುಗಳಿಗೆ ಈ ಸೌಲಭ್ಯವನ್ನು ಕಲ್ಪಿಸದಿರಲು ಕಾರಣಗಳೇನು;

(ಇ) ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕಕರುಗಳಿಗೆ ಈ ಸೌಲಭ್ಯವನ್ನು ನೀಡಲು ಕರ್ನಾಟಕ ಉಚ್ಚನ್ಯಾಯಾಲಯ ಧಾರವಾಡ ಪೀಠದ ರಿಟ್ ಪಿಟಿಷನ್ ಸಂ: ೧೦೯೧೬೭-೧೮೧/೨೦೧೪ (ಎಸ್-ಆರ್‌ಇಎಸ್) ರಲ್ಲಿ ದಿನಾಂಕ ೦೪-೦೧-೨೦೧೬ ರ ಆದೇಶದಲ್ಲಿ ಸೌಲಭ್ಯ ಕಲ್ಪಿಸುವಂತೆ ನಿರ್ದೇಶಿಸಿರುವುದು ನಿಜವೇ ;

(ಈ) ನಿಜವಾಗಿದ್ದಲ್ಲಿ, ಈ ಸೌಲಭ್ಯವನ್ನು ಎಲ್ಲ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳಿಗೆ ವಿಸ್ತರಿಸಲು ಸರ್ಕಾರ ಆದೇಶ ಹೊರಡಿಸಲು ಕ್ರಮ ಕೈಗೊಳ್ಳುವುದೇ ?

## ಅನುದಾನಿತ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ವೃತ್ತಿ ಶಿಕ್ಷಕರುಗಳಿಗೆ ದಿನಾಂಕ ೦೧-೦೮-೨೦೦೮ ರಿಂದ ೬೮೦೦-೧೩೬೦೦ ವೇತನ ಶ್ರೇಣಿಯನ್ನು ಮಂಜೂರು ಮಾಡುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೩೫೮ (೨೪೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲಾ ಸಹಶಿಕ್ಷಕರುಗಳಿಗೆ ದಿನಾಂಕ ೦೧-೦೮-೨೦೦೮ ರಿಂದ ಅನ್ವಯವಾಗುವಂತೆ ೬೮೦೦-೧೩೬೦೦ ರ ವೇತನ ಶ್ರೇಣಿಯನ್ನು ನೀಡಿರುವುದು ನಿಜವೇ ;

(ಆ) ಅನುದಾನಿತ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೇಡ್-೨ ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ವೃತ್ತಿ ಶಿಕ್ಷಕರುಗಳು ಪ್ರಾಥಮಿಕ ಶಾಲಾ ಸಹಶಿಕ್ಷಕರ ವೃಂದದವರಾಗಿದ್ದರೂ ಸಹ ಅವರುಗಳಿಗೆ ೬೮೦೦-೧೩೬೦೦ರ ವೇತನ ಶ್ರೇಣಿಯನ್ನು ಈವರೆಗೆ ವಿಸ್ತರಿಸದಿರಲು ಕಾರಣಗಳೇನು ;

(ಇ) ಅನುದಾನಿತ ಪ್ರೌಢ ಶಾಲಾ ಗ್ರೇಡ್-೨ ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ವೃತ್ತಿ ಶಿಕ್ಷಕರುಗಳು ಈ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ವೃಂದದವರಿಗೆ ದಿನಾಂಕ ೦೧-೦೮-೨೦೦೮ ರಿಂದ ೬೮೦೦-೧೩೬೦೦ರ ವೇತನ ಶ್ರೇಣಿಯನ್ನು ಮಂಜೂರು ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಪ್ರೌಢಶಾಲೆಗಳಲ್ಲಿ ಅರೆಕಾಲಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂಗೊಳಿಸುವುದು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೨೩೫ (೨೪೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಒಟ್ಟು ೫೩೬ ಅರೆಕಾಲಿಕ ಪ್ರೌಢಶಾಲಾ ಶಿಕ್ಷಕರ ಸೇವೆಯನ್ನು ರಾಜ್ಯದ ನಾಗರಿಕ ಸೇವೆಯಲ್ಲಿ, ವಿಶೇಷ ನಿಯಮಗಳು-೨೦೦೫ರ ಪ್ರಕಾರ ವಿಲೀನಗೊಳಿಸಲಾಗಿದ್ದು, ಬಾಕಿ ಇರುವ ೨೪ ಜನ ಶಿಕ್ಷಕರುಗಳ ಸೇವೆಯನ್ನು ನಾಗರಿಕ ಸೇವೆಯಲ್ಲಿ ಈವರೆಗೆ ವಿಲೀನಗೊಳಿಸದಿರಲು ಕಾರಣಗಳೇನು ;

(ಆ) ಶ್ರೀ ಶಂಕರ ಆರ್. ಕುರ್ಸೆ, ಸಹ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಹಡಿನಬಾಳ, ತಾಲ್ಲೂಕು ಹೊನ್ನಾವರ ಇವರು ಸದರಿ ಪ್ರಕರಣದಲ್ಲಿ ಕರ್ನಾಟಕ ಆಡಳಿತಾತ್ಮಕ ನ್ಯಾಮಂಡಳಿಗೆ ಸಲ್ಲಿಸಿದ ಅರ್ಜಿ ಸಂ: ೫೭೭೧/೨೦೧೨ ದಿನಾಂಕ ೦೫-೦೬-೨೦೧೫ರ ತೀರ್ಪಿನಲ್ಲಿ ಅರೆಕಾಲಿಕ ಶಿಕ್ಷಕರ ಸೇವೆಯನ್ನು ಪರಿಗಣಿಸಿ ಖಾಯಂಗೊಳಿಸಲು ಆದೇಶಿಸಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ರಾಜ್ಯದ ನಾಗರಿಕ ಸೇವೆಯಲ್ಲಿ ವಿಲೀನಗೊಳಿಸಲು ಬಾಕಿ ಇರುವ ೨೪ ಜನ ಅರೆಕಾಲಿಕ ಶಿಕ್ಷಕರುಗಳನ್ನು ಈವರೆಗೆ ಖಾಯಂಗೊಳಿಸದಿರಲು ಕಾರಣಗಳೇನು ;

(ಈ) ಸರ್ಕಾರಿ ಈಗಾಗಲೇ ೫೩೬ ಜನ ಅರೆಕಾಲಿಕ ಶಿಕ್ಷಕರುಗಳನ್ನು ಸರ್ಕಾರಿ ಸೇವೆಯಲ್ಲಿ ವಿಲೀನಗೊಳಿಸಿದಂತೆ ಬಾಕಿ ಇರುವ ೨೪ ಜನ ಶಿಕ್ಷಕರುಗಳನ್ನು ಖಾಯಂಗೊಳಿಸಲು ಕ್ರಮ ಕೈಗೊಳ್ಳುವುದೇ?

## ಮಾನ್ವಿ ತಾಲ್ಲೂಕಿನ ಸಿರವಾರ ಪಟ್ಟಣದಲ್ಲಿ ಪದವಿ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೦ (೨೬೦೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಸಿರವಾರ ಪಟ್ಟಣದಲ್ಲಿ ಪದವಿ ಮಹಾವಿದ್ಯಾಲಯ ಕಾಲೇಜು ಕಟ್ಟಡ ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಮಹಿಳಾ ಪದವಿ ಕಾಲೇಜು ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಗ್ರಾಮ ಪಂಚಾಯತ್ ಕಟ್ಟಡಗಳಿಗೆ ಮೂಲಭೂತ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೧ (೨೬೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಪ್ರಾರಂಭವಾದ ಗ್ರಾಮ ಪಂಚಾಯತ್‌ಗಳಿಗೆ ಕಟ್ಟಡ ಮತ್ತು ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ನೂತನವಾಗಿ ಹಮ್ಮಿಕೊಂಡಿರುವ ಯೋಜನೆಗಳಾವುವು ?

## ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೨ (೨೬೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಅವು ಯಾವುವು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯಲ್ಲಿರುವ, ಉರ್ದು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಅವುಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೩ (೨೬೦೯) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೧೫–೧೬ನೇ ಸಾಲಿನಲ್ಲಿ ರಾಯಚೂರು ನಗರದಲ್ಲಿ ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು?

## ರಾಯಚೂರು ಜಿಲ್ಲೆಯ ಗ್ರಾಮಗಳಿಗೆ ಬಸ್ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೪ (೨೬೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಬಸ್ ಸೌಕರ್ಯ ಇಲ್ಲದಿರುವ ಗ್ರಾಮಗಳಿಗೆ/ತಾಂಡಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿ ಸಿಟಿ ಬಸ್ ಸ್ಟ್ಯಾಂಡ್‌ಗಳನ್ನು ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು;

(ಇ) ಮಾನ್ವಿ ತಾಲ್ಲೂಕಿನ ಸಿರವಾರ ಪಟ್ಟಣದ ಬಸ್ ನಿಲ್ದಾಣ ನವೀಕರಣದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಶಿವಮೊಗ್ಗ ತಾಲ್ಲೂಕು, ಕಲ್ಲಳ್ಳಿ ಮಂಡ್ಲಿ ಕೈಗಾರಿಕಾ ಪ್ರದೇಶದ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೫ (೨೫೭೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ತಾಲ್ಲೂಕು, ಕಲ್ಲಳ್ಳಿ ಮಂಡ್ಲಿ ಪ್ರದೇಶದಲ್ಲಿ ಕೈಗಾರಿಕೆ ಉದ್ದೇಶಕ್ಕಾಗಿ ಜಮೀನು ವಶಪಡಿಸಿಕೊಂಡು ನಿರ್ಮಿಸಲಾದ ನಿವೇಶನಗಳ ಸಂಖ್ಯೆ ಎಷ್ಟು; ನಿರ್ಮಾಣವಾದ ಶೆಡ್‌ಗಳನ್ನು ಯಾವ ಯಾವ ಕೈಗಾರಿಕೋದ್ಯಮಿಗಳಿಗೆ ನೀಡಲಾಗಿದೆ; (ವಿವರ ನೀಡುವುದು)

(ಆ) ಹಾಲಿ ಈ ಪ್ರದೇಶದಲ್ಲಿ ಎಷ್ಟು ಶೆಡ್‌ಗಳಲ್ಲಿ ಕೈಗಾರಿಕೆ ನಡೆಸುತ್ತಿವೆ; ಕೈಗಾರಿಕೆ ನಡೆಸದೇ ಖಾಲಿ ಇರುವ ಶೆಡ್‌ಗಳು, ನಿವೇಶನಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಹಾಲಿ ಆ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಕರ್ಯಗಳಾದ ನೀರು, ಬೀದಿ ದೀಪ, ರಸ್ತೆ ನಿರ್ಮಾಣ ಸರಿ ಇಲ್ಲದೆ, ಕೈಗಾರಿಕೆ ನಡೆಸುತ್ತಿರುವವರಿಗೆ ಆಗುತ್ತಿರುವ ತೊಂದರೆಗಳಿಗೆ ನೀಡಲಾದ ಪರಿಹಾರ ಏನು;

(ಈ) ಖಾಲಿ ಇರುವ ನಿವೇಶನ, ಶೆಡ್‌ಗಳನ್ನು ಆಸಕ್ತ ಉದ್ಯಮಿಗಳಿಗೆ ನೀಡಲು ಸರ್ಕಾರದ ಕ್ರಮವೇನು? (ವಿವರ ನೀಡುವುದು)

## ಸಂಸ್ಕೃತ ವಿಶ್ವ ವಿದ್ಯಾಲಯದ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೬೬ (೨೫೭೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿ ಸಂಸ್ಕೃತ ವಿಶ್ವ ವಿದ್ಯಾನಿಲಯಕ್ಕಾಗಿ ಕ್ಯಾಂಪಸ್ ನಿರ್ಮಿಸಲು ಸರ್ಕಾರ ಜಮೀನನ್ನು ಯಾವಾಗ ಮಂಜೂರು ಮಾಡಿದೆ; (ಎಷ್ಟು ಎಕರೆ ವಿವರ ನೀಡುವುದು)

(ಆ) ಮಂಜೂರು ಮಾಡಲಾದ ಜಮೀನಿನಲ್ಲಿ ಈವರೆಗೆ ಅಭಿವೃದ್ಧಿ ಪಡಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು; ಪ್ರಗತಿ ಎಷ್ಟು; (ವಿವರ ನೀಡುವುದು)

(ಇ) ೨೦೧೩–೧೪ ಮತ್ತು ೨೦೧೫–೧೬ನೇ ಸಾಲುಗಳಲ್ಲಿ ಸಂಸ್ಕೃತ ವಿಶ್ವ ವಿದ್ಯಾನಿಲಯಕ್ಕಾಗಿ ಸರ್ಕಾರ ನೀಡಿರುವ ಅನುದಾನ ಎಷ್ಟು; ಸಂಸ್ಕೃತ ವಿಶ್ವವಿದ್ಯಾನಿಲಯ ಈ ಅನುದಾನವನ್ನು ಯಾವ ಬಾಬ್ತಿಗೆ ಖರ್ಚು ಮಾಡಿರುತ್ತದೆ; (ವಿವರ ನೀಡುವುದು)

(ಈ) ಅನುದಾನ ಸಹಿತ ಇರುವ ಸಂಸ್ಕೃತ ಪಾಠಶಾಲೆಗಳೆಷ್ಟು; ಇವು ಸಂಸ್ಕೃತ ವಿಶ್ವವಿದ್ಯಾನಿಲಯದ ಅಧಿಕಾರ ವ್ಯಾಪ್ತಿಯಲ್ಲಿ ಬರುವುದೇ; ಈ ಪಾಠಶಾಲೆಗಳಲ್ಲಿ ೨೦೧೫-೧೬ನೇ ಸಾಲಿಗೆ ನೋಂದಾಯಿತರಾಗಿರುವ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಅಧ್ಯಾಪಕರ ಸಂಖ್ಯೆ ಎಷ್ಟು?

## ಕಲ್ಲು ಕ್ವಾರಿ ನಡೆಸಲು ಅನುಮತಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೩೬೭ (೨೫೭೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಕಲ್ಲು ಕ್ವಾರಿ ನಡೆಸಲು ಅನುಮತಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕ್ವಾರಿ ನಡೆಸಲು ಅನುಮತಿ ನೀಡುವ "ಇ.ಸಿ" ನೀಡುವ ಅಧಿಕಾರವನ್ನು ಸರ್ಕಾರ ಯಾರಿಗೆ ನೀಡಿದೆ;

(ಇ) ಇ.ಸಿ. ಪಡೆದ ಕ್ವಾರಿ ಮಾಲೀಕರು ಗುತ್ತಿಗೆದಾರರು (ಲೀಸ್) ನಂತರ ಪಡೆಯಬೇಕಾದ (ಎನ್.ಓ.ಸಿ) ನಿರಕ್ಷೇಪಣಾ ಪತ್ರ ಪಡೆಯಲು ಬಹಳಷ್ಟು ತೊಂದರೆಯಾಗುತ್ತಿರವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೀಡಲಾದ ಪರಿಹಾರವೇನು;

(ಈ) ಕ್ವಾರಿ ಲಾಗಾಯ್ತುನಿಂದ ಮಾಡುತ್ತಿರುವ ಗುತ್ತಿಗೆದಾರರು ಗುತ್ತಿಗೆ ಅವಧಿ ಮುಗಿದ ನಂತರ ನವೀಕರಣ ಮಾಡಲು ಸರ್ಕಾರ ಜನರಿಗೆ ಸಹಾಯವಾಗುವಂತಹ ಕ್ರಮಗಳನ್ನು ತೆಗೆದುಕೊಳ್ಳುತ್ತದೆಯೇ?

## ಕಾಲ್ಪನಿಕ ವೇತನ ಜಾರಿಗೊಳಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೩೬೮ (೨೬೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲ್ಪನಿಕ ವೇತನ ಕುರಿತು ಪರಿಶೀಲಿಸಲು ಸರ್ಕಾರವು ಶ್ರೀ ಬಸವರಾಜ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ಯಾವಾಗ ರಚಿಸಲಾಯಿತು;

(ಆ) ಈ ಸಮಿತಿಯು ಸರ್ಕಾರಕ್ಕೆ ಶಿಫಾರಸ್ಸುಗಳನ್ನು ಸಲ್ಲಿಸಿದೆಯೇ; ಯಾವಾಗ ಸಲ್ಲಿಸಲಾಯಿತು;

(ಇ) ಈ ಸಮಿತಿಯು ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವುದಾದರೂ ಕಾಲಮಿತಿಯನ್ನು ಹಾಕಿಕೊಂಡಿದೆಯೇ?

## ಕಲ್ಲು ಕ್ವಾರಿಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೩೬೯ (೨೬೩೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಕಲ್ಲು–ಜಲ್ಲಿ ಉತ್ಪಾದಿಸುವ ಕ್ವಾರಿಗಳು ಇವೆ; (ಜಿಲ್ಲಾವಾರು ನೋಂದಣಿದಾರರ ಹೆಸರು ಮತ್ತು ವಿಳಾಸ ಸಮೇತ ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಮರಳು ಅಭಾವ ಇರುವುದು ನಿಜವೇ; ಒಟ್ಟು ಬೇಡಿಕೆಯಾದದು ಎಷ್ಟು; ಆಭಾವ ಇರುವುದು ಎಷ್ಟು;

(ಇ) ಎಂ ಸ್ಯಾಂಡ್ ಉತ್ಪಾದನೆ ಮಾಡುವ ಸಂಬಂಧ ಸರ್ಕಾರದ ನೀತಿ ನಿಯಮಗಳು ಹಾಗೂ ಮಾರ್ಗದರ್ಶಕ ಸೂತ್ರಗಳು ಏನು; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಕ್ವಾರಿಗಳಿಗೆ ಎಂ. ಸ್ಯಾಂಡ್ ಉತ್ಪಾದನೆ ಮಾಡಲು ಲೈಸನ್ಸ್ ನೀಡಲಾಗಿದೆ? (ವಿವರವಾದ ಮಾಹಿತಿ ನೀಡುವುದು)

## ಗುಜರಾತ್ ರೋಡ್ ಶೋನಲ್ಲಿ ಆದ M.O.U. ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೩೭೦ (೨೬೩೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಸಾಲಿನ ಪ್ರವಾಸಿ ಭಾರತ ದಿವಸ್ ಕಾರ್ಯಕ್ರಮದ ಅಂಗವಾಗಿ ಗುಜರಾತ್ ರಾಜ್ಯದ ಅಹಮದಾಬಾದ್ ನಗರದಲ್ಲಿ ನಡೆದ ರೋಡ್ ಶೋನಲ್ಲಿ ಎಷ್ಟು ಮೆಗಾವ್ಯಾಟ್ ಜಲ ವಿದ್ಯುತ್ ಉತ್ಪಾದನೆ ಮಾಡಲು ತಿಳಿವಳಿಕೆ ಒಪ್ಪಂದ M.O.U. ಮಾಡಿಕೊಳ್ಳಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) ಇದರ ಸಂಬಂಧ M.O.U. ಮಾಡಿಕೊಳ್ಳಲು ಯಾವ ಕಂಪನಿಗಳು ಮುಂದೆ ಬಂದಿವೆ; ಅವುಗಳ ಹಿನ್ನೆಲೆಯೊಂದಿಗೆ ವಿಳಾಸ ಸಮೇತ ಮಾಹಿತಿ ಕೊಡುವುದು;

(ಇ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಮೆಗಾವ್ಯಾಟ್ ಜಲವಿದ್ಯುತ್ ಉತ್ಪಾದನೆ ಮಾಡಬಹುದಾಗಿದೆ; (ಜಿಲ್ಲಾವಾರು ಸಂಪೂರ್ಣ ಡಿ.ಪಿ.ಆರ್. ನೊಂದಿಗೆ ವಿವರವಾದ ಮಾಹಿತಿ ಕೊಡುವುದು)

(ಈ) ಜಲವಿದ್ಯುತ್ ಉತ್ಪಾದನೆ ಮಾಡುವ ಅವಕಾಶವಿದ್ದಲ್ಲಿ ಸರ್ಕಾರ/ಕರ್ನಾಟಕ ವಿದ್ಯುತ್ ನಿಗಮ ಇಲ್ಲಿಯವರೆಗೆ ಏಕೆ ಕಾರ್ಯೋನ್ಮುಖವಾಗಿರುವುದಿಲ್ಲ?

## ಬ್ಯಾಂಕ್‌ಗಳಲ್ಲಿ ಅಕ್ರಮ ಠೇವಣಿ ಇಟ್ಟಿರುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೩೭೧ (೨೬೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಯೋಜನೆಗಳಿಗೆ ಮೀಸಲಿಟ್ಟ ಹಣವನ್ನು ಅಧಿಕಾರಿಗಳು ಬ್ಯಾಂಕ್‌ಗಳಲ್ಲಿ ಅಕ್ರಮವಾಗಿ ಠೇವಣಿ ಇಟ್ಟಿರುವುದು ನಿಜವೇ;

(ಆ) ಹಾಗಿದ್ದರೆ, ಎಷ್ಟು ಹಣವನ್ನು ಯಾವ ಯಾವ ಬ್ಯಾಂಕ್‌ಗಳಲ್ಲಿ ಠೇವಣಿ ಇಡಲಾಗಿದೆ; (ಬ್ಯಾಂಕ್ ಖಾತೆವಾರು ವಿವರ ನೀಡುವುದು)

(ಇ) ಈ ಸಂಬಂಧ ಹಿರಿಯ ಐ.ಎ.ಎಸ್. ಅಧಿಕಾರಿ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತೇ;

(ಈ) ಸಮಿತಿಯು ಸರ್ಕಾರಕ್ಕೆ ಯಾವಾಗ ವರದಿ ಸಲ್ಲಿಸಿದೆ; ಸಲ್ಲಿಸಿದ್ದರೆ, ವರದಿಯ ಪ್ರತಿ ನೀಡುವುದು;

(ಉ) ಇದರ ಸಂಬಂಧ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

## ಖಾಸಗಿ ಅನುದಾನಿತ ಶಾಲೆಗಳಿಗೂ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೨ (೨೬೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಸರ್ಕಾರಿ ಶಾಲಾ ಮಕ್ಕಳಿಗೆ ನೀಡುತ್ತಿರುವ ಸೌಲಭ್ಯಗಳೇನು; (ಸಂಪೂರ್ಣ ವಿವರ ನೀಡುವುದು)

(ಆ) ಖಾಸಗಿ ಅನುದಾನಿತ ಶಾಲೆಗಳಿಗೆ ಈ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ;

(ಇ) ಇಲ್ಲದಿದ್ದಲ್ಲಿ, ಸರ್ಕಾರದಿಂದ ಸೈಕಲ್‌ಗಳನ್ನು, ಬಿಸಿ ಊಟ ಹಾಗೂ ಪುಸ್ತಕಗಳನ್ನು ನೀಡುವುದು, ಸಂಪೂರ್ಣ ಹಾಜರಾತಿ ಇರುವ ಹೆಣ್ಣು ಮಕ್ಕಳಿಗೆ ದಿನಕ್ಕೆ ೨ ರೂ. ನಂತೆ ಪ್ರೋತ್ಸಾಹಧನ ನೀಡುವುದು ಮುಂತಾದ ಸೌಲಭ್ಯಗಳನ್ನು ಖಾಸಗಿ ಅನುದಾನಿತ ಶಾಲಾ ಮಕ್ಕಳಿಗೂ ನೀಡುವ ಬಗ್ಗೆ ಪರಿಶೀಲನೆ ಮಾಡಲಾಗುವುದೇ;

(ಈ) ಖಾಸಗಿ ಅನುದಾನಿತ ಶಾಲೆಗಳಿಗೆ ಈ ಸೌಲಭ್ಯಗಳನ್ನು ಎಷ್ಟು ದಿನಗಳಲ್ಲಿ ನೀಡಲಾಗುವುದು?

## ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೩ (೨೬೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಯೋಜನೆಯಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ;

(ಆ) ಎಷ್ಟು ಕಿಲೋಮೀಟರ್ ರಸ್ತೆಗಳನ್ನು ಅಭಿವೃದ್ಧಿ ಮಾಡಲಾಗಿದೆ; ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಹಣ ಖರ್ಚು ಮಾಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ಅಕ್ಷರ ದಾಸೋಹ ಯೋಜನೆಯಲ್ಲಿ ಖರೀದಿಸಿದ ಅಗ್ನಿನಂದಕ ಖರೀದಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೪ (೨೫೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಯೋಜನೆಯ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಖರೀದಿ ಅವ್ಯವಹಾರದಲ್ಲಿ ಅಧಿಕಾರಿಗಳು ಶಾಮೀಲಾಗಿರುತ್ತಾರೆಂದು ಬೆಳಕಿಗೆ ಬಂದಿರುವುದು ನಿಜವೇ;

(ಆ) ಇದರಲ್ಲಿ ಕಾರಾಗೃಹ ಇಲಾಖೆಯಲ್ಲಿ ಉನ್ನತ ಹುದ್ದೆ ಅಲಂಕರಿಸಿದ ಅಧಿಕಾರಿಯೊಬ್ಬರು ತಮ್ಮದೇ ಏಜನ್ಸಿಯೊಂದರ ಮೂಲಕ ಈ ಅವ್ಯವಹಾರ ನಡೆಸಿರುವ ಬಗ್ಗೆ ಈ ಹಿಂದಿನ ಅಧಿವೇಶದಲ್ಲಿ ಪ್ರಸ್ತಾಪ ಮಾಡಿದ್ದು, ಈ ಕುರಿತು ತನಿಖೆ ಪ್ರಗತಿಯಲ್ಲಿರುತ್ತದೆಂದು ತಿಳಿಸಿದ ಪ್ರಕಾರ ಇಲ್ಲಿಯವರೆಗೆ ಆದ ತನಿಖೆಯ ವಿವರ ನೀಡುವುದು;

(ಇ) ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪೂರ ತಾಲ್ಲೂಕಿನ ಉಪ ಬಂಧಿಖಾನೆಯಲ್ಲಿ ಅಧೀಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ಇದಕ್ಕೆ ಸಂಬಂಧಿಸಿದ ಜಿಲ್ಲೆಯ ಅಕ್ಷರದಾಸೋಹ ಅಧಿಕಾರಿ ಅಕ್ಷರ ದಾಸೋಹದ ಫೈಯರ್ ಪ್ರೂಫ್ ಖರೀದಿಯ ಅವ್ಯವಹಾರದಲ್ಲಿ ನೇರವಾಗಿ ಶಾಮೀಲಾಗಿರುವುದು ನಿಜವೇ;

(ಈ) ನಿಜವಾದಲ್ಲಿ, ಅವರ ಮೇಲೆ ಇಲ್ಲಿಯವರೆಗೆ ಕ್ರಮ ಕೈಗೊಳ್ಳದೇ ಇರಲು ಕಾರಣವೇನು?

## ಅತಿಥಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವಲ್ಲಿ ಬರುವ ಅನುದಾನದ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೫ (೨೫೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಕಾರವಾರ ಜಿಲ್ಲೆಯ (ಶಿರಸಿ/ಕಾರವಾರ ಶೈಕ್ಷಣಿಕ) ಶಿಕ್ಷಣ ಇಲಾಖೆಯಲ್ಲಿ ಅತಿಥಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವಲ್ಲಿ ಬಂದಿರುವ ಅನುದಾನ ಎಷ್ಟು;

(ಆ) ವರ್ಷದ ಕೊನೆಯಲ್ಲಿ ಉಳಿದಿರುವ ಅನುದಾನ ಎಷ್ಟು; ಆ ಪೈಕಿ ಸರ್ಕಾರಕ್ಕೆ ಹಿಂತಿರುಗಿಸಿದ ಅನುದಾನ ಎಷ್ಟು? (ಚಲನ್ ಪ್ರತಿಯ ಸಮೇತ ವಿವರ, ತಾಲ್ಲೂಕುವಾರು/ ಜಿಲ್ಲಾವಾರು ವಿವರ ನೀಡುವುದು)

## ಅಭಿವೃದ್ಧಿ ಕಾರ್ಯಗಳಿಗೆ ಬಂದಿರುವ ಅನುದಾನ ಬಳಕೆ ಮಾಡದೆ ಇರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೬ (೨೫೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩ನೇ ಸಾಲಿನಿಂದ ಕಾರವಾರ ಜಿಲ್ಲೆಯ (ಶಿರಸಿ/ಕಾರವಾರ ಶೈಕ್ಷಣಿಕ) ಶಿಕ್ಷಣ ಇಲಾಖೆಯಲ್ಲಿ ವಿವಿಧ ಶಿರ್ಷಿಕೆಯಡಿಯಲ್ಲಿ ಬಂದಿರುವ ಅನುದಾನ ಸರಿಯಾಗಿ ಬಳಕೆ ಆಗದೆ ದುರ್ಬಳಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ೨೦೧೨–೧೩ನೇ ಸಾಲಿನಿಂದ ೨೦೧೫–೧೬ನೇ ಸಾಲಿನ ವರೆಗೆ ವಿವಿಧ ಶೀರ್ಷಿಕೆಯಡಿಯಲ್ಲಿ ವಿವಿಧ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ಕಾಮಗಾರಿವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೧೨–೧೩ನೇ ಸಾಲಿನಿಂದ ವಿವಿಧ ಶೀರ್ಷಿಕೆಯಡಿಯಲ್ಲಿ ವಿವಿಧ ಶಾಲೆಗಳಿಗೆ ವಿವಿಧ ಪೀಠೋಪಕರಣ ಸಲಕರಣೆ ಮುಂತಾದ ಸಾಮಾಗ್ರಿಗಳನ್ನು ಖರೀದಿ ಮಾಡಲು ಬಂದಿರುವ ಅನುದಾನ ಎಷ್ಟು; ಹಾಗೂ ಯಾರಿಂದ ಖರೀದಿಸಲಾಗಿದೆ? (ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

## ಕುಡಿಯುವ ನೀರಿಗೆ ಬಂದಿರುವ ಅನುದಾನ ಸರಿಯಾಗಿ ಬಳಕೆಯಾಗದೆ ಇರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೭ (೨೫೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ೨೦೧೪ ರವರೆಗೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗಾಗಿ ಬಂದಿರುವ ಅನುದಾನದಲ್ಲಿ ಯಾವುದೇ ಕಾಮಗಾರಿ ಸರಿಯಾಗಿ ಮಾಡದೇ ಹಣದ ದುರ್ಬಳಕೆ ಮಾಡಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ೨೦೧೦–೨೦೧೪ ರವರೆಗೆ ಅಂಕೋಲಾ ತಾಲ್ಲೂಕಿಗೆ ಗ್ರಾಮ ಪಂಚಾಯತ್‌ನ ವಿವಿಧ ವಾರ್ಡ್‌ಗಳಿಗೆ ಕುಡಿಯುವ ನೀರಿಗಾಗಿ ಬಂದಿರುವ ಅನುದಾನದ ವಿವರ ನೀಡುವುದು, ಇದರಲ್ಲಿ ಎಷ್ಟು

ಕಾಮಗಾರಿಗಳು ಪೂರ್ತಿಯಾಗಿರುತ್ತದೆ, ಎಷ್ಟು ಕಾಮಗಾರಿಗಳು ಪೂರ್ಣಗೊಳ್ಳದೆ ಹಾಗೆಯೇ ಉಳಿದಿರುತ್ತದೆ; (ವಿವರ ನೀಡುವುದು ಹಾಗೂ ಪಂಚಾಯತ್‌ವಾರು ಅನುದಾನದ ವಿವರ ನೀಡುವುದು)

(ಇ) ತಾಲ್ಲೂಕಿನ ಬೆಳಂಬಾರದಲ್ಲಿ ಕುಡಿಯುವ ನೀರಿಗೆ ಕೋಟಿ ರೂ. ಖರ್ಚು ಮಾಡಿದರೂ, ಯಾವ ಯೋಜನೆಯೂ ಯಶಸ್ವಿ ಯಾಗಿರುವುದಿಲ್ಲವೆಂದು ತಿಳಿದು ಬಂದಿದ್ದು, ಇದಕ್ಕೆ ಯಾರು ಹೊಣೆಗಾರರಾಗಿದ್ದಾರೆ, ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ದಾಂಡೇಲಿ ಬಸ್ ನಿಲ್ದಾಣದ ಅವ್ಯವಸ್ಥೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೭೮ (೨೫೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ಬಸ್ ನಿಲ್ದಾಣದಲ್ಲಿ ತಗ್ಗು–ಗುಂಡಿಗಳಿಂದ ತುಂಬಿದ ರಸ್ತೆಗಳು, ದುರ್ವಾಸನೆ ಬೀರುವ ಶೌಚಾಲಯ, ಎಲ್ಲೆಡೆ ಕಸದ ರಾಶಿ, ಸ್ವಚ್ಛತೆ ಕೊರತೆ ಮುಂತಾದ ಸಮಸ್ಯೆಗಳಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಆ) ಇದಕ್ಕೆ ಇಲಾಖೆಯ ನಿರ್ಲಕ್ಷತೆ ಕಾರಣವಲ್ಲವೇ; (ವಿವರ ನೀಡುವುದು)

(ಇ) ಸದರಿ ಬಸ್ ನಿಲ್ದಾಣಕ್ಕೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಮಾಡಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ರಾಜ್ಯದಲ್ಲಿ ಮರಳು ನೀತಿಗಳನ್ನು ರೂಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೨೩೭೯ (೨೫೩೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮರಳು ನೀತಿಗಳನ್ನು ರೂಪಿಸಲಾಗಿದೆಯೇ; ಪ್ರಸ್ತುತ ಮರಳು ಗಣಿಗಾರಿಕೆಗೆ ಯಾವ ಮಾನದಂಡ ಅನುಸರಿಸಿ ಪರವಾನಿಗೆ ನೀಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ರಾಜ್ಯ ಯಾವ ಜಿಲ್ಲೆಗಳಲ್ಲಿ ಮರಳುಗಾರಿಕೆಗೆ ಪರವಾನಿಗೆ ನೀಡಲಾಗಿದೆ; ಮಾನದಂಡಗಳೇನು; (ವಿವರ ನೀಡುವುದು)

(ಇ) ಕೃತಕ ಉತ್ಪಾದಿತ ಮರಳು (M. Sand) ಬಗ್ಗೆ ಸರ್ಕಾರದ ನೀತಿ ಏನು; ಇದನ್ನು ಪ್ರೋತ್ಸಾಹಿಸಲು ಹಮ್ಮಿಕೊಂಡಿರುವ ಕಾರ್ಯಗಳೇನು;

(ಈ) ರಾಜ್ಯದಲ್ಲಿ ಎಷ್ಟು ಕೃತಕ ಉತ್ಪಾದಿತ ಮರಳು (M. Sand) ಘಟಕಗಳು ಯಾವ ಯಾವ ಸ್ಥಳಗಳಲ್ಲಿ ಕಾರ್ಯಚರಣೆಯಲ್ಲಿವೆ? (ವಿವರ ನೀಡುವುದು)

## ಶಾಲಾ ಮಕ್ಕಳಿಗೆ ಕೊಂಡೋಯ್ಯುವ ವಾಹನ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೨೩೮೦ (೨೫೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕುಂದಾಪರದ ಗಂಗೋಳ್ಳಿಯಲ್ಲಿ ಅಪಘಾತದಿಂದ ಮೃತಪಟ್ಟ ವಿದ್ಯಾರ್ಥಿಗಳ ಸಾವಿಗೆ ಕಾರಣವಾದ ವಾಹನಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; (ಮೃತಪಟ್ಟವರ ವಿವರ ನೀಡುವುದು)

(ಆ) ಶಾಲಾ ಮಕ್ಕಳಿಗೆ ಶಾಲೆಗೆ ಕರೆತರುವ ವಾಹನಗಳಲ್ಲಿ ನಿಗಧಿತ ಸಂಖ್ಯೆಕ್ಕಿಂತ ಹೆಚ್ಚು ವಿದ್ಯಾರ್ಥಿಗಳನ್ನು ಕೊಂಡೋಯ್ಯುವುದರಿಂದ ಅನೇಕ ದುರ್ಘಟನೆಗಳು ಸಂಭವಿಸಿ ವಿದ್ಯಾರ್ಥಿಗಳು ಮೃತಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;

(ಇ) ರಾಜ್ಯದಲ್ಲಿ ಶಾಲಾ ವಿದ್ಯಾರ್ಥಿಗಳನ್ನು ಕೊಂಡೊಯ್ಯುವ ವಾಹನಗಳಿಗೆ ಏಕರೂಪ ನೀತಿಯನ್ನು ಜಾರಿಗೆ ತರಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಈ) ಶಾಲಾ ಮಕ್ಕಳಿಗೆ ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸುವುದು ಆಯಾ ಶಾಲೆಗಳ ಜವಾಬ್ದಾರಿಯನ್ನಾಗಿ ಮಾಡಲಾಗುವುದೇ ; ಮಾಡಿದ್ದಲ್ಲಿ, ವಿವರ ನೀಡುವುದು ;

(ಉ) ಶಾಲಾ ಮಕ್ಕಳ ಕೊಂಡೋಯ್ಯುವ ವಾಹನಗಳ ಚಾಲಕ ಮತ್ತು ನಿರ್ವಾಹಕರು ಪಾಲಿಸಬೇಕಾದ ನಿಯಮಗಳ ಬಗ್ಗೆ ಪರವಾನಿಗೆ ಪಡೆಯಲು ಸೂಚಿಸುವುದೇ ? (ವಿವರ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೨೩೮೧ (೨೫೩೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆ ಯೋಜನೇಯು ವಿಳಂಬಗೊಳ್ಳಲು ಕಾರಣವೇನು; ಸರ್ಕಾರದ ಮುಂದಿರುವ ಪ್ರಸ್ತಾವನೆ ಏನು;

(ಆ) ರನ್‌ವೇ ವಿಸ್ತರಣೆಗೆ ಬೇಕಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು; ಇದಕ್ಕೆ ತಗಲುವ ವೆಚ್ಚವೆಷ್ಟು;

(ಇ) ಮಂಗಳೂರು ವಿಮಾನ ನಿಲ್ದಾಣದಲ್ಲಿ ರಾತ್ರಿ ವೇಳೆ ಹವಾಮಾನ ವೈಪರೀತ್ಯ ಉಂಟಾದಾಗ ವಿಮಾನಗಳನ್ನು ಇಳಿಸಲು ತೊಂದರೆ ಉಂಟಾಗುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಮಂಗಳೂರು ವಿಮಾನ ನಿಲ್ದಾಣದಿಂದ ಪ್ರಯಾಣಿಸಿದ ಪ್ರಯಾಣಿಕರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ವಿದ್ಯಾರ್ಥಿನಿಯರಿಗೆ ಶುಲ್ಕ ರಹಿತ ಶಿಕ್ಷಣ ನೀಡುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):-**

೨೩೮೨ (೨೫೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ-ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಪಡೆಯುತ್ತಿರುವ ಹೆಣ್ಣು ಮಕ್ಕಳಿಗೆ ಶಾಲಾ ಶುಲ್ಕವನ್ನು ಇಲಾಖೆ ನೀಡುವುದಾಗಿ ಸುತ್ತೋಲೆ ಹೊರಡಿಸಲಾಗಿದ್ದು, ಇದುವರೆಗೂ ಕಾರ್ಯಗತವಾಗಿಲ್ಲ ಎಂಬ ದೂರುಗಳಿರುವ ಬಗ್ಗೆ ಸರ್ಕಾರದ ನಿಲುವೇನು;

(ಆ) ವಿದ್ಯಾರ್ಥಿನಿಯರಿಗೆ ಸಂಪೂರ್ಣ ಶುಲ್ಕ ರಹಿತ ಶಿಕ್ಷಣ ನೀಡಲು ಸರ್ಕಾರಿ/ಖಾಸಗಿ ಶಾಲೆಗಳಿಗೆ ಸೂಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ವಿಳಂಬಕ್ಕೆ ಕಾರಣವೇನು;

(ಇ) ೨೦೦೯ ರಿಂದ ಕಾಲೇಜುಗಳಲ್ಲಿ ಪ್ರಾಂಶುಪಾಲರುಗಳ ನೇಮಕವಾಗದೆ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

(ಈ) ಸರ್ಕಾರಿ/ಖಾಸಗಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ವೇತನ ತಾರತಮ್ಯವಿದ್ದು ಅದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ೨೦೧೬-೧೭ನೇ ಸಾಲಿನಲ್ಲಿ ಪ್ರೌಢ ಶಾಲೆಗಳ ಮಂಜೂರಾತಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):-**

೨೩೮೩ (೨೫೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬-೧೭ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳನ್ನು ಆರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಜಿಲ್ಲಾವಾರು ಶಾಲೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕೈಗಾರಿಕೆಗಳಿಗೆ ಜಮೀನು ನೀಡಿರುವುದು ಮತ್ತು ಉದ್ಯೋಗ ಸೃಷ್ಠಿ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೩೮೪ (೨೫೬೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗು ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ನೆಲಮಂಗಲ ತಾಲ್ಲೂಕಿನ ಮತ್ತು ತುಮಕೂರು ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರದಿಂದ ಯಾವ ಯಾವ ಕಂಪನಿಗಳಿಗೆ ಮತ್ತು ಕಾರ್ಖಾನೆಗಳಿಗೆ, ಸಂಸ್ಥೆಗಳಿಗೆ ಎಷ್ಟೆಷ್ಟು ಎಕರೆ ಜಮೀನನ್ನು ನೀಡಲಾಗಿದೆ; (ತಾಲ್ಲೂಕುವಾರು ಕಂಪನಿ ಮಾಲೀಕರು/ಕಾರ್ಖಾನೆ/ ಸಂಸ್ಥೆ ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಕಂಪನಿಗಳಿಗೆ ಕೈಗಾರಿಕೆ ಸ್ಥಾಪಿಸುವ ಉದ್ದೇಶಕ್ಕೆ ರಿಯಾಯಿತಿ ದರದಲ್ಲಿ ಯಾವ ಯಾವ ಸೌಲಭ್ಯವನ್ನು ಸರ್ಕಾರ ಒದಗಿಸಿಕೊಟ್ಟಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದಿಂದ ನೀಡಿರುವ ಜಮೀನನ್ನು ಸಂಪೂರ್ಣವಾಗಿ ಸದರಿ ಉದ್ದೇಶಕ್ಕಾಗಿಯೇ ಬಳಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಕೈಗಾರಿಕೆಗಳನ್ನು ಸ್ಥಾಪಿಸಲು ನೀಡಿರುವ ಜಮೀನನ್ನು ಬಳಸಿಕೊಳ್ಳದೆ ಇರುವ ಸಂಸ್ಥೆಗಳೆಷ್ಟು; ಅಂತಹ ಸಂಸ್ಥೆಗಳಿಗೆ ಎಷ್ಟು ಎಕರೆ ಜಮೀನನ್ನು ನೀಡಿದೆ ಮತ್ತು ನೀಡಿರುವ ಇತರೆ ರಿಯಾಯಿತಿ ಸೌಲಭ್ಯಗಳೇನು; (ಪೂರ್ಣ ವಿವರ ನೀಡುವುದು)

(ಉ) ಕಳೆದ ೨ ವರ್ಷಗಳಲ್ಲಿ ನೆಲಮಂಗಲ ತಾಲ್ಲೂಕಿನಲ್ಲಿ ಮತ್ತು ತುಮಕೂರು ಜಿಲ್ಲೆಯಲ್ಲಿ ಈಗಾಗಲೇ ಸ್ಥಾಪನೆಗೊಂಡಿರುವ ಕಂಪನಿ/ ಕಾರ್ಖಾನೆ/ಸಂಸ್ಥೆಗಳಿಂದ ಎಷ್ಟು ಪ್ರಮಾಣದಲ್ಲಿ ಉದ್ಯೋಗಗಳು ಸೃಷ್ಟಿಯಾಗಿವೆ ಮತ್ತು ಈ ಉದ್ಯೋಗಗಳನ್ನು ಸ್ಥಳೀಯರಿಗೆ ನೀಡಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರವನ್ನು ನೀಡುವುದು)

## ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮೫ (೨೫೮೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಕಳೆದ ಎಷ್ಟು ವರ್ಷಗಳಿಂದ ನೇಮಕಾತಿ ಮಾಡಿರುವುದಿಲ್ಲ; ಖಾಲಿ ಇರುವ ವಿವಿಧ ದರ್ಜೆಯ ಹುದ್ದೆಗಳ ಸಂಖ್ಯೆಯೊಂದಿಗೆ ಸಂಪೂರ್ಣ ವಿವರ ನೀಡುವುದು;

(ಆ) ಕಳೆದ ಎಂಟು ವರ್ಷಗಳಿಂದಲೂ ಖಾಲಿ ಇರುವ ಹುದ್ದೆಗಳನ್ನು ತುಂಬದಿರಲು ಕಾರಣವೇನು; (ಸಂಪೂರ್ಣ ವಿವರ ನೀಡುವುದು)

(ಇ) ಪಿ.ಯು.ಸಿ/ಜೆ.ಓ.ಸಿ. ಹುದ್ದೆಗಳಿಗೆ ತಕ್ಕಂತೆ ವಿದ್ಯಾರ್ಹತೆ ಹೊಂದಿರುವ ವಿದ್ಯಾರ್ಥಿಗಳು ಲಕ್ಷಾಂತರ ಸಂಖ್ಯೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ನಿರುದ್ಯೋಗಿಗಳ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಅದೇ ರೀತಿಯಾಗಿ ಎನ್.ಡಬ್ಲ್ಯೂ.ಯು.ಕೆ.ಎಸ್.ಆರ್.ಟಿ.ಸಿ, ಎನ್.ಇ.ಕೆ.ಎಸ್.ಆರ್.ಟಿ.ಸಿ. ಮತ್ತು ಬಿ.ಎಂ.ಟಿ.ಸಿ ನಲ್ಲೂ ನಿರ್ವಾಹಕರ ಮತ್ತು ಇತರೆ ಎಷ್ಟು ಹುದ್ದೆಗಳು ಖಾಲಿ ಇವೆ; ಈ ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ವಿವರ ನೀಡುವುದು)

(ಊ) ಪೆಟ್ರೋಲ್, ಡೀಸೆಲ್ ಬೆಲೆ ಕಡಿಮೆಯಾಗಿರುವುದರಿಂದ ಈ ಸಂಸ್ಥೆಗಳಿಗೆ ಸಾಕಷ್ಟು ಆದಾಯ ಹರಿದು ಬರುತ್ತಿಲ್ಲವೆ; ಹಾಗಿದ್ದಲ್ಲಿ, ಈ ನಾಲ್ಕು ಸಂಸ್ಥೆಗಳ ಆದಾಯದ ವಿವರವನ್ನು ನೀಡುವುದು;

(ಋ) ಟಿಕೇಟ್ ಪ್ರವಾಣ ದರವನ್ನು ಇಳಿಸಿಲ್ಲ, ಸಂಸ್ಥೆಗಳು ಲಾಭದಾಯಕವಾಗಿ ನಡೆಯುತ್ತಿದೆ ಎಂದರೆ ಅದರ ಪ್ರಯೋಜನ ಜನಸಾಮಾನ್ಯರಿಗೆ ಸಿಗಬೇಕಲ್ಲವೆ; ಈ ಬಗ್ಗೆ ಸರ್ಕಾರದ ನಿಲುವೇನು, ತಿಳಿಸುವುದು;

(ಎ) ಖಾಲಿ ಇರುವ ಹುದ್ದೆಗಳನ್ನು ಶೀಘ್ರವಾಗಿ ನೇಮಕಾತಿ ಮಾಡಲಾಗುವುದೇ; ಈ ಬಗ್ಗೆ ಸರ್ಕಾರ ಚಿಂತನೆ ಮಾಡಿ ತೆಗೆದುಕೊಳ್ಳುವ ನಿರ್ಧಾರದ ಬಗ್ಗೆ ವಿವರ ನೀಡುವುದು?

## ತುಮಕೂರು ವಿಶ್ವವಿದ್ಯಾನಿಲಯವನ್ನು ಸ್ಥಳಾಂತರಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮೬ (೨೫೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ವಿಶ್ವ ವಿದ್ಯಾನಿಲಯವನ್ನು ಬೇರೆಡೆಗೆ ಸ್ಥಳಾಂತರಿಸಲು ಸರ್ಕಾರ ಚಿಂತಿಸಿದೆಯೇ;

(ಆ) ಹಾಗಿದ್ದಲ್ಲಿ, ವಿಶ್ವ ವಿದ್ಯಾಲಯಕ್ಕೆ ಕ್ಯಾಂಪಸ್ ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಎಲ್ಲಿ ಮತ್ತು ಎಷ್ಟು ಎಕರೆ ಜಮೀನನ್ನು ಕಾಯ್ದಿರಿಸಿದೆ; (ವಿವರ ನೀಡುವುದು)

(ಇ) ಈಗಾಗಲೇ ತುಮಕೂರಿನಲ್ಲಿರುವ ಹೆಚ್.ಎಂ.ಟಿ. ಕಾರ್ಖಾನೆಯನ್ನು ಕೇಂದ್ರ ಸರ್ಕಾರ ಮುಚ್ಚಿರುವುದರಿಂದ ಇದೆ ಸ್ಥಳದಲ್ಲಿ ವಿಶ್ವ ವಿದ್ಯಾನಿಲಯ ಕ್ಯಾಂಪಸ್ ನಿರ್ಮಿಸಲು ಸರ್ಕಾಕ್ಕಿರುವ ತೊಂದರೆ ಏನು; (ವಿವರ ನೀಡುವುದು)

(ಈ) ತಾಂತ್ರಿಕ ಶಿಕ್ಷಣ ಸೇರಿದಂತೆ ನವೀನ ರೀತಿಯ ಇನ್ನೋವೇಟಿವ್ ವಿಶ್ವ ವಿದ್ಯಾನಿಲಯವನ್ನು ಸ್ಥಾಪಿಸಲು ಯು.ಜಿ.ಸಿ. ಯಿಂದ ಅನುದಾನವನ್ನು ಪಡೆಯಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ;

(ಉ) ಸಲ್ಲಿಸಿದ್ದಲ್ಲಿ, ಯಾವಾಗ ಸಲ್ಲಿಸಲಾಗಿದೆ, ಎಷ್ಟು ಅನುದಾನವನ್ನು ಕೋರಲಾಗಿದೆ ಎಂಬ ವಿವರವನ್ನು ನೀಡುವುದು;

(ಊ) ತುಮಕೂರು ನಗರ ಸ್ಮಾರ್ಟ್ ಸಿಟಿ ಘೋಷಣೆ, ನಗರಕ್ಕೆ ಹೊಂದಿಕೊಂಡಂತೆ ಕೇಂದ್ರ ಸರ್ಕಾರದಿಂದ ಹೆಲಿಕ್ಯಾಪ್ಟರ್ ಫ್ಯಾಕ್ಟರಿ, ಫುಡ್ ಪಾರ್ಕ್, ಥೀಮ್ ಪಾರ್ಕ್‌ಗಳನ್ನು ಪ್ರಾರಂಭ ಮಾಡಲು ಘೋಷಣೆ ಮಾಡಿರುವುದರಿಂದ ಇವುಗಳಿಗೆ ಪೂರಕವಾಗಿ ಕೋರ್ಸ್‌ಗಳನ್ನು ಪ್ರಾರಂಭಿಸಿ, ಹೈಟೆಕ್ ವಿಶ್ವ ವಿದ್ಯಾನಿಲಯ ನಿರ್ಮಾಣ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೆ? (ವಿವರ ನೀಡುವುದು)

## ಬಹುಗ್ರಾಮ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿಗಳು

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮೭ (೨೫೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೨೦೧೬ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಯಾವ ಯಾವ ಹಳ್ಳಿಗೆ ಯಾವ ಯಾವ ಮೂಲಗಳಿಂದ ನೀರನ್ನು ಒದಗಿಸಲಾಗಿದೆ;

(ಆ) ಈ ಸಲುವಾಗಿ ಕೈಗೊಂಡಿರುವ ಕಾಮಗಾರಿಗಳಾವುವು; ಈ ಕಾಮಗಾರಿಗಳಿಗೆ ಖರ್ಚು ಮಾಡಿರುವ ಹಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದೇ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳಲ್ಲಿ ಬಾಕಿ ಇರುವ ಕಾಮಗಾರಿಗಳೆಷ್ಟು; ಇವುಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು;

(ಈ) ೨೦೧೬–೨೦೧೭ನೇ ಸಾಲಿಗೆ ಬಹುಗ್ರಾಮ ಕುಡಿಯುವ ನೀರನ್ನು ಒದಗಿಸಲು ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; ಮತ್ತು ಈ ಯೋಜನೆಗೆ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

# ತುಮಕೂರು ನಗರಕ್ಕೆ ಪ್ರತ್ಯೇಕ ಸಾರಿಗೆ ನಿಗಮ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮೮ (೨೫೧೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ನಗರವು ದಿನೇ ದಿನೇ ಬೆಳೆಯುತ್ತಿದ್ದು ಈಗಾಗಲೇ ಮಹಾನಗರ ಪಾಲಿಕೆ ಆಗಿದ್ದು; ಇದರ ವ್ಯಾಪ್ತಿಯಲ್ಲಿ ಹೆಲಿಕ್ಯಾಪ್ಟರ್ ಫ್ಯಾಕ್ಟರಿ, ಥೀಮ್ ಪಾರ್ಕ್ ಫುಡ್ ಪಾರ್ಕ್‌ಗಳು ಮತ್ತು ಅನೇಕ ಬಡಾವಣೆಗಳು ಹೊರವಲಯಗಳಲ್ಲಿ ನಿರ್ಮಾಣ ವಾಗುತ್ತಿರುವುದರಿಂದ ನಗರಕ್ಕೆ ಪ್ರತ್ಯೇಕವಾದ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆ ಏನು; (ವಿವರ ನೀಡುವುದು)

(ಆ) ತುಮಕೂರು ನಗರ ಸಂಪರ್ಕಿಸುವ ಹೊರವಲಯದಲ್ಲಿ ನಗರಕ್ಕೆ ಹತ್ತಿರವಿರುವ ಕೊರಟಗೆರೆ, ಶಿರಾ, ಕುಣಿಗಲ್ ಗುಬ್ಬಿ, ದಾಬಸ್‌ಪೇಟೆಯಲ್ಲಿ ಸಾಕಷ್ಟು ಎಂ.ಎನ್.ಸಿ. ಕಂಪನಿಗಳು/ ಕಾರ್ಖಾನೆಗಳು ಸ್ಥಾಪನೆಯಾಗಿರುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಪ್ರತ್ಯೇಕ ನಗರ ಸಾರಿಗೆ ಸ್ಥಾಪಿಸುವುದು ಅನುಕೂಲಕರವಲ್ಲವೆ; ಈ ಬಗ್ಗೆ ಸರ್ಕಾರ ತೀರ್ಮಾನ ತೆಗೆದುಕೊಳ್ಳುವುದೆ; (ವಿವರ ನೀಡುವುದು)

(ಇ) ತುಮಕೂರು ನಗರದ ಬಸ್ ನಿಲ್ದಾಣವು ನಗರದೊಳಗೆ ಇರುವುದರಿಂದ ಹಾಗೂ ಖಾಸಗಿ ಬಸ್ ನಿಲ್ದಾಣವು ಸಹ ಅಕ್ಕಪಕ್ಕದಲ್ಲಿರುವುದರಿಂದ ಬಸ್ ನಿಲ್ದಾಣ ಅತ್ಯಂತ ಕಿರಿದಾದ ಸ್ಥಳದಲ್ಲಿ ಇರುವ ಕಾರಣ ಭವಿಷ್ಯದ ಹಿತದೃಷ್ಟಿಯಿಂದ ಬಸ್ ನಿಲ್ದಾಣವನ್ನು ವಿಶಾಲವಾದ ಸ್ಥಳಕ್ಕೆ ಸ್ಥಳಾಂತರಿಸಲು ಸರ್ಕಾರ ಗಮನ ಹರಿಸುವುದೇ? (ತಿಳಿಸುವುದು)

## ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಕಾನೂನು ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೩೮೯ (೨೫೫೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಖಾಸಗಿ ವಿಶ್ವವಿದ್ಯಾಲಯಗಳು ಸೇರಿದಂತೆ ಅವುಗಳು ಸ್ಥಾಪನೆಗೊಂಡ ವರ್ಷದ ವಿವರ ನೀಡುವುದು;

(ಆ) ಈ ವಿಶ್ವವಿದ್ಯಾಲಯಗಳು ಬೇರೆ ಬೇರೆ ರೀತಿಯ Statute ಗಳನ್ವಯ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿಯ ವಿವಿಧ Statute ಗಳು ಇರುವುದಕ್ಕೆ ಕಾರಣಗಳೇನು;

(ಈ) ಎಲ್ಲಾ ವಿಶ್ವವಿದ್ಯಾಲಯಗಳನ್ನು ಸಮಾನ ಕಾನೂನಿನನ್ವಯ ಕೆಲಸ ನಿರ್ವಹಿಸುವಂತೆ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮ ಏನು?

## ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ವಿಭಾಗಗಳ ಅವಶ್ಯಕತೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೩೯೦ (೨೫೫೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅನುದಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾನ್ಯ ವಿಷಯವನ್ನು ಬೋಧಿಸುವ (ವೃತ್ತಿಪರ ವಿಷಯ ಆಧರಿಸಿ ವಿಶ್ವವಿದ್ಯಾಲಯಗಳನ್ನು ಹೊರತುಪಡಿಸಿ)

ವಿಶ್ವವಿದ್ಯಾಲಯಗಳಲ್ಲಿರುವ ಸ್ನಾತಕೋತ್ತರ ವಿಭಾಗಗಳಲ್ಲಿ ಮಂಜೂರಾಗಿರುವ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗಳೆಷ್ಟು; (ವಿಶ್ವವಿದ್ಯಾಲಯ ಹಾಗೂ ವಿಭಾಗಗಳ ವಿವರ ನೀಡುವುದು)

(ಆ) ಈ ಎಲ್ಲಾ ವಿಶ್ವವಿದ್ಯಾಲಯಗಳ ಎಲ್ಲಾ ಸ್ನಾತಕೋತ್ತರ ವಿಭಾಗಗಳಲ್ಲಿ ಸಂಪೂರ್ಣ ಪ್ರವೇಶಾತಿ ಆಗುತ್ತಿದೆಯೇ;

(ಇ) ಅನೇಕ ವರ್ಷಗಳಿಂದ ಈ ಮೇಲಿನ ಎಲ್ಲಾ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಎಲ್ಲಾ ವಿಷಯಗಳಲ್ಲಿ ಸ್ನಾತಕೋತ್ತರ ವಿಭಾಗಗಳನ್ನು ತೆರೆಯುವ ಅವಶ್ಯಕತೆ ಇದೆಯೇ; (ಇಲ್ಲದಿದ್ದಲ್ಲಿ, ಕಳೆದ ೩ ವರ್ಷಗಳ ವಿವರ ನೀಡುವುದು)

(ಈ) ವಿದ್ಯಾರ್ಥಿಗಳ ಕೊರತೆಯಿರುವ ವಿಭಾಗಗಳನ್ನು ಆಯ್ಕೆ ಮಾಡಿದ ವಿಶ್ವವಿದ್ಯಾಲಯಗಳಲ್ಲಿ ವಿಲೀನಗೊಳಿಸುವ ಕುರಿತು ಸರ್ಕಾರದ ಆಲೋಚನೆಗಳೇನು?

## ವಿಶ್ವವಿದ್ಯಾಲಯಗಳಲ್ಲಿ ಲಭ್ಯವಿರುವ ಹಣವನ್ನು ಬೇರೆ ಬೇರೆ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೩೯೧ (೨೫೫೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ದೊಡ್ಡಮಟ್ಟದಲ್ಲಿ ಲಭ್ಯವಿರುವ ಹಣವನ್ನು ಬೇರೆ ಬೇರೆ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ವಿದ್ಯಾರ್ಥಿಗಳಿಂದ ಹಾಗೂ ಸಂಯೋಜಿತ ಶಿಕ್ಷಣ ಸಂಸ್ಥೆಗಳು ದೊಡ್ಡ ಪ್ರಮಾಣದಲ್ಲಿ ಶುಲ್ಕ ವಸೂಲಿ ಮಾಡುತ್ತಿರುವುದರಿಂದ ವಿದ್ಯಾರ್ಥಿಗಳ ಮೇಲೆ ಹೊರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ವಿಶ್ವವಿದ್ಯಾಲಯಗಳು ಬೇರೆ ಬೇರೆ ಬ್ಯಾಂಕುಗಳಲ್ಲಿ ಇಟ್ಟ ಠೇವಣಿ ಮೊತ್ತ ಎಷ್ಟು; (ವಿವರ ನೀಡುವುದು)

(ಈ) ಈ ಕುರಿತಾಗಿ ಸರ್ಕಾರದ ಚಿಂತನೆಯೇನು, ಹಾಗೂ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ?

## ಖಾಸಗಿ ಬಸ್ಸುಗಳ ಸೀಟ್ ಆಧರಿಸಿ ಶುಲ್ಕ ಏರಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೩೯೨ (೨೫೪೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಭಾರಿಯ ಆಯವ್ಯಯದಲ್ಲಿ ಖಾಸಗಿ ಬಸ್ಸುಗಳ ಸೀಟ್ ಆಧರಿಸಿ ಹೆಚ್ಚಿಸಿರುವ ತ್ರೈಮಾಸಿಕ ಶುಲ್ಕವೆಷ್ಟು; (ವಿವರ ನೀಡುವುದು)

(ಆ) ಇದರಿಂದಾಗಿ ಖಾಸಗಿ ಬಸ್ಸುಗಳನ್ನು ಅವಲಂಬಿಸಿರುವ ಹಾಗೂ ಸರ್ಕಾರಿ ವ್ಯವಸ್ಥೆ ಇಲ್ಲದಿರುವ ಪ್ರದೇಶಗಳಲ್ಲಿ ಪ್ರಯಾಣಿಕರ ಮೇಲೆ ಹೆಚ್ಚಿನ ಆರ್ಥಿಕ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿ ಏಕಾಏಕಿ ಪ್ರತಿ ಸೀಟಿನ ಮೇಲೆ ಪಾವತಿಸಬೇಕಾದ ಶುಲ್ಕವನ್ನು ಏರಿಸಲು ಕಾರಣಗಳೇನು?

## ರಾಜ್ಯದಲ್ಲಿ ಗ್ರಾನೈಟ್ ಕ್ವಾರಿಗಳಿಗೆ ಲೈಸೆನ್ಸ್

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೩೯೩ (೨೫೪೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಎಷ್ಟು ಗ್ರಾನೈಟ್ ಕ್ವಾರಿಗಳಿಗೆ ಲೈಸೆನ್ಸ್ ನೀಡಲಾಗಿದೆ;

(ಆ) ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಸುಮಾರು ೩೫೦ ರಿಂದ ೪೦೦ ಸಣ್ಣ ಗ್ರಾನೈಟ್ ಕೈಗಾರಿಕೆಗಳಿದ್ದು, ಈ ಕೈಗಾರಿಕೆಗಳಿಗೆ ಅವಶ್ಯಕ ಕಚ್ಚಾ ಸಾಮಗ್ರಿ ಪೂರೈಕೆಯಾಗದೇ ಒಂದೊಂದಾಗಿ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಕೈಗಾರಿಕೆಗೆ ಸರಬರಾಜಾಗುವ ಕಚ್ಚಾ ಸಾಮಗ್ರಿಗೆ ವಿಧಿಸುವ State or Central Royalty, ವಿದೇಶಗಳಿಗೆ ರಫ್ತು ಮಾಡುವವರಿಗೂ ಹಾಗೂ ಸ್ಥಳೀಯವಾಗಿ ಮಾರಾಟ ಮಾಡುವವರಿಗೂ ಒಂದೇ ರೀತಿಯಾಗಿರುವುದರಿಂದ, ಈ ಕ್ವಾರಿಗಳಿಗೆ ಬೇರೆ ರಾಜ್ಯದ ಕೈಗಾರಿಕೆಗಳೊಂದಿಗೆ ಸ್ಪರ್ಧಿಸಲು ಆಗುತ್ತಿಲ್ಲದಿರುವುದರಿಂದ ಈ ಕ್ವಾರಿಗಳು ಮುಚ್ಚುವ ಸ್ಥಿತಿಯಲ್ಲಿರುವುದರಿಂದ ಸುಮಾರು ೨೦–೨೫ ಸಾವಿರ ನೇರ ಅವಲಂಬಿತ ಜನರು ಉದ್ಯೋಗವಿಲ್ಲದೆ ಬೀದಿಗೆ ಬರುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇದನ್ನು ತಪ್ಪಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಗ್ರಾಮೀಣಾಭಿವೃದ್ಧಿ ಇಲಾಖೆಯ ಪ್ರಮುಖ ಕಡತಗಳು ಕಾಣೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೯೪ (೨೫೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾಭಿವೃದ್ಧಿ ಇಲಾಖೆಯ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದ ಪ್ರಮುಖ ಕಡತಗಳು ಕಾಣೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ಕಡತಗಳು ಕಾಣೆಯಾಗಿವೆ; ಅವು ಯಾವ ಯಾವ ಯೋಜನೆಗಳ ವಿಷಯಗಳಾಗಿದ್ದವು; (ವಿವರ ನೀಡುವುದು)

(ಇ) ಅವುಗಳನ್ನು ಹುಡುಕಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಅವು ಸಿಕ್ಕಿವೆಯೇ; ಎಷ್ಟು ಕಡತಗಳು ಸಿಕ್ಕಿವೆ;

(ಈ) ಉಳಿದ ಕಡತಗಳು ಏನಾದವು; ಸರ್ಕಾರಿ ಕಡತಗಳು ಹೀಗೆ ಕಾಣೆಯಾಗಲು ಕಾರಣರಾದ ಸರ್ಕಾರಿ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಮುಂದೆ ಈ ರೀತಿ ಸರ್ಕಾರಿ ಇಲಾಖೆಗಳಲ್ಲಿ ಕಡತಗಳು ಕಾಣೆಯಾಗದಂತೆ ಯಾವ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗುವುದು?

## ನಿಯಮ ಉಲ್ಲಂಘಿಸಿ ಮಕ್ಕಳನ್ನು ತುಂಬುತ್ತಿರುವ ಶಾಲಾ ವಾಹನಗಳ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೯೫ (೨೫೮೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಶಾಲೆಗಳ ಶಾಲಾ ವಾಹನಗಳು ನಿಯಮ ಉಲ್ಲಂಘಿಸಿ ಮಕ್ಕಳನ್ನು ತುಂಬಿಕೊಂಡು ಶಾಲೆಗಳಿಗೆ ಬರುತ್ತಿರುವುದರಿಂದ ಅಪಘಾತಗಳಾಗಿ ಶಾಲಾ ಮಕ್ಕಳು ದಾರುಣ ಸಾವಿಗೆ ತುತ್ತಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕಳೆದ ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಇಂತಹ ಎಷ್ಟು ಅಪಘಾತ ಪ್ರಕರಣಗಳು ದಾಖಲಾಗಿವೆ; ಅವು ಯಾವ ಯಾವ ಸ್ಥಳಗಳಲ್ಲಿ ಮತ್ತು ಯಾವ ಯಾವ ಶಾಲೆಗಳ ವಾಹನಗಳಲ್ಲಿ ಆಗಿವೆ;

(ಇ) ವಿದ್ಯಾರ್ಥಿಗಳನ್ನು ಶಾಲೆಗಳಿಗೆ ಕರೆತರುವ ಶಾಲಾ ವಾಹನಗಳಿಗೆ ಸರ್ಕಾರವು ವಿಧಿಸಿದ ನಿಯಮಗಳೇನು;

(ಈ) ನಿಯಮ ಉಲ್ಲಂಘಿಸಿ ಶಾಲಾ ಮಕ್ಕಳನ್ನು ಅತಿಯಾಗಿ ತುಂಬಿಕೊಂಡು ಬರುತ್ತಿರುವ ಶಾಲಾ ವಾಹನಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; ಇಂತಹ ಎಷ್ಟು ವಾಹನಗಳ ಮೇಲೆ ಮತ್ತು ಖಾಸಗೀ ಶಾಲೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೩೯೬ (೨೫೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕುಡಿಯುವ ನೀರಿನ ತೊಂದರೆಯಿಂದ ಅಂದರೆ ಕ್ಲೋರೈಡ್ ಮಿಶ್ರಿತ ನೀರು ಕುಡಿಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ೨೦೧೫–೧೬ನೇ ಸಾಲಿನಲ್ಲಿ ಒಟ್ಟು ಎಷ್ಟು ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ; ಯಾವ ಯಾವ ಸ್ಥಳಗಳಲ್ಲಿ ಸ್ಥಾಪಿಸಲಾಗಿದೆ; (ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತೆರೆಯುವ ಯೋಜನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲಾಗುವುದು?

## ಸ್ಥಳೀಯ ಸಂಸ್ಥೆಗಳ ಸದಸ್ಯರಿಗೆ ಯಶಸ್ವಿನಿ ಆರೋಗ್ಯ ವಿಮೆ ಮಾಡಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೯೭ (೨೫೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರ ಆರೋಗ್ಯದ ಹಿತದೃಷ್ಟಿಯಿಂದ 'ಯಶಸ್ವಿನಿ ಆರೋಗ್ಯ ವಿಮೆ' ಅಂತಹ ಯಾವುದೇ ಹೊಸ ಆರೋಗ್ಯ ವಿಮಾ ಯೋಜನೆ ಜಾರಿ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಈ ಯೋಜನೆಯು ಯಾವಾಗ ಜಾರಿಗೆ ಬರುತ್ತದೆ;

(ಇ) ಈ ಯೋಜನೆ ಜಾರಿಗೊಂಡರೆ, ಯೋಜನೆಗೆ ಹಣ ತುಂಬಲು ಸದಸ್ಯರ ಮತ್ತು ಸರ್ಕಾರದ ಶೇಕಡಾವಾರು ಪಾಲೆಷ್ಟು?

## ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯಡಿ ಶಿಕ್ಷಣ ಪಡೆದ ವಿದ್ಯಾರ್ಥಿಗಳ ಶುಲ್ಕ ಭರಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೮ (೨೫೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯಿದೆ (ಆರ್.ಟಿ.ಇ)ಯಡಿ ಶಿಕ್ಷಣ ಪಡೆವ ವಿದ್ಯಾರ್ಥಿಗಳ ಶಿಕ್ಷಣದ ಶುಲ್ಕವನ್ನು ಸರ್ಕಾರವು ಭರಿಸದೆ ಇರುವುದರಿಂದ ಖಾಸತಿ ಶಿಕ್ಷಣ ಸಂಸ್ಥೆಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಆರ್.ಟಿ.ಇ. ಅಡಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಇ) ಬೆಳಗಾವಿ ಜಿಲ್ಲೆಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ಆರ್.ಟಿ.ಇ. ಅಡಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಖಾಸಗಿ ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ೨೦೧೫–೧೬ನೇ ಒಟ್ಟು ನೀಡಬೇಕಾದ ಶಿಕ್ಷಣ ಶುಲ್ಕ ಎಷ್ಟು; ಈಗಾಗಲೇ ಪಾವತಿಸಿರುವ ಶುಲ್ಕವೆಷ್ಟು; ಇನ್ನು ಪಾವತಿಸಬೇಕಾದ ಬಾಕಿ ಶುಲ್ಕವೆಷ್ಟು; (ತಾಲ್ಲೂಕುವಾರು, ಖಾಸಗಿ ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಉ) ಆರ್.ಟಿ.ಇ. ಯೋಜನೆಯಡಿ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶ ಪಡೆಯಲು ಇರುವ ಮಾನದಂಡಗಳೇನು?

## ಗ್ರಾಮ ಸ್ವರಾಜ್ ಯೋಜನೆಯಡಿ ಖರೀದಿಯಲ್ಲಿ ಆಗಿರುವ ಅವ್ಯವಹಾರದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೯೯ (೨೫೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಸ್ವರಾಜ್ ಯೋಜನೆಯಲ್ಲಿ ೫೯೨೯ ಗ್ರಾಮ ಪಂಚಾಯತ್‌ಗಳಿಗೆ ಖರೀದಿಸಿರುವ ಕಂಪ್ಯೂಟರ್ ಮತ್ತು ಪರಿಕರಗಳಿಗೆ ಸಂಬಂಧಿಸಿದಂತೆ ಅವ್ಯವಹಾರ ಆಗಿರುವುದು ನಿಜವೇ;

(ಆ) ಸದರಿ ಅವ್ಯವಹಾರಕ್ಕೆ ಸಂಬಂಧಿಸಿದ ತನಿಖಾ ಸಮಿತಿ ರಚಿಸಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಇ) ಸಮಿತಿಯು ಯಾವ ಯಾವ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್‌ಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದೆ;

(ಈ) ಸದರಿ ಸಮಿತಿಯು ಮಧ್ಯಂತರ ವರದಿಯನ್ನು ಸಲ್ಲಿಸಿದೆಯೇ; (ಮುಖ್ಯಾಂಶಗಳನ್ನು ನೀಡುವುದು)

(ಉ) ತನಿಖಾ ಸಮಿತಿಯ ಅಧ್ಯಕ್ಷರ ಪತ್ರಗಳಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಉತ್ತರ ನೀಡದೇ ಇರುವುದು ಹಾಗೂ ತನಿಖೆಗೆ ಹಾಲಿ ಮತ್ತು ಮಾಜಿ ಅಧಿಕಾರಿಗಳು ಸಹಕಾರ ನೀಡದಿರುವುದು ನಿಜವೇ; ಒಟ್ಟಾರೆ ಈ ಪ್ರಕರಣದ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ರಾಜ್ಯ ಸರ್ಕಾರಿ ಸಾರಿಗೆ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೦೦ (೨೫೨೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿವಿಧ ದರ್ಜೆಯ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ರಾಜ್ಯ ಸರ್ಕಾರಿ ಸಾರಿಗೆ ಸಂಸ್ಥೆಯ ಎಲ್ಲಾ ಬಸ್ಸುಗಳಲ್ಲಿ GPS-ಕಣ್ಗಾವಲು ಸೌಲಭ್ಯ ಅಳವಡಿಸಲಾಗಿದೆಯೇ; (ವಿವರ ನೀಡುವುದು)

(ಇ) ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆಗಾಗಿ ಸಿ.ಸಿ. ಕ್ಯಾಮರಾ ಅಳವಡಿಸುವ ಯೋಜನೆ ಜಾರಿಯಲ್ಲಿದೆಯೇ;

(ಈ) ಇಲ್ಲಿಯವರೆಗೆ ಒಟ್ಟು ಎಷ್ಟು ಬಸ್ಸುಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಲಾಗಿದೆ; (ವಿವರ ನೀಡುವುದು)

(ಉ) ರಾಜ್ಯ ಸರ್ಕಾರಿ ಸಾರಿಗೆ ಸಂಸ್ಥೆಯ ಎಲ್ಲಾ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆಗಾಗಿ ಸಿ.ಸಿ. ಕ್ಯಾಮರಾ ಅಳವಡಿಕೆ GPS- ಕಣ್ಗಾವಲು ವ್ಯವಸ್ಥೆ ಅಳವಡಿಸುವುದು, ಪ್ರಯಾಣಿಕರೊಂದಿಗೆ ಸೌಜನ್ಯಯುತವಾಗಿ ವ್ಯವಹರಿಸುವಂತೆ ಸಿಬ್ಬಂದಿಗಳಿಗೆ ತರಬೇತಿ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)

## ನಮೂನೆ ೯,೧೧,೧೧ಬಿ ವಿತರಿಸುವ ಸಂಬಂಧದ ನಿಯಾಮಾವಳಿ ಸರಳೀಕರಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೦೧ (೨೫೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಮೂಲಕ ಆಸ್ತಿಗಳಿಗೆ ವಿತರಿಸುವ ನಮೂನೆ ೯,೧೧,೧೧ಬಿ ಸಂಬಂಧ ಗೊಂದಲಗಳು ಮುಂದುವರಿದು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಯಾವ ಯಾವ ಜಿಲ್ಲೆಗಳಿಗೆ ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡಲಾಗಿತ್ತು; ವಿನಾಯಿತಿ ಮುಂದುವರೆದಿದೆಯೇ; ಇಲ್ಲವಾದಲ್ಲಿ ಕಾರಣಗಳೇನು;

(ಇ) ಇ–ಸ್ವತ್ತು ತಂತ್ರಾಂಶದಿಂದ ವಿನಾಯಿತಿ ನೀಡುವ ಬದಲು, ನಮೂನೆ ೯ ಮತ್ತು ೧೧, ೧೧ಬಿ ವಿತರಿಸುವ ಸಂಬಂಧ ನಿಯಮಾವಳಿಯನ್ನು ಕರಾವಳಿ ಜಿಲ್ಲೆಗಳಿಗೆ ಸರಳೀಕರಣಗೊಳಿಸುವುದರಿಂದ ಸಮಸ್ಯೆ ಪರಿಹಾರ ಮಾಡಬಹುದೆನ್ನುವುದನ್ನು ಸರ್ಕಾರ ಗಮನಿಸಿಲ್ಲವೇ;

(ಈ) ಕರಾವಳಿ ಜಿಲ್ಲೆಗಳಲ್ಲಿ ನಮೂನೆ ೯ ಮತ್ತು ೧೧ ನಿಯಮಾವಳಿ ಸರಳೀಕರಣ ಮತ್ತು ತುಂಡು ಭೂಮಿಯ ಭೌಗೋಳಿಕ ವ್ಯವಸ್ಥೆ ಹೊಂದಿರುವ ಈ ಪ್ರದೇಶದಲ್ಲಿ ೫೦ಸೆಂಟ್ಸ್ ಮಿತಿಗೊಳಪಟ್ಟು ವಿಭಜನೆಗೂ ಅವಕಾಶ ನೀಡುವ ಬಗ್ಗೆ ಸರ್ಕಾರದ ನಿಲುವೇನು; ಈ ಎಲ್ಲಾ ಗೊಂದಲ ನಿವಾರಿಸಿ, ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ಶಾಧಿ ಭಾಗ್ಯ ಯೋಜನೆಯ ಅನುದಾನ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೦೨ (೨೫೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಶಾಧಿ ಭಾಗ್ಯ" ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಖರ್ಚುಮಾಡಿದ ಅನುದಾನ ಎಷ್ಟು; (ವರ್ಷವಾರು–ಜಿಲ್ಲಾವಾರು ವಿವರ ಒದಗಿಸುವುದು)

(ಆ) "ಶಾಧಿ ಭಾಗ್ಯ" ಯೋಜನೆಯಡಿ ಯಾವ ಧರ್ಮದ ಎಷ್ಟು ಜನರು ಪ್ರಯೋಜನ ಪಡೆದಿರುತ್ತಾರೆ; (೩ ವರ್ಷದ–ವಿವಿಧ ವರ್ಗವಾರು ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯ ಇತರ ಯೋಜನೆಗಳಿಗೆ ಕಳೆದ ೨ ವರ್ಷದಲ್ಲಿ ನಿಗಧಿಪಡಿಸಿದ, ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು? (ಯೋಜನಾವಾರು, ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

## ಸಬ್ಸಿಡಿ ಬಿಡುಗಡೆಯಲ್ಲಿ ವಿಳಂಬ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೦೩ (೨೫೨೦) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಣ್ಣ ಕೈಗಾರಿಕೆ ಇಲಾಖೆಯಡಿ ಸ್ವಂತ ಉದ್ಯಮ ಪ್ರಾರಂಭಿಸಲು ಲಭ್ಯವಿರುವ ಯೋಜನೆಗಳಾವುವು; (ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳಿಗೆ ಕಳೆದ ೨ ವರ್ಷಗಳಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಮತ್ತು ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಷವಾರು ಜಿಲ್ಲಾವಾರು ವಿವರ ನೀಡುವುದು)

(ಇ) P.M.E.G.P. ಸೇರಿದಂತೆ ವಿವಿಧ ಯೋಜನೆಗಳಲ್ಲಿ ಇಲಾಖೆಯ ಮೂಲಕ ವಿತರಿಸಲಾದ ಸಬ್ಸಿಡಿ ಮೊತ್ತ ಎಷ್ಟು; ಸರ್ಕಾರದಿಂದ ಬಿಡುಗಡೆಯಾದ ಫಲಾನುಭವಿಗೆ ಪಾವತಿಸಿದ ಮತ್ತು ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು; (ಯೋಜನೆವಾರು–ಜಿಲ್ಲಾವಾರು ೨ ವರ್ಷದ ಮಾಹಿತಿ ನೀಡುವುದು)

(ಈ) ವಿವಿಧ ಯೋಜನೆಗಳಲ್ಲಿ ಸಬ್ಸಿಡಿ ಮೊತ್ತ ಪಾವತಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ, ಶೀಘ್ರವಾಗಿ ಸಬ್ಸಿಡಿ ಸೇರಿದಂತೆ ಇತರೇ ಅನುದಾನ ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ಒದಗಿಸುವುದು)

## ತುರುವೇಕೆರೆ ತಾಲ್ಲೂಕಿನ ಶಾಲೆಗಳ ದುರಸ್ಥಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೪೦೪ (೨೫೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಗ್ರಾಮವಾರು ಮಾಹಿತಿ ನೀಡುವುದು)

(ಆ) ಅನೇಕ ವರ್ಷಗಳಿಂದ ರಿಪೇರಿ ಆಗದೆ ಹಾಳಾಗಿರುವ ಕಟ್ಟಡಗಳು ಎಷ್ಟು; ಅವು ಯಾವುವು;

(ಇ) ಆ ಕಟ್ಟಡಗಳನ್ನು ದುರಸ್ಥಿ ಮಾಡದಿರಲು ಕಾರಣವೇನು; ಯಾವಾಗ ದುರಸ್ಥಿ ಮಾಡಲಾಗುವುದು;

(ಈ) ಕಟ್ಟಡಗಳಿಲ್ಲದ ಶಾಲೆಗಳಿಗೆ ಯಾವಾಗ ಕಟ್ಟಡ ನಿರ್ಮಿಸಲಾಗುವುದು?

## ಕೆ.ಐ.ಎ.ಡಿ.ಬಿ. ಯ ಕೈಗಾರಿಕೆ ಭೂಮಿಯನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೪೦೫ (೨೫೯೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ. ಯ ಕೈಗಾರಿಕೆ ಪ್ರದೇಶದಲ್ಲಿ ಭೂಮಿಯನ್ನು ನೀಡಲು ಜಾತಿವಾರು ಮಾನದಂಡವೇನು;

(ಆ) ಕಳೆದ ೩ ವರ್ಷದಲ್ಲಿ ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಭೂಮಿಯನ್ನು ಯಾರ್‍ಯಾರಿಗೆ ಹಂಚಿಕೆ ಮಾಡಲಾಗಿದೆ? (ವಿವರ ನೀಡುವುದು)

## ತಾಲ್ಲೂಕು ಪಂಚಾಯತಿಗೆ ನೀಡುವ ಅನುದಾನದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೪೦೬ (೨೫೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನ ಪ್ರತಿ ತಾಲ್ಲೂಕು ಪಂಚಾಯತಿಗೆ ಒದಗಿಸಲಾಗಿರುವ ಅನುದಾನ ಎಷ್ಟು; ಆ ಪೈಕಿ ಕೇಂದ್ರ ಹಾಗೂ ರಾಜ್ಯದ ಪಾಲಿನ ಪ್ರತ್ಯೇಕ ವಿವರ ನೀಡುವುದು;

(ಆ) ೧೪ನೇ ಹಣಕಾಸನ್ನು ಪ್ರತಿ ತಾಲ್ಲೂಕು ಪಂಚಾಯತಿಗೆ ನೀಡಲಾಗಿದೆಯೇ;

(ಇ) ನೀಡಲಾಗಿದ್ದರೆ, ವರ್ಷವೊಂದಕ್ಕೆ ಎಷ್ಟು ಅನುದಾನ ನೀಡಲಾಗುವುದು;

(ಈ) ಇಲ್ಲವಾದರೆ, ಕಾರಣ ನೀಡುವುದು;

(ಉ) ಅನುದಾನ ಬಿಡುಗಡೆ ಮಾಡಿಲ್ಲದಿದ್ದರೆ, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೇ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ 'ಡಿ' ಗ್ರೂಪ್ ನೌಕರರ ಖಾಯಂಗೊಳಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೪೦೭ (೨೫೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅನಿಪುಣ ಅಂಶಕಾಲಿಕ ಡಿ ಗ್ರೂಪ್ ನೌಕರರ ಸಂಖ್ಯೆ ಎಷ್ಟು; ಯಾರು ಯಾರು;

(ಆ) ಸದರಿ ನೌಕರರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ;

(ಇ) ಈ ನೌಕರರನ್ನು ಇದುವರೆವಿಗೂ ಖಾಯಂಗೊಳಿಸದಿರಲು ಕಾರಣಗಳೇನು; ಯಾವಾಗ ಖಾಯಂಗೊಳಿಸಲಾಗುವುದು;

(ಈ) ಸದರಿ ನೌಕರರಿಗೆ ಈಗ ನೀಡುತ್ತಿರುವ ಗೌರವ ಧನವೆಷ್ಟು;

(ಉ) ನೌಕರರನ್ನು ಖಾಯಂಗೊಳಿಸಲಾಗುವವರೆಗೆ ಗೌರವ ಧನವನ್ನಾದರೂ ಹೆಚ್ಚಿಸಬಹುದಲ್ಲವೆ; ಹಾಗಿದ್ದಲ್ಲಿ, ಎಷ್ಟು ಗೌರವಧನ ನೀಡಲಾಗುವುದು; ಯಾವಾಗಿನಿಂದ ಪ್ರಾರಂಭಿಸಲಾಗುವುದು?

## ತುರುವೇಕೆರೆ ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೪೦೮ (೨೫೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಗ್ರಾಮ ಪಂಚಾಯ್ತಿಗಳೆಷ್ಟು; ಅವು ಯಾವುವು;

(ಆ) ಕುಡಿಯುವ ನೀರಿಗೆ ಹಾಹಾಕಾರ ಆಗಿರುವ ಗ್ರಾಮಗಳಾವುವು;

(ಇ) ಸಮಸ್ಯೆ ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗದವರಿಗೆ ಕೈಗಾರಿಕಾ ಶೆಡ್ ಮತ್ತು ನಿವೇಶನಗಳ ಮಂಜೂರಾತಿಯಲ್ಲಿನ ತಾರತಮ್ಮ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೦೯ (೨೬೩೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಿಸಿರುವ ಯಾವುದೇ ಕೈಗಾರಿಕಾ ಶೆಡ್ಡು ಮತ್ತು ನಿವೇಶನಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಹಂಚುವಲ್ಲಿ ಸೂಕ್ತ ಪ್ರಾತಿನಿಧ್ಯ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ತಾರತಮ್ಯ ಮಾಡಲು ಕಾರಣಗಳೇನು;

(ಇ) ಈ ಜನಾಂಗದವರಿಗೆ ಆಗಿರುವ ಅನ್ಯಾಯವನ್ನು ಯಾವ ರೀತಿಯಲ್ಲಿ ಸರಿಪಡಿಸಲಾಗುವುದು?

## ಚಿಕ್ಕಮಗಳೂರು ಶಿಥಿಲಾವಸ್ಥೆಯಲ್ಲಿರುವ ಶಾಲೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೧೦ (೨೬೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡಗಳನ್ನು ಹೊಂದಿರುವ ಮಾಡಿರುವ ಮೊತ್ತವೆಷ್ಟು;

(ಇ) ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಕಟ್ಟಡಗಳ ದುರಸ್ತಿಗೆಂದು ಕಳೆದ ಎರಡು ವರ್ಷಗಳಲ್ಲಿ ಮಂಜೂರು ಮಾಡಿರುವ ಮೊತ್ತವೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಈ) ಅನೇಕ ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ, ಕೊಠಡಿಗಳ ಕೊರತೆ, ಶೌಚಾಲಯಗಳ ಕೊರತೆ, ಕುಡಿಯುವ ನೀರಿನ ಕೊರತೆ ಶಿಥಿಲಗೊಂಡ ಕೊಠಡಿಗಳಲ್ಲಿ ವ್ಯಾಸಂಗ ಇಂತಹ ಅನೇಕ ಸಮಸ್ಯೆಗಳಿಂದ ಮಕ್ಕಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

(ಉ) ಹಾಗಿದ್ದಲ್ಲಿ, ಅಂತಹ ಶಾಲೆಗಳಾವುವು; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಜಿಲ್ಲಾ ಪಂಚಾಯತಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರಿಗೆ ನೀಡುವ ಸ್ಥಾನಮಾನ ಹಾಗೂ ಸೌಲಭ್ಯಗಳು ಮತ್ತು ಗ್ರಾಮ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಸದಸ್ಯರ ಗೌರವಧನದಲ್ಲಿ ಹೆಚ್ಚಳ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೧೧ (೨೫೪೯+೨೫೭೩)) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾ ಪಂಚಾಯಿತಿ ಅಧ್ಯಕ್ಷರಿಗೆ ನೀಡಿರುವ ಸ್ಥಾನಮಾನ ಸೌಲಭ್ಯ ವೇತನ ಮತ್ತು ಇತರೆ ಭತ್ಯೆಗಳೇನು; ಸದರಿಯವರಿಗೆ ಸಚಿವರ ಸ್ಥಾನಮಾನ ನೀಡುವ ಬಗ್ಗೆ ಸರ್ಕಾರ ನೀಡಿದ್ದ ಭರವಸೆಯನ್ನು ಈಡೇರಿಸಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಅಧಿಕಾರಗಳನ್ನು, ಸೌಲಭ್ಯಗಳನ್ನು ನೀಡಲಾಗಿದೆ; (ವಿವರ ನೀಡುವುದು)

(ಇ) ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ಈಗ ನೀಡಲಾಗುತ್ತಿರುವ ಮಾಸಿಕ ಸಂಭಾವನೆ ಎಷ್ಟು ಹಾಗೂ ಒದಗಿಸುತ್ತಿರುವ ಇತರ ಸೌಲಭ್ಯಗಳು ಯಾವುವು; (ವಿವರ ನೀಡುವುದು)

(ಈ) ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷರುಗಳಿಗೆ ಈಗ ನೀಡಿರತಕ್ಕ ಸ್ಥಾನಮಾನ ಮತ್ತು ವೇತನ ಭತ್ಯೆಗಳೆಷ್ಟು; ಇವರುಗಳಿಗೂ ಕೂಡಾ ಹೆಚ್ಚಿನ ಸ್ಥಾನಮಾನ ಮತ್ತು ವೇತನ ಭತ್ಯೆಯನ್ನು ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಉ) ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಸದಸ್ಯರು ಕಾರ್ಯನಿಮಿತ್ತ ಜಿಲ್ಲಾ ಮತ್ತು ವಿಭಾಗ ಕೇಂದ್ರಕ್ಕೆ ಹೋಗಿ ಬರಲು ಉಚಿತ ಬಸ್ ಪಾಸ್ ವ್ಯವಸ್ಥೆಯನ್ನು ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ; ಇವರುಗಳಿಗೆ ನೀಡುತ್ತಿರುವ ಗೌರವಧನ ಬಹಳ ಕಡಿಮೆಯಿರುವುದರಿಂದ ಇದನ್ನು ಹೆಚ್ಚಿಸಲು ಕ್ರಮ ಜರುಗಿಸಲಾಗುವುದೇ?

## ಹೆಚ್.ಡಿ. ಕೋಟೆಯ ಆದರ್ಶ ಶಾಲೆಯಲ್ಲಿ ಶಿಕ್ಷಕರು ಮತ್ತು ಮೂಲಭೂತ ಸೌಲಭ್ಯಗಳ ಕೊರತೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

೨೪೧೨ (೨೫೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನಕೋಟೆಯಲ್ಲಿ ಆದರ್ಶ ಶಾಲೆ ಯಾವಾಗ ಪ್ರಾರಂಭವಾಯಿತು; ಈಗ ಈ ಶಾಲೆ ಎಲ್ಲಿ ನಡೆಯುತ್ತಿದೆ; ಸ್ವಂತ ಕಟ್ಟಡ ಕಾಮಗಾರಿ ಯಾವ ಹಂತದಲ್ಲಿದೆ; ಇದಕ್ಕಾಗಿ ಮಂಜೂರಾಗಿರುವ ಬಿಡುಗಡೆ ಆಗಿರುವ ಅನುದಾನ ಎಷ್ಟು; ಕಾಮಗಾರಿ ಯಾವ ಹಂತದಲ್ಲಿದೆ;

(ಆ) ೬ ರಿಂದ ೧೦ನೇ ತರಗತಿಯವರೆಗಿನ ಈ ಶಾಲೆಯಲ್ಲಿ ಸುಮಾರು ೪೦೦ ವಿದ್ಯಾರ್ಥಿಗಳಿದ್ದು, ಹಳೆಯ ಕಟ್ಟಡದಲ್ಲಿ ನಡೆಯುತ್ತಿರುವ ಈ ಶಾಲೆಯಲ್ಲಿ ಒಂದೊಂದು ಕೊಠಡಿಯಲ್ಲಿ ೭೦-೮೦ ವಿದ್ಯಾರ್ಥಿಗಳು ಕುಳಿತು ಶಿಕ್ಷಣ ಪಡೆಯುವ ಸಂದರ್ಭ ಒದಗಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೆಂಚ್, ಡೆಸ್ಕ್ ಬೋರ್ಡ್, ಕುಡಿಯುವ ನೀರು ಮೊದಲಾದ ಮೂಲಭೂತ ಸೌಲಭ್ಯಗಳ ಕೊರತೆ ಮತ್ತು ಶಿಕ್ಷಕರ ಕೊರತೆ (೪೦೦ ವಿದ್ಯಾರ್ಥಿಗಳಿಗೆ ಕೇವಲ ೮ ಶಿಕ್ಷಕರು) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಡಿ-ಗ್ರೂಪ್ ಸಿಬ್ಬಂದಿ ಇಲ್ಲದೆ ವಿದ್ಯಾರ್ಥಿಗಳೇ ಆ ಕೆಲಸವನ್ನೂ ನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆಯೇ; ಈ ಕೊರತೆಗಳನ್ನು ನಿವಾರಿಸಿ ಸುಸಜ್ಜಿತವಾದ ರೀತಿಯಲ್ಲಿ ಶಾಲೆಯನ್ನು ನಡೆಸಲು ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು?

## ಗ್ರಾಮ ಪಂಚಾಯಿತಿಗಳಲ್ಲಿರುವ ದಿನಗೂಲಿ ನೌಕರರ ಖಾಯಂಯಾತಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೧೩ (೨೫೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು ; ಈ ದಿನಗೂಲಿ ನೌಕರರಿಗೆ ಈಗ ನೀಡುತ್ತಿರುವ ದಿನಗೂಲಿ ಎಷ್ಟು ; ಇವರಿಗೆ ನಿಯಮಗಳ ಪ್ರಕಾರ ಕನಿಷ್ಠ ವೇತನ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಗ್ರಾಮ ಪಂಚಾಯಿತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕರ ವಸೂಲಿಗಾರರು, ಕಂಪ್ಯೂಟರ್ ಆಪರೇಟರ್‌ಗಳು, ನೀರಗಂಟಿಗಳ ಸೇವೆಯನ್ನು ಖಾಯಂ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಮೈಸೂರು ನಗರ ಸಾರಿಗೆ ಸೌಲಭ್ಯದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೧೪ (೨೫೬೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ರೈಲ್ವೆ ನಿಲ್ದಾಣದಿಂದ ವಿವಿಧ ಬಡಾವಣೆಗಳಿಗೆ ಅದರಲ್ಲೂ ಕುವೆಂಪುನಗರ, ವಿವೇಕಾನಂದನಗರ, ರಾಮಕೃಷ್ಣನಗರ, ಶ್ರೀರಾಮಪುರ ಶಾರದಾದೇವಿನಗರ, ಜೆ.ಪಿ.ನಗರ, ಜಯನಗರ, ತೊಣಚಿಕೊಪ್ಪಲ್ ಈ ಬಡಾವಣೆಗಳಿಗೆ ಹೋಗುವ ಮತ್ತು ಅಲ್ಲಿಂದ ಬರುವ ನಗರ ಸಾರಿಗೆ ಬಸ್‌ಗಳ ಸಂಖ್ಯೆ ಬಡಾವಣೆಗಳಿಂದ ಹೊರಡುವ ಮತ್ತು ರೈಲ್ವೆ ನಿಲ್ದಾಣದಿಂದ ಹೋಗುವ ವೇಳಾ ಪಟ್ಟಿಯನ್ನು ಒದಗಿಸುವುದು ;

(ಆ) ಮೈಸೂರು ರೈಲ್ವೆ ನಿಲ್ದಾಣದಿಂದ ಬೆಳಗಿನ ಜಾವ ೪–೩೦ ರಿಂದ ಬೆಳಿಗ್ಗೆ ೧೧–೩೦ರೊಳಗೆ ಸುಮಾರು ೧೮ ರೈಲುಗಳು ಹೋಗುವುದು. ೧೮ ರೈಲುಗಳು ಬರುವುದು ಇದ್ದು ಸಾವಿರಾರು ಪ್ರಯಾಣಿಕರು ಮೈಸೂರಿಗೆ ಬಂದು ಹೋಗುವುದರಿಂದ ಈ

ಬಡಾವಣೆಗಳಿಗೆ ಹಾಗೂ ಇತರೆ ಬಡಾವಣೆಗಳಿಗೆ ರೈಲ್ವೆ ನಿಲ್ದಾಣದಿಂದ ಹೋಗಿ ಬರಲು ನಗರ ಸಾರಿಗೆ ಬಸ್ ಸೌಲಭ್ಯ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೇಲ್ಕಂಡ ಬಡಾವಣೆಗಳಿಗೆ ರೈಲು ನಿಲ್ದಾಣದಿಂದ ಮೇಲೆ ಸೂಚಿಸಿದ ಸಮಯದಲ್ಲಿ ಹೆಚ್ಚು ನಗರ ಸಾರಿಗೆ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಚಾಮರಾಜನಗರ ಜಿಲ್ಲೆಯಲ್ಲಿ ಸ್ವಚ್ಛ ಭಾರತ ಯೋಜನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೧೫ (೨೫೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಚಾಮರಾಜನಗರ ಜಿಲ್ಲೆಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ಸ್ವಚ್ಛ ಭಾರತ ಯೋಜನೆ ಅಡಿಯಲ್ಲಿ ಎಷ್ಟು ವೈಯುಕ್ತಿಕ ಶೌಚಾಲಯಗಳನ್ನು ನಿರ್ಮಿಸುವ ಗುರಿ ಹೊಂದಲಾಗಿತ್ತು ; ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಯಿತು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ ; ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಯಳಂದೂರು ತಾಲ್ಲೂಕನ್ನು ಸಂಪೂರ್ಣ ಬಯಲು ಬಹಿರ್ದೆಸೆ ಮುಕ್ತ ತಾಲ್ಲೂಕನ್ನಾಗಿ ಘೋಷಿಸುವ ಯೋಜನೆ ಹಾಕಿಕೊಳ್ಳಲಾಗಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

**ಆರ್.ಟಿ.ಓ. ಕಛೇರಿಯನ್ನು ತೆರೆಯುವ ಬಗ್ಗೆ.**

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :**

೨೪೧೬ (೨೫೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರತಿ ತಾಲ್ಲೂಕಿನಲ್ಲಿ ಇರುವ ಒಟ್ಟು ವಾಹನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನಲ್ಲಿ ಉಪ ಸಾರಿಗೆ ಆಯುಕ್ತರ ಕಛೇರಿಯನ್ನು (ARTO) ಯಾವಾಗ ತೆರೆಯಲಾಗುವುದು, ಇಲ್ಲವಾದಲ್ಲಿ, ಕಾರಣವೇನು ?

(ಇ) ಉಪ ಸಾರಿಗೆ ಆಯುಕ್ತರ ಕಛೇರಿ ತೆರೆಯಲು ಇರುವ ಮಾನದಂಡಗಳೇನು ; ಮಾನದಂಡವನ್ನು ಮೀರಿ ತೆರೆದಿರುವ ಉಪ ಸಾರಿಗೆ ಆಯುಕ್ತರ ಕಛೇರಿಗಳು ಯಾವುವು ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ ಗ್ರಾಮಪಂಚಾಯಿತಿಗಳ.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೧೭ (೨೫೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ ಗ್ರಾಮಪಂಚಾಯಿತಿಗಳ ಸಂಖ್ಯೆ ಎಷ್ಟು ; ಅವು ಯಾವುವು : (ತಾಲ್ಲೂಕುವಾರು, ವರ್ಷವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜಿಗೆ ಪಾವತಿಸಲಾದ ಒಟ್ಟು ಮೊತ್ತವೆಷ್ಟು ; ಮತ್ತು ಪಾವತಿಸಲು ಬಾಕಿ ಇರುವ ಒಟ್ಟು ಮೊತ್ತವೆಷ್ಟು ? (ತಾಲ್ಲೂಕುವಾರು ವರ್ಷವಾರು, ಗ್ರಾಮ ಪಂಚಾಯತಿವಾರು ವಿವರ ನೀಡುವುದು)

## ರಾಜ್ಯದಲ್ಲಿನ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾದ ರಸ್ತೆಗಳಲ್ಲಿ ಬಸ್ ಸಂಚಾರ ಇಲ್ಲದಿರುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೧೮ (೨೪೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ರಸ್ತೆಗಳಲ್ಲಿ ಖಾಸಗಿ ಅಥವಾ ಸರ್ಕಾರಿ ಬಸ್ಸುಗಳು ಸಂಚರಿಸದೆ ಇರಲು ಕಾರಣವೇನು ; ಇಂತಹ ರಸ್ತೆಗಳಲ್ಲಿ ಬಸ್ಸುಗಳನ್ನು ಓಡಿಸಲಾಗುವುದೇ ;

(ಆ) ರಾಜ್ಯದಲ್ಲಿ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ರಸ್ತೆಗಳನ್ನು ಬಸ್ಸುಗಳ ಸಂಚಾರಕ್ಕೆ ಬೇಡಿಕೆ ಇಲ್ಲದಿದ್ದಲ್ಲಿ ಇಂತಹ ನಿರುಪಯುಕ್ತ ರಸ್ತೆಗಳನ್ನು ನಿರ್ಮಿಸಿದವರನ್ನು ಹೊಣೆ ಮಾಡಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಧ್ವನಿ ಇಲ್ಲದವರ ನಡೆಯಬೇಕಾದಂತಹ ಇಲಾಖೆ ನಡೆಯಿದ್ದವರ ಧ್ವನಿಯಾಗಿರುವುದು ಸರಿಯೇ ?

## ರಾಜ್ಯದಲ್ಲಿ ನೂತನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಇರುವ ಮಾನದಂಡಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೮೯ (೨೪೯೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಮುಚ್ಚುವ ಉದ್ದೇಶವನ್ನು ಸರ್ಕಾರ ಹೊಂದಿದೆ ; ಮತ್ತು ಮುಚ್ಚುವ ಕಾರಣಗಳೇನು ;

(ಆ) ರಾಜ್ಯದಲ್ಲಿ ನೂತನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕಡಬಕ್ಕೆ ಸುಮಾರು ೧೦ ವರ್ಷಗಳಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗಾಗಿ ಬೇಡಿಕೆ ಸಲ್ಲಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ ನೂತನ ಸರ್ಕಾರಿ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇಲ್ಲವಾದಲ್ಲಿ ಕಾರಣವೇನು ?

## ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳ ಕೊರತೆ

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೦ (೨೫೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ,

ಕೊಠಡಿಗಳು, ಲ್ಯಾಬ್ ಇತ್ಯಾದಿಗಳಿಲ್ಲದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ : ಹಾಗಿದ್ದಲ್ಲಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂತಹ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇವೆ; ಸದರಿ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಸದರಿ ಕಾಲೇಜುಗಳಿಗೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು, ಖಾಲಿ ಇರುವ ಹುದ್ದೆಗಳು ಎಷ್ಟು, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಡೊನೇಷನ್ ಹಾವಳಿ

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೧ (೨೫೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಕಾಲೇಜುಗಳು ಅಭಿವೃದ್ಧಿ ಶುಲ್ಕದ ನೆಪದಲ್ಲಿ ವಸೂಲಿ ಮಾಡುತ್ತಿರುವ ಡೊನೇಷನ್ ಹಾವಳಿಯಿಂದ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಡೊನೇಷನ್ ಹಾವಳಿಯನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಹಿಂದಿನ ವರ್ಷದ ಅವಧಿಯಲ್ಲಿ ಯಾವುದಾದರೂ ಕಾಲೇಜಿನ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಖಾಸಗಿ ಕಾಲೇಜುಗಳಿವೆ? (ವಿವರ ನೀಡುವುದು)

## ಗ್ರಾಮ ಸ್ವರಾಜ್ ೨ನೇ ಹಂತದ ಯೋಜನೆ

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೨ (೨೫೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವಬ್ಯಾಂಕ್ ಆರ್ಥಿಕ ನೆರವಿನ ಗ್ರಾಮ ಸ್ವರಾಜ್ ೨ನೇ ಹಂತದ ಯೋಜನೆಯನ್ನು ಅನುಷ್ಠಾನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ಗಾತ್ರ ಎಷ್ಟು;

(ಆ) ಯೋಜನೆಯಲ್ಲಿ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ಯಾವ ಯಾವ ಅಂಶಗಳನ್ನು ಒಳಗೊಂಡಿವೆ ;

(ಇ) ಯೋಜನೆಯನ್ನು ಅನುಷ್ಠಾನಗೊಳಿಸುವುದರಿಂದ ಮೂರು ಸ್ಥರದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಹಾಗೂ ಜನರಿಗೆ ಆಗುವ ಅನುಕೂಲಗಳೇನು ;

(ಈ) ಯೋಜನೆಯನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ? (ವಿವರ ನೀಡುವುದು)

## ಜಿಲ್ಲಾ ಪಂಚಾಯತ್, ತಾಲ್ಲೂಕ್ ಪಂಚಾಯತ್ ಹಾಗೂ ಗ್ರಾಮಪಂಚಾಯತ್‌ಗಳಿಗೆ ಮಂಜೂರು ಆಗಿರುವ ಹುದ್ದೆಗಳು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೩ (೨೫೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾಗಿರುವ ಹುದ್ದೆಗಳೆಷ್ಟು ;

(ಆ) ಆ ಪೈಕಿ ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು;

(ಇ) ಅನ್ಯ ಇಲಾಖೆಯಿಂದ ಬಂದು ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ನೌಕರರ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಈ) ಗ್ರಾಮೀಣಾಭಿವೃದ್ಧಿ ಇಲಾಖೆಯ ತಳಮಟ್ಟದ ಸಮಸ್ಯೆಗಳ ಬಗ್ಗೆ ಅನ್ಯ ಇಲಾಖಾ ನೌಕರರಿಂದ ಗ್ರಾಮೀಣ ಜನರ ಆಶಯಕ್ಕೆ ತಕ್ಕಂತೆ ಕೆಲಸ ತೆಗೆದುಕೊಳ್ಳುವುದಕ್ಕೆ ಸಾಧ್ಯವಾಗುತ್ತಿದೆಯೇ ;

(ಉ) ಅನ್ಯ ಇಲಾಖೆಯ ನೌಕರರ ಬದಲು ಗ್ರಾಮೀಣಾಭಿವೃದ್ಧಿ ಇಲಾಖೆಯ ನೌಕರರನ್ನು ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು.

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೪೨೪ (೨೬೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇನ್ನೂ ಹೆಚ್ಚಿನ ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಕಲುಬುರಗಿ ಜಿಲ್ಲೆಯುಲ್ಲಿ ಎಷ್ಟು ಗ್ರಾಮ ಪಂಚಾಯ್ತಿಗಳನ್ನು ಗುರುತಿಸಲಾಗಿದೆ ;

(ಇ) ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವ ಆಯ್ಕೆಗೆ ಇರುವ ಮಾನದಂಡಗಳೇನು ?

## ಏರಿಯಾ ಸ್ಕೀಮ್ ಜಾರಿಗೊಳಿಸುವ ಬಗ್ಗೆ.

**ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೫ (೨೫೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ರಾಜ್ಯಾದ್ಯಂತ ಏರಿಯಾ ಸ್ಕೀಮ್ ಮಾಡಲು ತೀರ್ಮಾನಿಸಲಾಗಿದೆಯೇ ;

(ಆ) ಕರ್ನಾಟಕದ ಎಷ್ಟು ಜಿಲ್ಲೆಗಳಲ್ಲಿ ಖಾಸಗಿ ಬಸ್ಸುಗಳ ಸೇವೆ ಇರುತ್ತದೆ; ಇದರ ಸೇವೆಯನ್ನು ಪರಿಗಣಿಸಿರುತ್ತೀರಾ ; ಏರಿಯಾ ಸ್ಕೀಮ್ ಮಾಡುವುದರಿಂದ ಖಾಸಗಿ ಬಸ್ಸು ಮಾಲೀಕರಲ್ಲದೆ ಕಾರ್ಮಿಕರು ಹಾಗೂ ಪೂರಕವಾಗಿರುವ ಇತರೇ ಅವಲಂಬಿತ ವೃತ್ತಿದಾರರಿಗೆ ತೊಂದರೆಯಾಗುವುದಿಲ್ಲವೇ ?

## ಶುದ್ಧ ಕುಡಿಯುವ ನೀರು ಘಟಕಗಳ ಸ್ಥಾಪನೆ ಬಗ್ಗೆ.

**ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨೬ (೨೫೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪ್ರಾರಂಭಿಸಲಾಗಿದೆ ;

(ಆ) ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪ್ರಾರಂಭಿಸಲು ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ; (ಅವುಗಳ ವಿವರ ನೀಡುವುದು)

(ಇ) ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ, ಚನ್ನಗಿರಿ ತಾಲ್ಲೂಕಿನಲ್ಲಿ ಪ್ರಸ್ತುತ ವರ್ಷದಲ್ಲಿ ಯಾವ ಯಾವ ಗ್ರಾಮಗಳನ್ನು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಆಯ್ಕೆ ಮಾಡಲಾಗಿದೆ ? (ವಿವರ ನೀಡುವುದು).

## ಜೇಷ್ಠತಾ ಪಟ್ಟಿಯಲ್ಲಿ ಹಿರಿಯರಾದವರನ್ನು ಕೈಬಿಟ್ಟಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೨೭ (೨೫೪೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಸಂಸ್ಥೆಯಲ್ಲಿ ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು ಪ್ರಾಚಾರ್ಯರು ತಯಾರಿಸಿದ್ದು ಸರ್ಕಾರ ಇದನ್ನು ಪರಿಶೀಲಿಸುತ್ತಿದೆಯೇ ಅಥವಾ ಇಲ್ಲವೇ : (ವಿವರ ನೀಡುವುದು)

(ಆ) ಅನುದಾನಿತ ಸಂಸ್ಥೆಗಳಲ್ಲಿ ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯಲ್ಲಿ ಪ್ರಾಚಾರ್ಯರು ತಪ್ಪು ಮಾಹಿತಿ ನೀಡಿ ಸರ್ಕಾರಕ್ಕೆ ಸಲ್ಲಿಸಿದ್ದಲ್ಲಿ, ಸರ್ಕಾರ ಇದನ್ನು ಯಾವ ರೀತಿ ಸರಿಪಡಿಸುತ್ತದೆ ಹಾಗೂ ಅಂತಹವರ ಮೇಲೆ ಯಾವ ನಿಯಮದ ಕ್ರಮ ಕೈಗೊಳ್ಳುವುದು; (ಸ್ಪಷ್ಟ ಮಾಹಿತಿ ನೀಡುವುದು)

(ಇ) ಅನುದಾನಿತ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಜೇಷ್ಠತೆಯಲ್ಲಿ ಹಿರಿಯರಾದವರನ್ನು ಸರ್ಕಾರವು ವೇತನಾನುದಾನದಿಂದ ಕೈಬಿಟ್ಟಿದಲ್ಲಿ ಈ ಬಗ್ಗೆ ಯಾರ ಮೇಲೆ ಮತ್ತು ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು ; ಇಂತಹ ಪ್ರಕರಣಗಳು ಬೆಳಕಿಗೆ ಬಂದಿದ್ದಲ್ಲಿ ಮಾಹಿತಿ ನೀಡುವುದು ;

(ಈ) ಅನುದಾನಿತ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯಲ್ಲಿ ಜೇಷ್ಠತೆಯಲ್ಲಿ ಹಿರಿಯರಾದವರನ್ನು ಸರ್ಕಾರವು ವೇತನಾನುದಾನದಿಂದ ಕೈಬಿಟ್ಟು ಜೇಷ್ಠತೆಯಲ್ಲಿ ಕಿರಿಯರಾದವರನ್ನು ವೇತನಾನುದಾನದಲ್ಲಿ ಮುಂದುವರೆಸಿದ ಮತ್ತೆ ೨೧ ತಿಂಗಳ ನಂತರ ಸರ್ಕಾರವು ಈ ಆದೇಶವನ್ನು ಹಿಂಪಡೆದು ಜೇಷ್ಠತೆಯಲ್ಲಿ ಹಿರಿಯರಾದವರನ್ನು ವೇತನಾನುದಾನಕ್ಕೆ ಒಳಪಡಿಸಿದ ಮೇಲೆ ಈ ಅವಧಿಯ ೨೧ ತಿಂಗಳ ವೇತನವನ್ನು ಯಾರು ನೀಡಬೇಕು? (ವಿವರ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೨೮ (೨೫೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು (ಹಣಕಾಸು) ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸರ್ಕಾರ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಿದೆಯೇ ; ಅನುಮೋದನೆ ನೀಡಿದ್ದು ಯಾವಾಗ ; ಎಷ್ಟು ಸಮಯದಲ್ಲಿ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಗ್ರಾಮ ಪಂಚಾಯತಿ ಮಟ್ಟದಲ್ಲೇ ಸಕಾಲದ ಸೇವೆ ಪ್ರಾರಂಭಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೨೯ (೨೫೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮ ಪಂಚಾಯ್ತಿ ವ್ಯಾಪ್ತಿಗಳಲ್ಲಿಯೆ ಸಾರ್ವಜನಿಕ ಸೇವೆಗೆ ಅನುವು ಮಾಡಿಕೊಡುವ ಉದ್ದೇಶದಿಂದ ತಾಲ್ಲೂಕು ಕೇಂದ್ರಕ್ಕೆ ಅಲೆಯುವ ಬದಲಿಗೆ ಗ್ರಾಮ ಮಟ್ಟದಲ್ಲೇ ಸಕಾಲದಲ್ಲಿ ಸೇವೆಗಳು ಲಭ್ಯವಾಗುವಂತೆ ಯಾವ ಬದಲಾವಣೆಗಳನ್ನು ಮಾಡಲಾಗಿದೆ ;

(ಆ) ಇದರ ನಿರ್ವಹಣೆಯನ್ನು ಯಾವ ಇಲಾಖೆಯ ವ್ಯಾಪ್ತಿಗೆ ತರಲಾಗುವುದು ; ಈ ನಿಟ್ಟಿನಲ್ಲಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತ್ ರಾಜ್ ಇಲಾಖೆ ಸಿದ್ದವಾಗಿದೆಯೇ ; ಇದು ಯಾವಾಗಿನಿಂದ ಜಾರಿಗೆ ಬರುತ್ತದೆ ;

(ಈ) ಇದಕ್ಕೆ ಹೆಚ್ಚುವರಿ ಸಿಬ್ಬಂದಿಗಳ ನೇಮಕವನ್ನು ಯಾರಿಗೆ ವಹಿಸಲಾಗುತ್ತದೆ ಅಥವಾ ಈ ಸೇವೆಗಳ ಅನುಕೂಲವನ್ನು ಖಾಸಗಿ ಕಂಪನಿಗಳಿಗೆ ಗುತ್ತಿಗೆ ನೀಡಲು ಸರ್ಕಾರ ಮುಂದಾಗುವುದೇ ? (ವಿವರ ಒದಗಿಸುವುದು)

## ಪಿ.ಡಿ.ಓ. ಗಳು ಕೈಗೊಂಡ ಅಭಿವೃದ್ಧಿ ಕಾರ್ಯಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೩೦ (೨೫೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹೆಸರು ಮತ್ತು ಅವರು ಕಾರ್ಯನಿರ್ವಹಿಸುತ್ತಿರುವ ಅವಧಿಯ ಬಗ್ಗೆ ವಿವರಗಳನ್ನು ಒದಗಿಸುವುದು ;

(ಆ) ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಆಯಾ ಪಂಚಾಯತ್‌ಗಳಲ್ಲಿ ನೇಮಕಗೊಂಡ ದಿನಾಂಕದಿಂದ ಅವರು ಕಾರ್ಯನಿರ್ವಹಿಸಿದ ಅವಧಿ ಅಥವಾ ಜೂನ್ ೨೦೧೬ರ ವರೆಗೆ ಅವರು ಕೈಗೊಂಡ ಅಭಿವೃದ್ಧಿ ಕಾರ್ಯಗಳ ವಿವರಗಳನ್ನು ಒದಗಿಸುವುದು ;

(ಇ) ಅಭಿವೃದ್ಧಿ ಕಾರ್ಯಗಳಿಗೆ ಆಯಾ ಪಂಚಾಯತ್‌ವಾರು ತಗುಲಿದ ವೆಚ್ಚಗಳ ವಿವರ ನೀಡುವುದು ;

(ಈ) ಅಭಿವೃದ್ಧಿ ಕಾರ್ಯಗಳ ಅನುಷ್ಠಾನ ಹಾಗೂ ಸರ್ಕಾರದ ಅನುದಾನದ ವಿನಿಯೋಗಕ್ಕೆ ಸಂಬಂಧಿಸಿದಂತೆ ಸರ್ಕಾರ ನಿಗದಿಪಡಿಸಿದ ಗುರಿ ತಲುಪಲು ವಿಫಲರಾದ ಪಂಚಾಯತ್

ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕೈಗೊಂಡಿದ್ದಲ್ಲಿ, ಆಯಾ ಅಧಿಕಾರಿಗಳ ವಿವರ ನೀಡುವುದು ? (ಪಂಚಾಯತ್‌ಗಳವಾರು, ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಐ.ಐ.ಟಿ.ಗೆ ಭೂಮಿ ಮಂಜೂರು ಮಾಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೪೩೧ (೨೬೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡವು ಕೇಂದ್ರ ಸರ್ಕಾರದಿಂದ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಸ್ಥಾಪನೆಗೆ ಆಯ್ಕೆಯಾಗಿರುವುದು ನಿಜವೇ ;

(ಆ) ಇದರ ಸ್ಥಾಪನೆಗೆ ಸ್ಥಳ ಪರಿಶೀಲನೆಗೆ ಬಂದಿದ್ದ ಕೇಂದ್ರ ತಂಡಕ್ಕೆ ಭೂಮಿ ನೀಡುವ ವಿಚಾರದಲ್ಲಿ ಯಾವ ರೀತಿಯ ಆಶ್ವಾಸನೆ ನೀಡಲಾಗಿತ್ತು ; ಆ ಸಂದರ್ಭದಲ್ಲಿ ನಡೆದಂತಹ ತೀರ್ಮಾನಗಳೇನು;

(ಇ) ಸ್ಥಳ ಪರಿಶೀಲನೆ, ಸ್ಥಳ ಗುರುತಿಸುವಿಕೆ ಮತ್ತು ಒಪ್ಪಿಗೆ ಪ್ರಕ್ರಿಯೆಗಳು ಮುಗಿದ ನಂತರ ಭೂಮಿ ನೀಡುವ ಸಂಬಂಧ ಬೇರೆ ಭೂಮಿ ನೀಡುವ ನಿರ್ಧಾರಕ್ಕೆ ಬಂದಿರುವುದು ನಿಜವೇ ; (ವಿವರ ನೀಡುವುದು)

(ಈ) ಸ್ಥಳ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ನೀಡಲು ಒಪ್ಪಿದ್ದ ಭೂಮಿಯನ್ನು ಆಯ್ಕೆ ಮಾಡಲು ಕಾರಣವೇನು ; ನಂತರ ಸ್ಥಳ ಬದಲಾವಣೆ ಮಾಡುವ ನಿರ್ಧಾರ ಕೈಗೊಳ್ಳಲು ಕಾರಣವೇನು;

(ಉ) ಈ ನಿರ್ಧಾರಕ್ಕೆ ಕೇಂದ್ರ ಸರ್ಕಾರದಿಂದ ಯಾವ ರೀತಿಯ ಪ್ರತಿಕ್ರಿಯೆ ಬಂದಿದೆ ? (ವಿವರ ನೀಡುವುದು)

## ಶಿಕ್ಷಕರುಗಳಿಗೆ ವೇತನ ತಾರತಮ್ಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೪೩೨ (೨೪೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರುಗಳಿಗೆ ವೇತನ ತಾರತಮ್ಯ ನಿವಾರಣೆ ಕುರಿತಂತೆ ಇಲಾಖೆಯ ಪ್ರಧಾನ ಕಾರ್ಯದರ್ಶಿರವರು ವರದಿ ನೀಡಿರುವುದು ನಿಜವೇ ; ಯಾವಾಗ ವರದಿ ನೀಡಿರುತ್ತಾರೆ ;

(ಆ) ವೇತನ ತಾರತಮ್ಯ ಕುರಿತಂತೆ ಯಾವ ರೀತಿಯ ಅಭಿಪ್ರಾಯವನ್ನು ವ್ಯಕ್ತಪಡಿಸಿರುತ್ತಾರೆ ವರದಿಯಲ್ಲಿ ನೀಡಿರುವ ಪ್ರಮುಖ ಸಲಹೆಗಳು ಯಾವುವು ?

## ಕುಡಿಯುವ ನೀರಿನ ಘಟಕ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೪೩೩ (೨೪೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಯೋಜನೆಯಲ್ಲಿ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ; ಇದುವರೆವಿಗೂ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ ;

(ಆ) ಇನ್ನುಳಿದಿರುವ ಘಟಕಗಳ ಸ್ಥಾಪನೆಗೆ ಹಣ ಬಿಡುಗಡೆ ಮಾಡಲಾಗಿದೆಯೇ ; ಈ ಘಟಕಗಳನ್ನು ಸ್ಥಾಪಿಸಲು ಬೇಕಾಗುವ ಕಾಲಾವಧಿ ಏನು ?

## ಶಾಲಾ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೪೩೪ (೨೪೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು ಹೆಸರುಘಟ್ಟ ಹೋಬಳಿ, ಕಾರ್ಲಾಪುರ ಸರ್ಕಾರಿ ಶಾಲೆ ಯಾವ ರೀತಿಯ ಮೂಲಭೂತ ಸೌಕರ್ಯಗಳನ್ನು ಹೊಂದಿದೆ ;

(ಆ) ಈ ಶಾಲೆಯಲ್ಲಿಯ ಕಟ್ಟಡ ಶಿಥಿಲಗೊಂಡಿರುವುದು ನಿಜವೇ ; (ವಿವರ ನೀಡುವುದು)

(ಇ) ಶಾಲಾ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆಯಾಗಿರುವುದು ನಿಜವೇ ; ಕಟ್ಟಡ ನಿರ್ಮಾಣ ಕಾರ್ಯ ವಿಳಂಬವಾಗಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಕಾಮಗಾರಿಯನ್ನು ತ್ವರಿತಗೊಳಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ?

## ಪಂಚಾಯತಿ ಕಛೇರಿಗೆ ಮೂಲಭೂತ ಸೌಕರ್ಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೪೩೫ (೨೪೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೂತನವಾಗಿ ಆರಂಭವಾದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಇವು ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ;

(ಆ) ಈ ನೂತನ ಗ್ರಾಮ ಪಂಚಾಯಿತಿಗಳಲ್ಲಿ ಇದುವರೆವಿಗೂ ಬ್ಯಾಂಕ್ ಖಾತೆಗಳನ್ನು ತೆರೆಯದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಅವು ಯಾವುವು ;

(ಇ) ನೂತನ ಗ್ರಾಮ ಪಂಚಾಯಿತಿಗಳಿಗೆ ಕಟ್ಟಡ ಮತ್ತು ಪೀಠೋಪಕರಣಗಳಿಗೆ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಿದ್ದುದು ನಿಜವೇ ; (ವಿವರ ನೀಡುವುದು)

(ಈ) ಇದುವರೆವಿಗೂ ಎಷ್ಟು ನೂತನ ಗ್ರಾಮ ಪಂಚಾಯಿತಿಗಳಿಗೆ ಕಛೇರಿಯ ಮೂಲಭೂತ ಸೌಕರ್ಯಕ್ಕಾಗಿ ಹಣ ಬಿಡುಗಡೆ ಮಾಡಲಾಗಿದೆ ? (ವಿವರ ನೀಡುವುದು)

## ಚಿತ್ರಕಲಾ ಶಿಕ್ಷಕರಿಗೆ ನೀಡುವ ಬಡ್ತಿಯ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೨೪೩೬ (೨೫೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಶಿಕ್ಷಣ ಇಲಾಖೆಯಲ್ಲಿ ಕಳೆದ ೦೫ ವರ್ಷಗಳಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲಾ ಚಿತ್ರಕಲಾ ಶಿಕ್ಷಕರಿಗೆ ಸರ್ಕಾರಿ ಪ್ರೌಢ ಶಾಲಾ ಚಿತ್ರಕಲಾ ಶಿಕ್ಷಕರಾಗಿ ಬಡ್ತಿ ನೀಡಲಾಗಿದೆಯೇ ; (ನೀಡಿದ್ದಲ್ಲಿ, ವಿವರ ಒದಗಿಸುವುದು)

(ಆ) ಸರ್ಕಾರಿ ಪ್ರಾಥಮಿಕ ಶಾಲಾ ಚಿತ್ರಕಲಾ ಶಿಕ್ಷಕರಿಗೆ ಸರ್ಕಾರಿ ಪ್ರೌಢ ಶಾಲಾ ಚಿತ್ರಕಲಾ ಶಿಕ್ಷಕರಾಗಿ ಬಡ್ತಿ ನೀಡುವ ಅಧಿಕಾರವನ್ನು ಯಾರಿಗೆ ನೀಡಲಾಗಿದೆ ;

(ಇ) ಇಲ್ಲಿಯವರೆಗೆ ಬಡ್ತಿ ನೀಡಿಲ್ಲವೆಂದಾದಲ್ಲಿ, ಚಿತ್ರಕಲಾ ಶಿಕ್ಷಕರು ಬಡ್ತಿಯಿಂದ ವಂಚಿತರಾಗುವುದಿಲ್ಲವೇ ;

(ಈ) ಕೊಡಗು ಜಿಲ್ಲೆಯಲ್ಲಿ ಬಡ್ತಿ ನೀಡಿರುವ ಹಾಗೂ ಬಡ್ತಿಗೆ ಅರ್ಹರಿರುವ ಚಿತ್ರಕಲಾ ಶಿಕ್ಷಕರು ಇದ್ದಾರೆಯೇ ; (ಇದ್ದಲ್ಲಿ, ಪಟ್ಟಿ ನೀಡುವುದು)

(ಉ) ಕೊಡಗು ಜಿಲ್ಲೆಯಲ್ಲಿ ಬಡ್ತಿಗೆ ಅರ್ಹರಿರುವ ಸರ್ಕಾರಿ ಪ್ರಾಥಮಿಕ ಶಾಲಾ ಚಿತ್ರಕಲಾ ಶಿಕ್ಷಕರಿಗೆ ಸರ್ಕಾರಿ ಪ್ರೌಢ ಶಾಲಾ ಚಿತ್ರಕಲಾ ಶಿಕ್ಷಕರಾಗಿ ಬಡ್ತಿಯನ್ನು ನೀಡಲು ವಿಳಂಬಕ್ಕೆ ಕಾರಣಗಳೇನು ; ವಿಳಂಬದಿಂದ ಸದರಿ ಶಿಕ್ಷಕರು ಸೇವಾ ಬಡ್ತಿಯಿಂದ ವಂಚಿತರಾಗಿರುವುದಿಲ್ಲವೇ ?

## ಶಾಲಾ ಮಕ್ಕಳಿಗೆ ಪುಸ್ತಕ ಮತ್ತು ಸಮವಸ್ತ್ರ ಸರಿಯಾದ ಸಮಯಕ್ಕೆ ತಲುಪದಿರುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)) :–

೨೪೩೭ (೨೫೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಶಾಲಾ ಮಕ್ಕಳಿಗೆ ೨೦೧೬–೧೭ನೇ ಸಾಲಿಗೆ ಉಚಿತ ಸಮವಸ್ತ್ರ ಹಾಗೂ ಪಠ್ಯ ಪುಸ್ತಕ ವಿತರಿಸಲಾಗಿದೆಯೇ ;

(ಆ) ದಿನಾಂಕ : ೩೦–೦೬–೨೦೧೬ ಒಳಗೆ ಸಮವಸ್ತ್ರ ಹಾಗೂ ಪಠ್ಯ ಪುಸ್ತಕ ವಿತರಣೆ ಎಷ್ಟು ಪ್ರಗತಿ ಸಾಧಿಸಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸಮವಸ್ತ್ರ ಹಾಗೂ ಪಠ್ಯ ಪುಸ್ತಕಗಳನ್ನು ಶಾಲೆ ಪ್ರಾರಂಭದ ದಿನಗಳಲ್ಲೆ ಮಕ್ಕಳಿಗೆ ನೀಡಲು ಸರ್ಕಾರ ಏಕೆ ಕ್ರಮವಹಿಸುತ್ತಿಲ್ಲ ;

(ಈ) ಕೊಡಗು ಜಿಲ್ಲೆಯಲ್ಲಿ ಸಮವಸ್ತ್ರ ಹಾಗೂ ಪಠ್ಯ ಪುಸ್ತಕಗಳು ಪೂರ್ಣ ಪ್ರಮಾಣದಲ್ಲಿ ಮಕ್ಕಳಿಗೆ ತಲುಪದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಪ್ರಥಮ ಅರ್ಧವಾರ್ಷಿಕ ಮುಗಿಯಲು ಇನ್ನು ೦೨-೦೩ ಮಾಹೆಗಳು ಮಾತ್ರ ಇದ್ದು, ಮಕ್ಕಳಿಗೆ ಪಾಠ ಮಾಡಲು ಶಿಕ್ಷಕರು ಕೊರತೆಯಿರುವ ಶಾಲೆಗಳಲ್ಲಿ ಪಾಠ ಪೂರ್ತಿಯಾಗಿ ಮುಗಿಸಿ ಮಕ್ಕಳನ್ನು ಪರೀಕ್ಷೆಗೆ ಸಿದ್ಧಪಡಿಸಲು ಸಾಧ್ಯವೇ ?

## ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೩೮ (೨೫೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಣಕಾಸು ಇಲಾಖೆ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಿದೆಯೇ ; ಅನುಮೋದನೆ ನೀಡಿದ್ದು ಯಾವಾಗ ; ಎಷ್ಟು ಸಮಯದಲ್ಲಿ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ೧೯೯೪-೯೫ರ ಶೈಕ್ಷಣಿಕ ವರ್ಷದ ಆರಂಭದಲ್ಲಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಆಗಿರುವ ದೈಹಿಕ ಶಿಕ್ಷಕರನ್ನು ಅನುದಾನ ಒಳಪಡಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೪೩೯ (೨೫೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ೧೯೯೪-೯೫ರ ಶೈಕ್ಷಣಿಕ ವರ್ಷದ ಆರಂಭದಲ್ಲಿ ನೇಮಕವಾಗಿರುವ ದೈಹಿಕ ಶಿಕ್ಷಕರನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿದೆ ; ಈ ಪ್ರಸ್ತಾವನೆಗಳು ಎಷ್ಟು ತಿಂಗಳುಗಳಿಂದ ಪರಿಶೀಲನೆ ಹಂತದಲ್ಲಿರುವುದು ;

(ಆ) ಈ ದೈಹಿಕ ಶಿಕ್ಷಕರನ್ನು ಅನುದಾನಕ್ಕೆ ಒಳಪಡಿಸುವಲ್ಲಿ ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಪದವಿ ಪೂರ್ವ ಕಾಲೇಜಗಳಲ್ಲಿ ದೈಹಿಕ ಶಿಕ್ಷಕರನ್ನು ಅನುದಾನಕ್ಕೆ ಒಳಪಡಿಸಲು ಕಾರ್ಯ ಭಾರವನ್ನು ನಿಗಧಿಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಹಾವೇರಿ ಜಿಲ್ಲೆಯ ಏಳು ತಾಲ್ಲೂಕುಗಳಲ್ಲಿ ನೀರಿನ ಕೊರತೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೦ (೨೨೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಏಳು ತಾಲ್ಲೂಕುಗಳಲ್ಲಿ ಎಲ್ಲೆಲ್ಲಿ ನೀರಿನ ಕೊರತೆ ಇದೆ ; ಇನ್ನೂ ಕೊರತೆಯಿರುವ ತಾಲ್ಲೂಕುಗಳೆಷ್ಟು; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ಒದಗಿಸುವುದು)

(ಆ) ನೀರಿನ ಪರಿಹಾರಕ್ಕಾಗಿ ಕಳೆದ ಮೂರು ವರ್ಷದಲ್ಲಿ ಬಿಡುಗಡೆಗೊಂಡ ಅನುದಾನವೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಪ್ರತಿ ಗ್ರಾಮ ಪಂಚಾಯಿತಿಗಳಿಗೆ ನೀರಿನ ಕೊರತೆಯನ್ನು ಯಾವ ರೀತಿ ನೀಗಿಸಲಾಗಿದೆ ; ಇದ್ದಕ್ಕೆ ಖರ್ಚಾದ ಅನುದಾನವೆಷ್ಟು ; ಪ್ರತಿ ಗ್ರಾಮ ಪಂಚಾಯಿತಿಗಳಿಗೆ ದಿನಕ್ಕೆ ಎಷ್ಟು ಟ್ಯಾಂಕರ್ ಮೂಲಕ ಹಾಗೂ ಎಷ್ಟು ಕೊರೆದ ಕೊಳವೆ ಬಾವಿಗಳ ಮುಖಾಂತರ ನೀರನ್ನು ಸರಬರಾಜು ಮಾಡಲಾಗುತ್ತದೆ ; ಪ್ರತಿ ಗ್ರಾಮ ಪಂಚಾಯಿತಿವಾರು ಖರ್ಚಾದ ಅನುದಾನವೆಷ್ಟು ? (ವರ್ಷಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿನ ನೂತನ ಗ್ರಾಮ ಪಂಚಾಯಿತಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೧ (೨೫೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನೂತನ ಗ್ರಾಮ ಪಂಚಾಯತಿಗಳೆಷ್ಟು ಇವುಗಳಿಗೆ ನೀಡಿದ ಸೌಲಭ್ಯಗಳೇನು ಮತ್ತು ನೂತನ ಗ್ರಾಮ ಪಂಚಾಯತಿಗಳು ಯಾವುವು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ನೂತನ ಗ್ರಾಮ ಪಂಚಾಯ್ತಿಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ರಾಜ್ಯ ಸರ್ಕಾರದಿಂದ ಮತ್ತು ಕೇಂದ್ರ ಸರ್ಕಾರದಿಂದ ನೀಡಿದ ಅನುದಾನದ ಮೊತ್ತವೆಷ್ಟು ಮತ್ತು ಯೋಜನೆಗಳ ವಿಲೇವಾರಿಗೆ ಖರ್ಚಾದ ಹಣವೆಷ್ಟು ? (ಕಾಮಗಾರಿಗಳ ಸಹಿತ ಸಂಪೂರ್ಣ ಮಾಹಿತಿ ಕೊಡುವುದು)

## ಗ್ರಾಮ ಪಂಚಾಯತ್ ರಾಜ್ ಇಲಾಖೆಯಲ್ಲಿ ಅಕ್ರಮದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೨ (೨೫೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಲ್ಲಿ ಕಳೆದ ೩ ವರ್ಷದಲ್ಲಿ ಅಕ್ರಮ ಠೇವಣಿ, ಶುದ್ಧ ಕುಡಿಯುವ ನೀರಿನ ಘಟಕದ ಹಗರಣ, ಕಳಪೆ ಗುಣಮಟ್ಟದ ಪೀಠೋಪಕರಣ ಖರೀದಿ, ಗ್ರಾಮ ಸ್ವರಾಜ್ ಯೋಜನೆಯಡಿ ಕಂಪ್ಯೂಟರ್ ಖರೀದಿ ಸೇರಿದಂತೆ ಇನ್ನಿತರ ಆರೋಪಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಪ್ರಕರಣವಾರು ವಿವರ ನೀಡುವುದು)

(ಆ) ಯಾವ ಯಾವ ಅವ್ಯವಹಾರ/ಆರೋಪಗಳ/ಹಗರಣಗಳ ತನಿಖೆಗಾಗಿ ಸಮಿತಿ ರಚಿಸಲಾಗಿದೆ ;

(ಇ) ತನಿಖೆಯ ಹಂತಗಳೇನು ; ಸರ್ಕಾರ ತನಿಖೆಯನ್ನು ಚುರುಕುಗೊಳಿಸಲು ಕೈಗೊಂಡ ಕ್ರಮಗಳೇನು ;

(ಈ) ವಿವಿಧ ಹಗರಣ/ಅವ್ಯವಹಾರ ಪ್ರಕರಣಗಳಿಗೆ ಸಂಬಂಧಿಸಿದಂತೆ ಅದರಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ಸರ್ಕಾರ ರಕ್ಷಿಸುತ್ತಿರುವುದು ನಿಜವೆ ? (ಸಂಪೂರ್ಣ ವಿವರ ನೀಡುವುದು)

## ಸಣ್ಣ ಕೈಗಾರಿಕೆ ಇಲಾಖೆಯಡಿ ಚಾಲ್ತಿ ಇರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪೩ (೨೫೮೦) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕಾ ಇಲಾಖೆಯಡಿ ಚಾಲ್ತಿಯಿರುವ ಕೇಂದ್ರ ಹಾಗೂ ರಾಜ್ಯ ಪರಸ್ಕೃತ ಯೋಜನೆಗಳಾವುವು ; ಜಿಲ್ಲಾವಾರು ನಿಗಧಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿ ಏನು ; (ವಿವರ ನೀಡುವುದು)

(ಆ) ವಿವಿಧ ಸಣ್ಣ ಕೈಗಾರಿಕಾ ಘಟಕಗಳ ಸ್ಥಾಪನೆಗೆ ಸರ್ಕಾರದಿಂದ ನೀಡುವ ಸಹಾಯಧನ (ಸಬ್ಸಿಡಿ) ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಹಾಗೂ ಭ್ರಷ್ಟಾಚಾರದ ಆರೋಪ ಕೇಳಿ ಬರುತ್ತಿರುವುದು ನಿಜವೆ ;

(ಇ) ಕಳೆದ ೨ ವರ್ಷಗಳ ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳಿಗೆ ಪಾವತಿಯಾಗಲು ಬಾಕಿಯಿರುವ ಸಹಾಯಧನ (ಸಬ್ಸಿಡಿ) ಮೊತ್ತವೆಷ್ಟು ;

(ಈ) ಸಾಲ–ಸಹಾಯಧನ ಸಬ್ಸಿಡಿಯನ್ನು ಅರ್ಹ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿ ಪಾವತಿಸಲು ಇರುವ ತೊಡಕುಗಳೇನು? (ವಿವರ ನೀಡುವುದು)

## ಗ್ರಾಮಗಳ ಅಭಿವೃದ್ಧಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)):–**

೨೪೪೪ (೨೪೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕೊರತೆಯಿಂದಾಗಿ ಗ್ರಾಮಗಳ ಅಭಿವೃದ್ಧಿಗೆ ಹಿನ್ನೆಡೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕುರಿತು ಸರ್ಕಾರ ಈವರೆಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಪಿ.ಡಿ.ಓ. ಸಮಸ್ಯೆಗಳ ಕೊರತೆಯನ್ನು ನಿಭಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತ್ ಸದಸ್ಯರಿಗೆ ಗೌರವಧನ ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೪೫ (೨೪೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತಿ ಸದಸ್ಯರ ಗೌರವಧನವನ್ನು ಬಿಡುಗಡೆಗೊಳಿಸಲಾಗಿದೆಯೇ ;

(ಆ) ಗೌರವಧನವನ್ನು ಬಿಡುಗಡೆಗೊಳಿಸಿರುವ ಬಗ್ಗೆ ಮಾಹಿತಿಯನ್ನು ಒದಗಿಸುವುದು ;

(ಇ) ಗೌರವಧನ ಬಿಡುಗಡೆಯಲ್ಲಿ ವಿಳಂಬವಾಗಲು ಕಾರಣವೇನು ; (ವಿವರ ನೀಡುವುದು)

(ಈ) ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೇಮಕಾತಿ ಮತ್ತು ಸೇವೆಯ ಬಗ್ಗೆ

**ಶ್ರೀ ಕೆ.ಬಿ. ಶಾಣಪ್ಪ (ನಾಮನಿರ್ದೇಶನ ಹೊಂದಿದವರು) :–**

೨೪೪೬ (೨೫೪೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಇಲ್ಲಿಯವರೆಗೆ ೩೭೧(ಜೆ) ಪ್ರಕಾರ ನೇರ ನೇಮಕಾತಿಯಲ್ಲಿ ಎಷ್ಟು ಹುದ್ದೆಗಳಿಗೆ ಮೀಸಲಾತಿ ಕಲ್ಪಿಸಲಾಗಿದೆ ; ಹಾಗೂ ಎಷ್ಟು ಹುದ್ದೆಗಳಿಗೆ ಮುಂಬಡ್ತಿಯನ್ನು ನೀಡಲಾಗಿದೆ ;

(ಆ) ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯಲ್ಲಿ ಕೇಂದ್ರ ಕಛೇರಿ ಹಾಗೂ ಕೇಂದ್ರ ವಿಭಾಗ ಡಿ.ಡಬ್ಲ್ಯೂ.ಎಸ್ ಹಾಗೂ ಡಿಪೋಗಳು ರಾಜ್ಯದ ರಾಜಧಾನಿಯ ವ್ಯಾಪ್ತಿಯಲ್ಲಿ ಬರುವುದಿಲ್ಲವೇ ;

(ಇ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ಸಿನ ಸೇವೆಯು ರಾಜಧಾನಿಗೆ ಒಳಗೊಂಡಂತೆ ಇಡೀ ರಾಜ್ಯದಲ್ಲಿ ಸೇವೆ ನೀಡುವುದಿಲ್ಲವೇ ; ಹಾಗಿದ್ದಲ್ಲಿ, ಈ ಕಾರ್ಯವ್ಯಾಪ್ತಿಯು ಇಡೀ ರಾಜ್ಯಕ್ಕೆ ಅನ್ವಯಿಸುವುದಿಲ್ಲವೇ ;

(ಈ) ದಿನಾಂಕ : ೨೯–೦೫–೨೦೦೬ ರಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸ್ವಾಯತ್ತ ಸಂಸ್ಥೆ ಎಂದು ಅಧಿಸೂಚನೆ ಹೊರಡಿಸಲಾಗಿದ್ದು ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುವ ಎ ಮತ್ತು ಬಿ ದರ್ಜೆಯ ಅಧಿಕಾರಿಗಳನ್ನು ನಿಗಮದಿಂದ ನಿಗಮಕ್ಕೆ ವರ್ಗಾವಣೆಯನ್ನು ಯಾವ ಮಾನದಂಡದ ಮೇಲೆ ಮಾಡಲಾಗುವುದು ?

## ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣವನ್ನು ಒಂದೇ ಆಡಳಿತ ವ್ಯವಸ್ಥೆಯಡಿ ತರುವ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) ಹಾಗೂ ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೨೪೪೭ (೨೫೯೪+೨೫೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಆಯವ್ಯಯ ಘೋಷಣೆಯಾದಾಗ ಪ್ರೌಢಶಾಲೆ ಮತ್ತು ಪದವಿ ಪೂರ್ವ ಶಿಕ್ಷಣವನ್ನು ಒಂದೇ ಆಡಳಿತ ಮತ್ತು ಕಾರ್ಯ ವ್ಯವಸ್ಥೆಯಡಿ ತರಲು ೦೩ ವರ್ಷದ ಕ್ರಿಯಾ ಯೋಜನೆ ರೂಪಿಸಲಾಗುವುದು ಎನ್ನುವ ಭರವಸೆ ಕುರಿತು ಸರ್ಕಾರ ಇಲ್ಲಿಯವರೆಗೆ ತೆಗೆದುಕೊಂಡ ಕ್ರಮ ಏನು ;

(ಆ) ಈ ನಿರ್ಣಯ ಕೈಗೊಳ್ಳಲು ಹಿನ್ನಲೆ ಹಾಗೂ ಕಾರಣವೇನು ;

(ಇ) ಈ ಹಿಂದೆ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಸಂರಚನೆ ಪರಿಷ್ಕರಿಸಲು ಪ್ರೊ.ಗೋವಿಂದ ಸಮಿತಿ ನೇಮಕ ಮಾಡಲಾಗಿದ್ದು, ಆ ಸಮಿತಿ ವರದಿ ನೀಡಿದೆಯೇ ; (ವರದಿಯ ಪ್ರತಿ ನೀಡುವುದು) ನೀಡಿದ್ದರೆ, ವರದಿಯ ಮುಖ್ಯಾಂಶಗಳೇನು?

## ಅವ್ಯಾಹತವಾಗಿ ನಡೆಯುತ್ತಿರುವ ಅನಧಿಕೃತ ಮರಳುಗಾರಿಕೆಯನ್ನು ನಿಯಂತ್ರಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೨೪೪೮ (೨೫೫೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ರಾಜ್ಯದಲ್ಲಿ ಮರಳು ದಂಧೆ ಹೆಚ್ಚಾಗುತ್ತಿದ್ದು, ಮರಳು ಮಾಫಿಯಾವನ್ನು ನಿಯಂತ್ರಿಸಲು ಸರ್ಕಾರವು ವಿಫಲವಾಗಿರುವುದು ನಿಜವೇ ;

(ಆ) ಮರಳು ಮಾಫಿಯಾವನ್ನು ನಿಯಂತ್ರಿಸಲು ಮುಂದಾಗುವ ಅಧಿಕಾರಿಗಳ ಮೇಲೆ ನಿರಂತರವಾಗಿ ಹಲ್ಲೆ ಯತ್ನಗಳನ್ನು ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಪ್ರಕರಣಗಳಲ್ಲಿ ಕೈಗೊಂಡಿರುವ ಕ್ರಮಗಳೇನು ; (ಆರೋಪಿಗಳ ಹೆಸರು ಸಹಿತ ವಿವರ ನೀಡುವುದು)

(ಇ) ಒಂದು ಲೋಡ್ ಮರಳಿಗೆ ವಿಧಿಸಲಾಗುವ ಮೊತ್ತ ಎಷ್ಟು ; ಮೊತ್ತವನ್ನು ನಿಗಧಿಪಡಿಸಲು ಇರುವ ಮಾನದಂಡಗಳೇನು ;

(ಈ) ಅನಧಿಕೃತವಾಗಿ ಮರಳುಗಾರಿಕೆಯನ್ನು ನಡೆಸುತ್ತಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಸದರಿಯವರ ಮೇಲೆ ಕೈಗೊಂಡಿರುವ ಕ್ರಮಗಳಾವುವು ; ಯಾರ‍್ಯಾರು ಮತ್ತು ಎಲ್ಲೆಲ್ಲಿ ಎಂಬ ಮಾಹಿತಿ ಒದಗಿಸುವುದು ;

(ಉ) ರಾಜ್ಯದಿಂದ ಪಕ್ಕದ ರಾಜ್ಯಗಳಿಗೆ ಮರಳನ್ನು ಸರಬರಾಜು ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ರಾಜ್ಯದಲ್ಲಿ ಮರಳಿನ ಆಭಾವವುಂಟು ಮಾಡಿ ಅಧಿಕವಾದ ಬೆಲೆಗೆ ಮಾರಾಟ ಮಾಡುತ್ತಿದ್ದು, ಪಕ್ಕದ ರಾಜ್ಯಗಳಲ್ಲಿ ಕಡಿಮೆ ಬೆಲೆಗೆ ದೊರೆಯುತ್ತಿರಲು ಕಾರಣವೇನು ?

## ಎಂ.ಎಸ್.ಐ.ಎಲ್. ನಲ್ಲಿನ ಅಧಿಕಾರಿಗಳ ಭ್ರಷ್ಟಾಚಾರ ಕುರಿತು

ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–

೨೪೪೯ (೨೫೫೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ಒಂದಾದ ಎಂ.ಎಸ್.ಐ.ಎಲ್. ನಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ನೌಕರರ ಪೈಕಿ ಎಷ್ಟು ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ; (ನೌಕರರ ಹೆಸರು, ದಿನಾಂಕ, ವಿಳಾಸ ಹಾಗೂ ಕಾರಣ ಸಹಿತ ಮಾಹಿತಿ ನೀಡುವುದು)

(ಆ) ಡಿಸ್ಟ್ರಿಕ್ ಇನ್ ಛಾರ್ಜ್ ಮತ್ತು ರೀಟೇಲ್ ಇನ್–ಛಾರ್ಜ್ ಅಧಿಕಾರಿಗಳು ಸದರಿ ನೌಕರರಿಂದ ಲಂಚ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಕರಣವಾರು, ಹೆಸರು ಸಹಿತ ವಿವರ ನೀಡುವುದು ;

(ಇ) ಸಂಸ್ಥೆಯು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; ಪ್ರಸ್ತುತ ಸದರಿ ಅಧಿಕಾರಿಗಳು ಎಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಕೈಗೊಂಡ ತನಿಖಾ ಕ್ರಮದ ಬಗ್ಗೆ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ನಿರ್ಮಾಣ ಮಾಡಿರುವ ಶೌಚಾಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೫೦ (೨೫೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ನಿರ್ಮಾಣ ಮಾಡಿರುವ ಶೌಚಾಲಯಗಳ ಸಂಖ್ಯೆ ಎಷ್ಟು ;

(ಆ) ಈ ಶೌಚಾಲಯಗಳಿಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಶೌಚಾಲಯಗಳ ನಿರ್ಮಾಣಕ್ಕೆ ಬಿಡುಗಡೆಯಾಗಿರುವ ಅನುದಾನ ಎಷ್ಟು ? (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಸಾರಿಗೆ ಸೌಲಭ್ಯದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೫೧ (೨೫೦೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕೆಲವು ತಾಲ್ಲೂಕು ಕೇಂದ್ರಗಳಿಂದ ಹಳ್ಳಿಗಳಿಗೆ ಬಸ್ಸುಗಳ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾರಿಗೆ ಸೌಲಭ್ಯ ಇಲ್ಲದೇ ಅಲ್ಲಿಯ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ಕೆಲವು ಗಡಿ ಪ್ರದೇಶಗಳ ಹಳ್ಳಿಗಳಿಗೆ ಬಸ್ಸುಗಳ ಸಂಚಾರ ಇಲ್ಲದಿರಲು ಕಾರಣಗಳೇನು ; ಗಡಿ ಪ್ರದೇಶದ ಹಳ್ಳಿಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗುವುದೇ ?

## ಬೀದರ್ ಜಿಲ್ಲೆ ವಿಮಾನ ನಿಲ್ದಾಣ ಕಾಮಗಾರಿಯ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೫೨ (೨೫೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್‌ನಲ್ಲಿ ವಿಮಾನ ನಿಲ್ದಾಣ ಕಾಮಗಾರಿ ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಬಳಕೆಯಾಗಿರುವ ಅನುದಾನ ಎಷ್ಟು ;

(ಇ) ಈ ಕಾಮಗಾರಿ ಇದುವರೆವಿಗೂ ಪೂರ್ಣಗೊಳ್ಳದಿರಲು ಕಾರಣಗಳೇನು ; ವಿಮಾನ ನಿಲ್ದಾಣ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೩ (೨೫೫೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಎಷ್ಟು ಅವಧಿಯೊಳಗೆ ಭರ್ತಿ ಮಾಡಲಾಗುವುದು ;

(ಈ) ಈ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಮೀಸಲಾತಿಯನ್ನು ಪಾಲಿಸಲಾಗುವುದೇ ?

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ ಹಾಗೂ ನೌಕರರ ಸಂಘದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೪ (೨೫೫೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ ಮತ್ತು ನೌಕರರುಗಳಿಗೆ ಅವರು

ಸದಸ್ಯರಾಗಿರುವ ಸಂಘಕ್ಕೆ ತಿಂಗಳ ವಂತಿಕೆಯನ್ನು ಇತರೆ ನೌಕರರಿಗೆ ಇರುವ ಸೌಲಭ್ಯಗಳಂತೆ ಅವರ ವೇತನದಲ್ಲಿ ಹಿಡಿದು ಸಂಘಕ್ಕೆ ನೀಡುವ ವ್ಯವಸ್ಥೆ ಮಾಡಲಾಗಿದೆಯೇ ;

(ಆ) ಮೇಲಿನ ಸೌಲಭ್ಯವನ್ನು ಇತರೆ ಸಂಘಗಳಿಗೆ ಮತ್ತು ಅವರು ಸದಸ್ಯರಾಗಿರುವ ಸಹಕಾರ ಸಂಘಗಳಿಗೆ ಒದಗಿಸಿರುವಂತೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಸಂಘಗಳಿಗೂ ನೀಡಲು ನಿರ್ಬಂಧಗಳೇನಾದರೂ ಇದೆಯೇ ; (ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಂಘದ ಬೇಡಿಕೆಯನ್ನು ಹಲವಾರು ಬಾರಿ ನಡೆದ ಸಭೆಯಲ್ಲಿ ಒಪ್ಪಿಕೊಂಡಿದ್ದರೂ, ಇದುವರೆವಿಗೂ ನೀಡದೇ ಇರಲು ಕಾರಣ ಏನು ?

## ಕೈಗಾರಿಕೆಗಳ ಪುನಶ್ಚೇತನದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೫ (೨೫೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಸರ್ಕಾರದಿಂದ ನೂತನ ಕೈಗಾರಿಕಾ ನೀತಿಯನ್ನು ಪ್ರಕಟಿಸಲಾಗಿದೆಯೇ ; ಪ್ರಕಟಸಿದ್ದರೆ, ಅದರ ಮಾನದಂಡಗಳೇನು ;

(ಆ) ಕಳೆದ ೧೦ ವರ್ಷಗಳಿಂದ ಸತತವಾಗಿ ನಷ್ಟದಲ್ಲಿರುವ ರಾಜ್ಯ ಸರ್ಕಾರದ ಅಧೀನಕ್ಕೆ ಬರುವ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಯಾವುವು ; ಇವುಗಳಿಂದ ಸರ್ಕಾರದ ಬೊಕ್ಕಸಕ್ಕೆ ಆದ ನಷ್ಟವೆಷ್ಟು ;

(ಇ) ಈ ರೀತಿ ನಷ್ಟದಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಅಥವಾ ಖಾಸಗಿಯವರಿಗೆ ಮಾರಾಟ ಮಾಡಲು ಸರ್ಕಾರ ಉದ್ದೇಶಿಸಿದೆಯೇ ? (ವಿವರ ನೀಡುವುದು)

## ನೂತನ ಬಸ್‌ಗಳ ಖರೀದಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೬ (೨೫೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಬಿ.ಎಂ.ಟಿ.ಸಿ. ಮತ್ತು ಕೆ.ಎಸ್.ಆರ್.ಟಿ.ಸಿ. ಯಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಎರಡು ವರ್ಷಗಳಲ್ಲಿ ಹೊಸದಾಗಿ ಖರೀದಿ ಮಾಡಿರುವ ಬಸ್ ಮತ್ತು ಇತರೆ ವಾಹನಗಳ ಸಂಖ್ಯೆ ಎಷ್ಟು ; ಪ್ರತಿ ಬಸ್ ಖರೀದಿಗೆ ಸರ್ಕಾರ ನೀಡುವ ಮೊತ್ತವೆಷ್ಟು ; (ಸಾಮಾನ್ಯ ಮತ್ತು ವೊಲ್ವೋ ಬಸ್ ಪ್ರತ್ಯೇಕ ವಿವರ ನೀಡುವುದು)

(ಇ) ಪ್ರಸ್ತುತ ಇಲಾಖೆಯಲ್ಲಿ ಸಿಬ್ಬಂದಿ (ಚಾಲಕ, ನಿರ್ವಾಹಕ) ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸಿಬ್ಬಂದಿ ನೇಮಕಾತಿ ಮಾಡಲು ಸರ್ಕಾರ ಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಖಾಸಗಿ ಬಸ್‌ಗಳ ಹಾವಳಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೭ (೨೬೦೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ನಿತ್ಯ ಬೆಂಗಳೂರು ನಗರಕ್ಕೆ ಪ್ರವೇಶ ಪಡೆಯುತ್ತಿರುವ ಖಾಸಗಿ ಬಸ್‌ಗಳ ಸಂಖ್ಯೆ ಎಷ್ಟು ;

(ಆ) ಸದರಿ ಬಸ್‌ಗಳ ಪ್ರವೇಶದಿಂದಾಗಿ ನಗರದಲ್ಲಿ ಸಂಚಾರ ದಟ್ಟಣೆ ಮತ್ತು ಮಾಲಿನ್ಯ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ನಗರಕ್ಕೆ ಪ್ರವೇಶ ನೀಡುವ ಖಾಸಗಿ ಬಸ್‌ಗಳನ್ನು ಬೆಂಗಳೂರು ನಗರದ ಹೊರಭಾಗದಲ್ಲೆ ತಡೆದು ಅವರಿಗೆ ಅಲ್ಲಿಯೇ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ;

(ಈ) ಬೆಂಗಳೂರು ನಗರ ಸ್ಯಾಟೆಲೈಟ್ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು ; ಅವು ಯಾವುವು ; ಯಾವ ಪ್ರದೇಶದಲ್ಲಿವೆ ;

(ಉ) ಸದರಿ ಸ್ಯಾಟೆಲೈಟ್ ಬಸ್ ನಿಲ್ದಾಣಗಳಲ್ಲಿ ಸರಿಯಾದ ಮೂಲ ಸೌಕರ್ಯಗಳು ಇಲ್ಲದಿರುವುದು ಸರ್ಕಾರ ಗಮನಿಸಿದೆಯೇ ; ಪ್ರತಿ ನಿತ್ಯ ಈ ಬಸ್ ನಿಲ್ದಾಣಗಳಿಗೆ ಬಂದು–ಹೋಗುವ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಊ) ಬೆಂಗಳೂರು ಬೈಯಪ್ಪನಹಳ್ಳಿ–ಎನ್‌ಜಿಎಫ್ ಹತ್ತಿರವಿರುವ ಸ್ಯಾಟೆಲೈಟ್ ನಿಲ್ದಾಣ ಕಾರ್ಯರೂಪಕ್ಕೆ ಬಂದಿದೆಯೇ ; ಹಾಗಿದ್ದರೆ ಇಲ್ಲಿ ಬಸ್‌ಗಳು ಯಾವ ಸ್ಥಳಗಳಿಗೆ ಯಾವ ಸಮಯಕ್ಕೆ ಬರುತ್ತವೆ ? (ವಿವರ ನೀಡುವುದು)

## ಸರ್ಕಾರಿ ಶಾಲಾ ಮಕ್ಕಳಿಗೆ ಸೈಕಲ್ ವಿತರಣೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫೮ (೨೫೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಕಳೆದ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ವಿತರಿಸಲಾದ ಸೈಕಲ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸೈಕಲ್‌ಗಳ ಗುತ್ತಿಗೆಯನ್ನು ಯಾವ ಸಂಸ್ಥೆಗೆ ನೀಡಲಾಗಿತ್ತು ; ಸೈಕಲ್‌ಗಳ ಗುಣಮಟ್ಟ ಕಾಪಾಡಲು ಸಂಸ್ಥೆಗೆ ಸರ್ಕಾರ ವಿಧಿಸಿದ ಷರತ್ತುಗಳೇನು ;

(ಇ) ವಿದ್ಯಾರ್ಥಿಗಳಿಗೆ ವಿತರಿಸಿರುವ ಸೈಕಲ್‌ಗಳು ಅತ್ಯಂತ ಕಳಪೆ ಮಟ್ಟದಾಗಿದ್ದು, ಇದರಲ್ಲಿ ಬಾರಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಸರ್ಕಾರ ಈ ಬಗ್ಗೆ ಕೈಗೊಂಡ ಶಿಸ್ತಿನ ಕ್ರಮಗಳೇನು ?

## ಸಿಬ್ಬಂದಿ ಕೊರತೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೯ (೨೫೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ತಾಲ್ಲೂಕು ಪಂಚಾಯತ್‌ಗಳಲ್ಲಿರುವ ಲಿಪಿಕ ವರ್ಗದ ನೌಕರರು ಗ್ರಾಮ ಪಂಚಾಯತ್ ಪಿ.ಡಿ.ಓ. ಕಾರ್ಯದರ್ಶಿ ಹಾಗೂ ಲೆಕ್ಕ ಸಹಾಯಕರ ಖಾಲಿಯಿರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ೧೦ ವರ್ಷ ಸೇವೆ ಸಲ್ಲಿಸಿದ ಗಣಕಯಂತ್ರ ನಿರ್ವಾಹಕರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈ ಹಿಂದೆ ದಿನಗೂಲಿ ನೌಕರರಾಗಿ ೧೦ ವರ್ಷ ಸೇವೆ ಪೂರ್ಣಗೊಳಿಸಿದ ಸಿಬ್ಬಂದಿಯವರಿಗೆ ಒದಗಿಸಿದಂತಹ ಸೇವಾ ಭದ್ರತೆಯನ್ನು ಇಲ್ಲಿಯವರೆಗೆ ಒದಗಿಸಲು ಕಾರಣವೇನು ;

(ಉ) ಗ್ರಾಮ ಪಂಚಾಯತ್‌ನ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು, ಹೊಸ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತ್ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೦ (೨೫೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹೊಸದಾಗಿ ರಚನೆಯಾದ ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಮಂಜೂರಾದ ಶುದ್ಧ ನೀರಿನ ಘಟಕಗಳು

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೧ (೨೫೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸರ್ಕಾರ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡಿದೆ ; (ತಾಲ್ಲೂಕುವಾರು ವಿಳಾಸ ಸಹಿತ ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಶುದ್ಧ ನೀರಿನ ಘಟಕಗಳು ಕಾರ್ಯಾರಂಭಗೊಂಡಿವೆ ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿ ಹಾಗೂ ಅವುಗಳ ಕಟ್ಟಡದ ಕುರಿತು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೨ (೨೬೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೦೩ ವರ್ಷಗಳಿಂದ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತಿಗಳೆಷ್ಟು ; ಹಾಗೂ ಹಾಲಿ ಇರುವ ಗ್ರಾಮ ಪಂಚಾಯತಿಗಳೆಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಈ ಜಿಲ್ಲೆಗಳ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ವ್ಯವಸ್ಥೆ ಇದೆಯೇ ; ಇಲ್ಲವಾದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತಿವೆ ; ಸ್ವಂತ ಕಟ್ಟಡ ನಿರ್ಮಾಣಕ್ಕೆ ಸೂಕ್ತ ಸ್ಥಳ ನಿಗಧಿಪಡಿಸಲಾಗಿದೆಯೇ ; ಅಂತಹವುಗಳ ಸಂಪೂರ್ಣ ಮಾಹಿತಿ ನೀಡುವುದು ;

(ಇ) ೨೦೧೬–೧೭ನೇ ಸಾಲಿನಲ್ಲಿ ಇಂತಹ ಗ್ರಾಮ ಪಂಚಾಯಿತಿಗಳ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಅನುದಾನ ಮೀಸಲಿಟ್ಟಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೩ (೨೬೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್ ಮೂಲಕ ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯಕ್ಕಾಗಿ ೨೦೧೬–೧೭ನೇ ಸಾಲಿನಲ್ಲಿ ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಎಷ್ಟು ಅನುದಾನವನ್ನು ಮೀಸಲಿಟ್ಟಿದೆ ; ಈವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ೨೦೧೫–೧೬ನೇ ಸಾಲಿನ ಕಾಮಗಾರಿ ಮುಗಿದು, ಪಾವತಿಗೆ ಬಾಕಿಯಿರುವ ಅನುದಾನ ಹಾಗೂ ಕಾಮಗಾರಿಗಳೆಷ್ಟು ; ಹಾಗೂ ಆ ಕಾಮಗಾರಿಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಸರ್ಕಾರಕ್ಕೆ ಅನುದಾನ ಬಿಡುಗಡೆ ಕೋರಿ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳು ಯಾವುವು ; ಹಾಲಿ ಈ ಪ್ರಸ್ತಾವನೆಗಳು ಯಾವ ಹಂತದಲ್ಲಿವೆ ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

## ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೪ (೨೬೦೦) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಸಣ್ಣ ಕೈಗಾರಿಕೆಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಇ) ಈ ಜಿಲ್ಲೆಗಳಲ್ಲಿ ನಡೆಯುತ್ತಿರುವ ಸಣ್ಣ ಕೈಗಾರಿಕೆಗಳಾವುವು ; ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಹೊಸ ಸಣ್ಣ ಕೈಗಾರಿಕೆಗಳು ಕಾರ್ಯಾರಂಭ ಮಾಡಿವೆ ; (ಸಂಪೂರ್ಣ ವಿವರ ನೀಡುವುದು)

(ಈ) ಇದರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಡಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ಯಾವ ಯಾವ ವಿಶೇಷ ಯೋಜನೆಗಳನ್ನು ನೀಡಿದೆ ? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿ ಗ್ರಂಥಾಲಯಗಳು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೫ (೨೫೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿ ಗ್ರಂಥಾಲಯುಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಮೂರು ಜಿಲ್ಲೆಗಳ ಗ್ರಾಮ ಪಂಚಾಯಿತ್ ಗ್ರಂಥಾಲಯಗಳನ್ನು ಕಳೆದ ಮೂರು ವರ್ಷಗಳಲ್ಲಿ ಜ್ಞಾನ ಕೇಂದ್ರಗಳಾಗಿ ಎಷ್ಟು ಗ್ರಂಥಾಲಯಗಳನ್ನು ಪರಿವರ್ತಿಸಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗೆ ಮೀಸಲಿಟ್ಟಿರುವ ಹಾಗೂ ಖರ್ಚು ಮಾಡಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬಿ.ಪಿ.ಎಲ್ ಹಾಗೂ ಬಿ.ಪಿ.ಎಲ್ ರಹಿತ ಸಾರ್ವಜನಿಕರಿಗೆ ಶೌಚಾಲಯ ನಿರ್ಮಿಸಲು ಕುರಿತು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೬ (೨೬೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಗಳ ವ್ಯಾಪ್ತಿಯಲ್ಲಿ (ಹುಬ್ಬಳಿ–ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿ ಹೊರತುಪಡಿಸಿ) ಬಿ.ಪಿ.ಎಲ್ ಹಾಗೂ ಬಿ.ಪಿ.ಎಲ್ ರಹಿತ ಸಾರ್ವಜನಿಕರಿಗೆ ಶೌಚಾಲಯ ನಿರ್ಮಿಸಲು ಯಾವ ಯೋಜನೆಯಲ್ಲಿ ಅವಕಾಶ ಕಲ್ಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಲ್ಪಿಸಿದ್ದಲ್ಲಿ, ಪ್ರತಿ ಮನೆಯ ಶೌಚಾಲಯಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎಷ್ಟು ಅನುದಾನ ನೀಡುತ್ತವೆ ; ಮತ್ತು ರಾಜ್ಯ ಸರ್ಕಾರದಿಂದ ೧–೦೪–೨೦೧೫ ರಿಂದ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಇನ್ನು ಎಷ್ಟು ಬಿ.ಪಿ.ಎಲ್ ಹಾಗೂ ಬಿ.ಪಿ.ಎಲ್ ರಹಿತ ಮನೆಗಳಿಗೆ ಶೌಚಾಲಯ ನಿರ್ಮಿಸುವುದು ಬಾಕಿ ಇದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಎಲ್ಲಾ ಮನೆಗಳಿಗೆ ಶೌಚಾಲಯ ನಿರ್ಮಿಸಲು ರಾಜ್ಯ ಸರ್ಕಾರದಿಂದ ಕೈಗೊಂಡಿರುವ ಯೋಜನೆಗಳೇನು : (ವಿವರ ನೀಡುವುದು)

## ಗ್ರಾಮೀಣ ಮಹಿಳೆ ಮತ್ತು ಮಕ್ಕಳ ರಕ್ಷಣೆ ಅಭಿವೃದ್ಧಿ ಪುನರ್ವಸತಿ ಕುರಿತು

**ಡಾ॥ ಜಯಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೪೬೭ (೨೬೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಅನುಷ್ಠಾನಗೊಳ್ಳುವ ಗ್ರಾಮೀಣ ಮಹಿಳೆ ಮತ್ತು ಮಕ್ಕಳ ರಕ್ಷಣೆ, ಅಭಿವೃದ್ಧಿ, ವಿದ್ಯಾಭಾಸ್ಯ, ಹಾಗೂ ಪುನರ್ವಸತಿಗಾಗಿ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುಕೂಲತೆಗಳು ಹಾಗೂ ಯೋಜನೆಗಳಾವುವು ;

(ಆ) ಗ್ರಾಮೀಣ ಹೆಣ್ಣು ಮಕ್ಕಳ ಸಂರಕ್ಷಣೆಗಾಗಿ ಹಾಕಿಕೊಂಡಿರುವ ಯೋಜನೆಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಮಹಿಳೆ ಮತ್ತು ಮಕ್ಕಳ ಕಳ್ಳಸಾಗಾಣಿಕೆ ಪ್ರಕರಣಗಳ ಕುರಿತು

**ಡಾ॥ ಜಯಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೪೬೮ (೨೬೨೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಸ್‌ಗಳ ಮೂಲಕ ಮಹಿಳೆ ಮತ್ತು ಮಕ್ಕಳ ಕಳ್ಳಸಾಗಾಣಿಕೆ ಪ್ರಕರಣಗಳು ನಡೆಯುತ್ತಿರುವ ಬಗ್ಗೆ ವರದಿಯಾಗಿದ್ದು, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಇದುವರೆಗೆ ಪತ್ತೆಯಾದ ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು ; (ಸದರಿ ಪ್ರಕರಣಗಳ ಸಂಪೂರ್ಣ ವಿವರ ನೀಡುವುದು)

(ಇ) ಈ ರೀತಿಯ ಪ್ರಕರಣಗಳನ್ನು ಶಾಶ್ವತವಾಗಿ ತಡೆಯಲು ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯತ್‌ಗಳಲ್ಲಿ 'ಮಹಿಳಾ ಕಾವಲು ಪಡೆ' ರಚನೆ ಕುರಿತು

**ಡಾ॥ ಜಯಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೪೬೯ (೨೬೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಪಂಚಾಯತ್ "ಮಹಿಳಾ ಕಾವಲು ಪಡೆ" ರಚನೆ ಆಗಿವೆಯೇ ; ಆಗಿದ್ದಲ್ಲಿ, ಅವು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ;

(ಆ) ರಾಜ್ಯದಲ್ಲಿ ಎಷ್ಟು " ಮಹಿಳಾ ಕಾವಲು ಪಡೆ" ರಚನೆಯಾಗಿವೆ ;

(ಇ) ಈ ಕಾವಲು ಪಡೆಗಳ ಮೂಲಕ ಎಷ್ಟು ಹೆಣ್ಣು ಮಕ್ಕಳನ್ನು ಇದುವರೆಗೆ ರಕ್ಷಿಸಲಾಗಿದೆ : (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಮರಳಿನ ಅಭಾವ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೦ (೨೫೩೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃತಕ ಮರಳಿನ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಹೊಸ ಮರಳು ನೀತಿಯನ್ನು ಜಾರಿಗೆ ತರಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ಮರಳು ತೆಗೆಯುವ ಜಾಗವನ್ನು ಗುರುತಿಸಲಾಗಿದೆ ; ಪ್ರತಿದಿನ ಎಷ್ಟು ಲೋಡು ಮರಳನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆ ; ಮರಳು ತೆಗೆಯುವ ಸ್ಥಳದಲ್ಲಿ ಸಿಸಿ ಕ್ಯಾಮರ ಅಳವಡಿಸಲಾಗಿದೆಯೇ ; ಸರ್ಕಾರ ಮರಳಿಗೆ ನಿಗಧಿಪಡಿಸಿರುವ ದರವೆಷ್ಟು ;

(ಈ) ಶಿವಮೊಗ್ಗ ನಗರದಲ್ಲಿ ಮರಳಿನ ಯಾರ್ಡ್ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಇದರಿಂದ ಪಾರದರ್ಶಕವಾಗಿ ಸಾರ್ವಜನಿಕರಿಗೆ ಮರಳು ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ?

## ಚಿಕ್ಕಮಗಳೂರು ಜಿಲ್ಲೆಗೆ ಬೇಡಿಕೆ ಇರುವ ಮರಳಿನ ಪ್ರಮಾಣ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೭೧ (೨೫೩೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಬೇಡಿಕೆಯಿರುವ ಮರಳಿನ ಪ್ರಮಾಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇಲಾಖೆಯಿಂದ ಪೂರೈಕೆ ಮಾಡಲು ಸಾಧ್ಯವಿರುವ ಮರಳಿನ ಪ್ರಮಾಣ ಎಷ್ಟು ;

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ಪ್ರಕರಣಗಳು ದಾಖಲಾಗಿವೆ ; ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೇಡಿಕೆಗೆ ತಕ್ಕಂತೆ ಮರಳು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

**ಶ್ರೀನಿವಾಸ್**
ಕಾರ್ಯದರ್ಶಿ (I/c)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0108/800 ಪ್ರತಿಗಳು/11–07–2016